ಸಂಪುಟ: 13 Volume | ಸಂಚಿಕೆ: 279 Issue | ಪುಟಗಳು 08 Pages | ಬುಧವಾರ 24 ಡಿಸೆಂಬರ್ 2025 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಶರೀರ ಕೃಷಿ ಭೂಮಿಯಾಗಿದೆ. ಮನಸ್ಸು ಕೃಷಿಯಾಗಿದೆ. ಪಾಪ ಪುಣ್ಯಗಳು ಬೀಜಗಳಾಗಿವೆ. ಯಾವ ಬೀಜವನ್ನು ಬಿತ್ತುತ್ತಾನೋ ಅದನ್ನು ಕೊಯ್ಯುತ್ತಾನೆ.

–ತುಳಸೀದಾಸರು

ಬಾಲಕಾರ್ಮಿಕ ಪದ್ಧತಿ ಅಪರಾಧ 6

ಮಕ್ಕಳ ಹಕ್ಕುಗಳ ರಕ್ಷಣೆ ಎಲ್ಲರ ಜವಾಬ್ದಾರಿ 7

ಪಟ್ಟದ್ದೇವರ ಬದುಕು ಬಸವತತ್ವ ಪ್ರಚಾರಕ್ಕೆ ಮುಡಿಪು 8

## ಬಿಜೆಪಿ ಶಾಸಕನಿಗೆ ಬಂಧನ ಭೀತಿ..!

**ಬೆಂಗಳೂರು:** ಬಿಜೆಪಿ ಶಾಸಕ ಭೈರಿ ಬಸವರಾಜ್‌ಗೆ ಬಂಧನ ಭೀತಿ ಎದುರಾಗಿದೆ. ರೌಡಿ ಶೀಟರ್ ಬಿಕ್ಲು ಶಿವ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಐಡಿಯ ಎಸ್‌ಐಟಿ, ಎಫ್‌ಐಆರ್‌ನಲ್ಲಿ ಹೆಸರಿಸಲಾದ ಬಿಜೆಪಿ ಶಾಸಕ ಭೈರತಿ ಬಸವರಾಜ್ ಅವರನ್ನು ಹೊರತುಪಡಿಸಿ ಇತರ 18 ಆರೋಪಿಗಳ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಿದೆ. ಸೋಮವಾರ ನಗರದ ನ್ಯಾಯಾಲಯದಲ್ಲಿ ಸಲ್ಲಿಸಲಾದ ಚಾರ್ಜ್ ಶೀಟ್ ನಲ್ಲಿ ಜುಲೈ 15 ರಂದು ನಡೆದ ವಿ ಜಿ ಶಿವಪ್ರಕಾಶ್ ಅಲಿಯಾಸ್ ಬಿಕ್ಲು ಶಿವ(40) ಹತ್ಯೆಗೆ ಸಂಬಂಧಿಸಿದ ಪ್ರಕರಣದಲ್ಲಿ ಕರ್ನಾಟಕ ಸಂಘಟಿತ ಅಪರಾಧ ನಿಯಂತ್ರಣ ಕಾಯ್ದೆ ಜಾರಿಗೊಳಿಸುವುದನ್ನು ಕೋರ್ಟ್ ರದ್ದುಗೊಳಿಸಿದ್ದ ಕೆಲ ದಿನಗಳ ನಂತರ ಚಾರ್ಜ್ ಶೀಟ್ ಸಲ್ಲಿಸಲಾಗಿದೆ.

## ಚ.ಚಿತ್ರೋತ್ಸವಕ್ಕೆ ಪ್ರಕಾಶ್‌ರಾಜ್ ಆಯ್ಕೆ

**ಬೆಂಗಳೂರು:** 17ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ರಾಯಭಾರಿಯಾಗಿ ನಟ ಪ್ರಕಾಶ್ ರಾಜ್‌ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಸಂಬಂಧ ನಡೆದ ಸಭೆಯಲ್ಲಿ



ಮಾತನಾಡಿದ ಅವರು, 17ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಜ.29 ರಿಂದ ಫೆ.6ರವರೆಗೆ ಬೆಂಗಳೂರಿನಲ್ಲಿ ನಡೆಯಲಿದ್ದು, ವಿಧಾನಸೌಧದ ಗ್ರ್ಯಾಂಡ್ ಸ್ಟೆಪ್ಸ್ ಮೇಲೆ ಉದ್ಘಾಟನೆಯಾಗಲಿದೆ. ನಾನೇ ಉದ್ಘಾಟನೆ ಮಾಡ್ತೀನಿ. ಈ ಚಲನಚಿತ್ರೋತ್ಸವಕ್ಕೆ ರಾಯಭಾರಿಯಾಗಿ ನಟ ಪ್ರಕಾಶ್ ರಾಜ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದ್ದಾರೆ.

## 160 ಸ್ಲಮ್ ಮನೆಗಳ ನೆಲಸಮ

**ಬೆಂಗಳೂರು:** ಶನಿವಾರ, ಗ್ರೇಟರ್ ಬೆಂಗಳೂರು ಅಥಾರಿಟಿ 160 ಸ್ಲಂ ಮನೆಗಳನ್ನು ನೆಲಸಮಗೊಳಿಸಿದ್ದು, 300 ಕುಟುಂಬಗಳು ನಿರಾಶ್ರಿತವಾಗಿ ನೆಲೆ ಕಳೆದುಕೊಂಡಿದ್ದಾರೆ.25 ದಿನದ ಹೆಣ್ಣು ಮಗುವಿನೊಂದಿಗೆ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆದ ತಾಯಿ ಅನ್ಸಾರಿ ಖಾತೂನ್ ಅಳುತ್ತಾ ತನ್ನ ಸ್ಥಿತಿ ಬಗ್ಗೆ ನೊಂದುಕೊಳ್ಳುತ್ತಿದ್ದಳು.ಖಾಸಗಿ ಕಂಪನಿಯಲ್ಲಿ ಮನೆಗೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿರುವ ವಿಧವೆ ಶಕೀನಾ, ಋತುಮತಿಯಾದ ಮಗಳಿಗೆ ಪ್ಯಾಡ್ ಬದಲಾಯಿಸಲು ಸ್ಥಳವಿಲ್ಲ ಎನ್ನುತ್ತಾರೆ. ತನ್ನ 12 ವರ್ಷದ ಮಗಳ ಸುರಕ್ಷತೆಯ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ.

## ದ್ವೇಷ ಭಾಷಣ, ರಾಜ್ಯಪಾಲರಿಗೆ ಪತ್ರ

**ವಿಜಯಪುರ:** ಜನತೆಯ ವಾಕ್ ಸ್ವಾತಂತ್ರ್ಯ ಹಾಗೂ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುವ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ವಿಧೇಯಕ–2025ನ್ನು ಅಂಗೀಕರಿಸಬಾರದೆಂದು ಕೋರಿ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ರಾಜ್ಯಪಾಲರಿಗೆ



ಪತ್ರ ಬರೆದಿದ್ದಾರೆ. ಈಗಾಗಲೇ ಭಾರತೀಯ ನ್ಯಾಯ ಸಂಹಿತೆಯಲ್ಲಿ ದ್ವೇಷ ಭಾಷಣ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಲು ಕಾನೂನು ಇರುವುದರಿಂದ, ಇದಕ್ಕೆ ಪ್ರತ್ಯೇಕ ವಿಧೇಯಕ ಅವಶ್ಯವಿರುವುದಿಲ್ಲ. ಆದರೆ ಕಾಂಗ್ರೆಸ್ ಸರ್ಕಾರ ಈ ವಿಧೇಯಕವನ್ನು ಬಳಸಿ ರಾಜಕೀಯ ವಿರೋಧಿಗಳನ್ನು ದಮನಿಸುವ ಕೆಲಸವನ್ನು ಮಾಡುತ್ತಿದೆ.

## ಗುಳೆ ಹೊರಟ ತಾಲೂಕು ಜನರ ಸಂಕಷ್ಟ

**ಹುಮನಾಬಾದ್:** ತಾಲೂಕಿನಲ್ಲಿ ಉದ್ಯೋಗಾವಕಾಶಗಳ ಕೊರತೆ ತೀವ್ರವಾಗಿದೆ. ಕೈಗೆ ಕೆಲಸ ಸಿಗದೆ ಅನೇಕ ಕುಟುಂಬಗಳು ಗುಳೆ ಹೊರಡುವ ಸ್ಥಿತಿಗೆ ತಲುಪಿವೆ. ಕೃಷಿ ಆಧಾರಿತ ಬದುಕಿನ ಮೇಲೆ ಅವಲಂಬಿತವಾಗಿರುವ ಗ್ರಾಮೀಣ ಜನತೆ ಈ ಬಾರಿ ಸಮರ್ಪಕ ಉದ್ಯೋಗ ಸಿಗದೆ ದಿನನಿತ್ಯದ ಜೀವನ ಸಾಗಿಸುವುದು ಕಷ್ಟಕರವಾಗಿದೆ.

ಬೆಳೆ ನಷ್ಟ, ಅತಿಯಾದ ಮಳೆಯ ಹಾಗೂ ಕೈಗಾರಿಕೆಗಳ ಅಭಾವದಿಂದ ಸ್ಥಳೀಯ ಮಟ್ಟದಲ್ಲಿ ಉದ್ಯೋಗ ಸೃಷ್ಟಿಯಾಗದಿರುವುದು ಪ್ರಮುಖ ಕಾರಣವಾಗಿದೆ. ಕೂಲಿ ಕೆಲಸದ ಮೇಲೆ ನಂಬಿಕೆ ಇಟ್ಟುಕೊಂಡಿದ್ದ ಕಾರ್ಮಿಕರಿಗೆ ವಾರಗಳ ಕಾಲ ಕೆಲಸ ಸಿಗದ ಪರಿಣಾಮ, ಅನಿವಾರ್ಯವಾಗಿ ಮಹಾರಾಷ್ಟ್ರ, ತೆಲಂಗಾಣ ಸೇರಿದಂತೆ ಇತರ ಜಿಲ್ಲೆಗಳತ್ತ ವಲಸೆ ಹೋಗುತ್ತಿದ್ದಾರೆ. ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಸಾಮಾಜಿಕ ಕಾರ್ಯಕರ್ತರು ಸರ್ಕಾರ ತಕ್ಷಣ ಗಮನ ಹರಿಸಿ, ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೆಚ್ಚು ದಿನಗಳ ಕೆಲಸ ನೀಡಬೇಕು, ಕೈಗಾರಿಕಾ ಘಟಕಗಳನ್ನು ಸ್ಥಾಪಿಸಿ ಸ್ಥಳೀಯರಿಗೆ ಉದ್ಯೋಗ ಕಲ್ಪಿಸಬೇಕು ಎಂದು ಒತ್ತಾಯಿಸಿದ್ದಾರೆ.

### ಗುಳೆಗೆ ಅಸಲು ಕಾರಣ..?

**ಗುಳೆ ಹೊರಡುವ ವೇಳೆ ಮಹಿಳೆಯರು, ಮಕ್ಕಳು ಸೇರಿದಂತೆ ಇಡೀ ಕುಟುಂಬಗಳು ತೊಂದರೆ ಅನುಭವಿಸುತ್ತಿದ್ದು, ಮಕ್ಕಳ ಶಿಕ್ಷಣಕ್ಕೂ ಅಡ್ಡಿಯಾಗುತ್ತಿದೆ. "ಇಲ್ಲಿ ಕೆಲಸ ಇಲ್ಲ, ಊಟಕ್ಕೆ ದಾರಿ ಇಲ್ಲ. ಹೊರ ಊರಿಗೆ ಹೋಗದೇ ಬೇರೆ ಮಾರ್ಗವಿಲ್ಲ" ಎಂದು ವಲಸೆ ಹೋಗುತ್ತಿರುವ ಕಾರ್ಮಿಕರು ನೋವು ತೋಡಿಕೊಂಡಿದ್ದಾರೆ.**

## ಕೃತಕ ಬುದ್ಧಿಮತ್ತೆ ಹೆಚ್ಚಿಸುವ ಗುರಿ

**ಹಂಪಿ (ವಿಜಯನಗರ):** ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸೈಂಟ್ ಎಐ ಲ್ಯಾಬ್ಸ್ –ವಿಜ್‌ಎಐಪಥವನ್ನು ಇಲ್ಲಿ ಉದ್ಘಾಟಿಸಿದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಕೃತಕ ಬುದ್ಧಿಮತ್ತೆ, ಎಸ್ಟಿಇಎಂ ಮತ್ತು ರೊಬೊಟಿಕ್ಸ್ ಶಿಕ್ಷಣದ ಪ್ರವೇಶವನ್ನು ಹೆಚ್ಚಿಸುವ ಗುರಿಯನ್ನು ಇದು ಹೊಂದಿದೆ. ಬಳ್ಳಾರಿ ಜಿಲ್ಲೆಯ ಹೊಸಪೇಟೆ ತಾಲೂಕಿನ ಬಾಲಕಿಯರ ಸರ್ಕಾರಿ ಶಾಲೆಯಲ್ಲಿ ಪ್ರಾಯೋಗಿಕ ಹಂತದಲ್ಲಿ, ಐದು ವಿಶ್ವ ದರ್ಜೆಯ ಎಐ, ಎಸ್ಟಿಇಎಂ (ವಿಜ್ಞಾನ, ತಂತ್ರಜ್ಞಾನ, ಎಂಜಿನಿಯರಿಂಗ್ ಮತ್ತು ಗಣಿತ) ಮತ್ತು ರೊಬೊಟಿಕ್ಸ್ ಪ್ರಯೋಗಾಲಯಗಳನ್ನು ಸರ್ಕಾರಿ ಶಾಲೆಗಳಲ್ಲಿ ಸ್ಥಾಪಿಸಲಾಗುತ್ತಿದೆ. ಪ್ರತಿಯೊಂದು ಪ್ರಯೋಗಾಲಯವು ಉನ್ನತ–ಕಾರ್ಯಕ್ಷಮತೆಯ ಕಂಪ್ಯೂಟರ್‌ಗಳು,



ಎಐ–ಸಿದ್ಧ ಸಾಫ್ಟ್‌ವೇರ್, ರೊಬೊಟಿಕ್ಸ್ ಕಿಟ್ಗಳು, ಐಒಟಿ ಸಾಧನಗಳು, ಸಂವೇದಕಗಳು ಮತ್ತು ಸುರಕ್ಷಿತ ಬ್ರಾಡ್ಬ್ಯಾಂಡ್ ಸಂಪರ್ಕವನ್ನು ಹೊಂದಿದೆ.

# ಹೈ ಮುಂದೆಯೇ ಅಹಿಂದಾಸ್ತ್ರ

## ರಾಹುಲ್ ಮೌನ | ಸಮಾವೇಶದ ಪೂರ್ವ ಸಭೆ | ವರಿಷ್ಟರಿಗೆ ಬಿಸಿ ತುಪ್ಪ | ಮತ್ತೆ ಹಗ್ಗ ಜಗ್ಗಾಟ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಹಗ್ಗ ಜಗ್ಗಾಟ ತಾರಕಕ್ಕೇರಿದೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆಶಿವಕುಮಾರ್ ಅವರು ಭಿನ್ನ ಹೇಳಿಕೆ ನೀಡುತ್ತಿದ್ದಾರೆ. ಏತನ್ಮಧ್ಯೆ ಮೈಸೂರ ಪ್ರಾಂತ್ಯದಲ್ಲೇ ಮತ್ತೆ ಅಹಿಂದ ಸಮಾವೇಶ ಮಾಡಲು ಸಿದ್ಧತೆ ನಡೆದಿರುವುದು ಹೈಕಮಾಂಡ್‌ಗೆ ಬಿಸಿ ತುಪ್ಪವಾಗಿ ಪರಿಣಮಿಸಿದೆ. ಅಹಿಂದ ನಡೆಸಲು ಪೂರ್ವಭಾವಿ ಸಭೆ ಏರ್ಪಡಿದ್ದು ಕುತೂಹಲ ಕೆರಳಿಸದೆ. ಸೆಪ್ಟಂಬರ್, ನವೆಂಬರ್ ಕ್ರಾಂತಿಗಳು ಮುಂದುವರಿದು ಇದೀಗ ಜನವರಿಯಲ್ಲಿ ಬದಲಾವಣೆ ನಿಶ್ಚಿತ ಎಂಬ ಹಂತಕ್ಕೆ ಬಂದು ತಲುಪಿದೆ. ಇಷ್ಟೆಲ್ಲಾ ಬೆಳವಣಿಗೆ ನಡೆದರೂ ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಮೌನ ಮಾತ್ರ ಕುತೂಹಲಕ್ಕೆ ಕಾರಣವಾಗಿದೆ.

**ಅಸಹಾಯಕತೆಯ ಮಾತು:** ರಾಜ್ಯದ ನಾಯಕತ್ವ ಬಿಕ್ಕಟ್ಟು ಹೈಕಮಾಂಡ್ ಹೈಕಮಾಂಡ್ ನಿದ್ದೆಗೆಡಿಸಿದೆ. ಈಗಾಗಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಅಸಹಾಯಕತೆಯ ಮಾತು ಇದಕ್ಕೆ ಸಾಕ್ಷಿಯಾಗಿದೆ. ಇಷ್ಟೆಲ್ಲಾ ಬೆಳವಣಿಗೆ ನಡೆಯುತ್ತಿದ್ದರೂ, ಸಂಖ್ಯಾಬಲ ಹೆಚ್ಚಾಗಿರುವ ಸರ್ಕಾರದಲ್ಲಿ ಸಿಎಂ ಗಾದಿಗಾಗಿ ಜಟಾಪಟಿ ನಡೆಯುತ್ತಿದ್ದರೂ ಎಐಸಿಸಿ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಮೌನವಹಿಸಿರುವುದು ಯಾಕೆ ಎಂಬ ಪ್ರಶ್ನೆ ಸಹಜವಾಗಿ ಕಾಡುತ್ತಿದೆ. ಆದರೆ ಉತ್ತರ ಅಸ್ಪಷ್ಟವಾಗಿದೆ.



### ಕುರ್ಚಿ ಕದನಕ್ಕೆ ಪ್ರಮುಖ ಕಾರಣ, ಪರಿಹಾರ..?

- ಪಾರ್ಟಿ ನಾಯಕರಿಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಎಚ್ಚರಿಕೆ
- ನಾಯಕತ್ವ ಬಗ್ಗೆ ಹೈಕಮಾಂಡ್ ತಲೆ ಹಾಕುವುದಿಲ್ಲ ಎನ್ನುವುದು ಚರ್ಚೆ
- ನಾಯಕತ್ವ ಗೊಂದಲ ಬಗೆಹರಿಸಬೇಕಾದವರು ಯಾರು ಎನ್ನುವ ಪ್ರಶ್ನೆ
- ಅಂದಿನ ಪವರ್ ಶೇರಿಂಗ್ ಫಾರ್ಮುಲಾದ ಬಗ್ಗೆ ನನಗೆ –ರಾಹುಲ್
- ರಾಜ್ಯದಲ್ಲಿ ನಾಯಕತ್ವದ ಗೊಂದಲ ಇಲ್ಲೇ ಪರಿಹರವಾಗಲಿ: ಪರಂ

### ರಾಗಾ ಮೌನಕ್ಕೆ ಕಾರಣಗಳೇನು?

**ಅಧಿಕಾರ ಹಂಚಿಕೆ ಬಗ್ಗೆ ರಾಹುಲ್ ಮುಂದೆ ಚರ್ಚೆಯನ್ನೇ ನಡೆಸಿಲ್ಲ ಎಂಬುದು ಇದಕ್ಕೆ ಕಾರಣ ಎನ್ನುತ್ತಿವೆ ಕಾಂಗ್ರೆಸ್ ಮೂಲಗಳು. ಸಿದ್ದರಾಮಯ್ಯ ಅಹಿಂದ ನಾಯಕರು. ಅಹಿಂದ ವರ್ಗ ಕಾಂಗ್ರೆಸ್‌ಗೆ ಬೆನ್ನೆಲುಬಾಗಿದೆ. ಸಿಎಂ ಸ್ಥಾನದಿಂದ ಅವರನ್ನು ಕೈಬಿಟ್ಟರೆ ಭವಿಷ್ಯ ಕಷ್ಟ. ಒಕ್ಕಲಿಗರಿಗೆ ಸಿಎಂ ಸ್ಥಾನ ಕೊಟ್ಟರೆ ಇಡೀ ಸಮುಯದಾಯದಿಂದ ಅಷ್ಟಾಗಿ ಪಕ್ಷಕ್ಕೆ ಹೆಚ್ಚು ಅನುಕೂಲ ಆಗುವುದಿಲ್ಲ.**

### ರಾಹುಲ್ ಅವರೇ ತೀರ್ಮಾನಿಸಲಿ

**ಸಿಎಂ, ಡಿಸಿಎಂ ಬಣಗಳ ನಡುವಿನ ಮಾತಿನ ಸಮರ ಪರಿಸ್ಥಿತಿ ಕೈಮೀರಿದರೂ ಗೊತ್ತಿದ್ದೂ ಗೊತ್ತಿಲ್ಲದಂತೆ ಅಂತರ ಕಾಯ್ದುಕೊಂಡಿರುವ ರಾಹುಲ್ ಗಾಂಧಿ ನಡೆಯ ಹಿಂದಿನ ಉದ್ದೇಶ ಏನು ಎಂಬ ಪ್ರಶ್ನೆಯೂ ಉದ್ಭವಿಸಿದೆ. ಈ ಬಗ್ಗೆ ರಾಹುಲ್ ಗಾಂಧಿಯೇ ತೀರ್ಮಾನ ಮಾಡಬೇಕೆಂದು ಗಟ್ಟಿ ಧ್ವನಿಯಲ್ಲಿ ಸಿಎಂ ಸಿದ್ದರಾಮಯ್ಯ ಹೇಳುತ್ತಿದ್ದಾರೆ.**

### ಸಿಎಂ ಕೈಬಿಟ್ಟರೆ, ಪರಿಣಾಮದ ಪತ್ರ

**ರಾಹುಲ್ ಗಾಂಧಿಗೆ ಮಾಜಿ ಸಚಿವ ಕೆ.ಎನ್. ರಾಜಣ್ಣ ಮತ್ತೊಂದು ಪತ್ರ ಬರೆದಿದ್ದು ಕುತೂಹಲ ಮೂಡಿಸಿದೆ. ಕಾಂಗ್ರೆಸ್‌ನ ಮತಕಳ್ಳತನ ಅಭಿಯಾನದ ಬಗ್ಗೆ ತಮ್ಮ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದ್ದು, ಸಿದ್ದರಾಮಯ್ಯರನ್ನು ಸಿಎಂ ಸ್ಥಾನದಿಂದ ಕೈಬಿಟ್ಟರೆ ಆಗುವ ಸಮಸ್ಯೆ ಬಗ್ಗೆ ಮನವರಿಕೆ ಮಾಡುವ ಪ್ರಯತ್ನ ಮಾಡಿದ್ದಾರೆ.**

### ಸಮಾವೇಶದ ಒಳಾರ್ಥ?

**ಯಾವಾಗ ನಾಯಕತ್ವ ಬದಲಾವಣೆ ಬರುವುದೋ ಆಗ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಬಣ ಅಹಿಂದ ಸಮಾವೇಶದ ಬಗ್ಗೆ ಪ್ರಚಾರ ಶುರುಮಾಡುತ್ತದೆ. ಈ ಹಿಂದೆಯೂ ಇದೇ ಅಸ್ತ್ರ ಪ್ರಯೋಗಿಸಿರುವ ಸಿಎಂ ಬಣ, ಅಹಿಂದ ನಾಯಕನಿಗೆ ಕಡೆಗಣಿಸಿದರೆ ರಾಜ್ಯದಲ್ಲಿ ಅರಾಜಕತೆ ಸೃಷ್ಟಿಯಾಗುತ್ತದೆ.**

## ಶಾಲಾ ಕೊಠಡಿ: 188.65 ಲಕ್ಷ ಅನುದಾನ

• ಮಲ್ಲಮ್ಮ ನುಡಿ ವಾರ್ತೆ ದಾಂಡೇಲಿ

ಉತ್ತಮ ಗುಣಮಟ್ಟದ ಶಿಕ್ಷಣಕ್ಕಾಗಿ ವಿದ್ಯಾರ್ಥಿಗಳಿಗೆ ಹೊಸ ಕೊಠಡಿಗಳ ಅವಶ್ಯವಿದ್ದು ಕೊಠಡಿಗಳ ನಿರ್ಮಾಣಕ್ಕೆ 1 ಕೋಟಿ 88 ಲಕ್ಷ 65 ಸಾವಿರ ಅನುದಾನ ಮಂಜೂರು ಮಾಡಲಾಗಿದೆ ಹಾಗೂ ದಾಂಡೇಲಿಯಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ ನೂತನವಾಗಿ 5 ಕೋಟಿ ಅನುದಾನ ಲೋಕೋಪಯೋಗಿ ಇಲಾಖೆಯಿಂದ ಮಂಜೂರಿ ಮಾಡಲಾಗಿದೆ ಎಂದು ಶಾಸಕ ದೇಶಪಾಂಡೆ ಹೇಳಿದರು.



ಇಂದು ತಮ್ಮ ಸ್ವಗೃಹದಲ್ಲಿ ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರು ಶಾಸಕ ಆರ್ ವಿ ದೇಶಪಾಂಡೆ ಅವರು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿ ನಮ್ಮ ಕ್ಷೇತ್ರದ ತಾಲೂಕು ಗಳಾದ ಹಳಿಯಾಳ ದಾಂಡೇಲಿ ಹಾಗೂ ಜೋಯಿಡಾ ಶಾಲೆಗಳಿಗೆ ಹೊಸ ಕೊಠಡಿಗಳ ನಿರ್ಮಾಣ ಹಾಗೂ ಜೋಯಿಡಾ ತಾಲೂಕಿನ ಅಣಶಿ ಗ್ರಾಮದಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ನಿರ್ಮಾಣಕ್ಕೆ ಕೈಗಾ ಅಣು ವಿದ್ಯುತ್ ನಿಗಮದಿಂದ ಸಿ ಎಸ್ ಆರ್ ಅನುದಾನದಲ್ಲಿ ಎರಡು ಕೋಟಿ 60 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ.

## ಜಿಪಂ ಯೋಜನಾ ನಿರ್ದೇಶಕ ಕಾಂಬಳೆ ಮನೆ, ಕಚೇರಿ ಮೇಲೆ ಲೋಕಾ ದಾಳಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲಾ ಪಂಚಾಯತಿ ಯೋಜನಾ ನಿರ್ದೇಶಕ ಎಸ್.ಎಂ. ಕಾಂಬಳೆ ಅವರ ನವನಗರದ ಜಿಲ್ಲಾಡಳಿತ ಭವನದಲ್ಲಿನ ಕಚೇರಿ ಹಾಗೂ ಗದಗ ಜಿಲ್ಲೆಯ ನರಗುಂದದಲ್ಲಿರುವ ಅವರ ನಿವಾಸದ ಮೇಲೆ ಲೋಕಾಯುಕ್ತ ಅಧಿಕಾರಿಗಳು ಮಂಗಳವಾರ ದಾಳಿ ನಡೆಸಿದ್ದಾರೆ. ಆದಾಯಕ್ಕಿಂತ ಅಧಿಕ ಆಸ್ತಿ ಸಂಪಾದನೆ ಆರೋಪದ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದ್ದು ಬಾಗಲಕೋಟೆಯ ಜಿಲ್ಲಾಡಳಿತ ಭವನದಲ್ಲಿರುವ ಅವರ ಕಚೇರಿ ಹಾಗೂ ಗದಗ ಜಿಲ್ಲೆಯ ನರಗುಂದ ಪಟ್ಟಣದಲ್ಲಿರುವ ಅವರ ನಿವಾಸದ ಮೇಲೆ ಏಕಕಾಲದಲ್ಲಿ ದಾಳಿ ನಡೆಸಲಾಗಿದೆ. ಲೋಕಾಯುಕ್ತ ಡಿವೈಎಸ್ಪಿ ಪಿ. ಸುರೇಶ್ ರೆಡ್ಡಿ ನೇತೃತ್ವದ ತಂಡ ಈ ದಾಳಿ ನಡೆಸಿದ್ದು, ಕಚೇರಿ ಮತ್ತು ಮನೆಗಳಲ್ಲಿ ದಾಖಲೆಗಳ ಶೋಧ ಕಾರ್ಯದಲ್ಲಿ ತೊಡಗಿದೆ. ಆಸ್ತಿ ದಾಖಲೆಗಳು, ಬ್ಯಾಂಕ್ ವ್ಯವಹಾರಗಳು, ಹೂಡಿಕೆಗಳಿಗೆ ಸಂಬಂಧಿಸಿದ ಕಡತಗಳು ಹಾಗೂ ಇತರೆ ಮಹತ್ವದ ದಾಖಲೆಗಳನ್ನು ಲೋಕಾಯುಕ್ತ ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ ಎಂದು ತಿಳಿದುಬಂದಿದೆ. ಪ್ರಾಥಮಿಕ ಮಾಹಿತಿಯಂತೆ, ಎಸ್.ಎಂ. ಕಾಂಬಳೆ ಅವರು ತಮ್ಮ ಸೇವಾವಧಿಯಲ್ಲಿ ಹೊಂದಿರುವ ಆಸ್ತಿಗಳು ಅವರ ಆದಾಯ ಮೂಲಗಳಿಗೆ ಹೋಲಿಸಿದರೆ ಹೆಚ್ಚು ಎನ್ನುವ ದೂರಿನ ಮೇರೆಗೆ ಲೋಕಾಯುಕ್ತ ದಾಳಿ ನಡೆದಿದೆ. ದಾಳಿಯ ವೇಳೆ ಸಿಕ್ಕಿರುವ ದಾಖಲೆಗಳು ಮತ್ತು ಮಾಹಿತಿ ಆಧರಿಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ. ಪರಿಶೀಲನೆ ಮಧ್ಯಾಹ್ನದವರೆಗೂ ಮುಂದುವರಿದಿದ್ದು, ಸಂಪೂರ್ಣ ಪರಿಶೀಲನೆ ಬಳಿಕ ಲೋಕಾಯುಕ್ತ ಇಲಾಖೆ ಅಧಿಕೃತ ಮಾಹಿತಿ ಪ್ರಕಟಿಸುವ ನಿರೀಕ್ಷೆಯಿದೆ.



## ಟ್ರಂಪ್‌ಗೆ ಸಿಎಂ ಸಲಹೆಗಾರರಾಗಲಿ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಮಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಹೊಸ ತೆರಿಗೆ ಹಾಕುವುದರಲ್ಲಿ ನಿಪುಣರು. ಅವರು ಹೋಗಿ ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸಲಹೆಗಾರರಾಗಿ ಸೇವೆ ಸಲ್ಲಿಸಿದರೆ ಉತ್ತಮ. ಇದರಿಂದ ಟ್ರಂಪ್ಗೆ ಸಹಾಯವಾಗಬಹುದು ಮತ್ತು ಕರ್ನಾಟಕ ರಾಜ್ಯಕ್ಕೂ ಒಳ್ಳೆಯದಾಗಬಹುದು ಎಂದು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಗ್ಗೆ ಲೇವಡಿ ಮಾಡಿದ್ದಾರೆ.



ಚಿಕ್ಕಮಗಳೂರಿನ ಬಾಳೆಹೊನ್ನೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತೆರಿಗೆ ವಿಚಾರದಲ್ಲಿ ಅಮೆರಿಕ ಅಧ್ಯಕ್ಷ ಟ್ರಂಪ್ ಸಾಕಷ್ಟು ಹೋರಾಟ ಮಾಡುತ್ತಿದ್ದಾರೆ. ಸರಿಯಾದ ಪರಿಣತರು ಸಿಗದೇ ನರಳುತ್ತಿದ್ದಾರೆ. ಸಿದ್ದರಾಮಯ್ಯನವರ ಆರ್ಥಿಕ ಜ್ಞಾನಕ್ಕೆ ಕರ್ನಾಟಕ ತುಂಬಾ ಚಿಕ್ಕದು. ಟ್ರಂಪ್ ಇಡೀ ಜಗತ್ತಿಗೆ ಏನೋ ಮಾಡಲು ಹೊರಟಿದ್ದಾರೆ. ಸಿದ್ದರಾಮಯ್ಯ ಟ್ರಂಪ್ ಜೊತೆಗಿದ್ದರೆ ಎಲ್ಲರಿಗೂ ಒಳ್ಳೆಯದಾಗುತ್ತದೆ' ಎಂದಿದ್ದಾರೆ. ಮುಂದಿನ ಬಜೆಟ್ ನ್ನು ನಾನೇ ಮಂಡಿಸುತ್ತೇನೆ ಎಂದು ಸಿದ್ದರಾಮಯ್ಯ ಹೇಳಿದರೆ, ಬೇರೆಯವರು ದೇವರ ಬಳಿ ಮಾತನಾಡಿದ್ದೇನೆ ಎನ್ನುತ್ತಾರೆ. ಇನ್ನು 45 ದಿನಗಳಲ್ಲಿ ಏನಾಗುತ್ತೋ ಕಾದು ನೋಡೋಣ. ಯಾರು ಮುಖ್ಯಮಂತ್ರಿಯಾಗುತ್ತಾರೆ ಎಂಬುದು ನಮಗೆ ಮುಖ್ಯವಲ್ಲ. ನನಗೆ ಬೇಕಾಗಿರುವುದು ರಾಜ್ಯದ ಅಭಿವೃದ್ಧಿ ಎಂದು ತಿಳಿಸಿದ್ದಾರೆ.

ಬಸವರಾಜೇಶ್ವರಿ ಸಮೂಹ ಶಿಕ್ಷಣ ಸಂಸ್ಥೆಗಳು
ಕಿಷ್ಕಿಂದ ವಿಶ್ವವಿದ್ಯಾಲಯ
KISHKINDA UNIVERSITY
Advancing Knowledge Transforming Lives
BASAVARAJESHWARI GROUP OF INSTITUTIONS ESTD : 1981 T.E.H.R.D TRUST®
ಮೌಂಟ್ ವ್ಯೂ ಕ್ಯಾಂಪಸ್, ಜಿ.ಪಿ.ನಂ. 735, ಹಾಗಲೂರು ಗ್ರಾಮ,
ಸಿಂಧಿಗೇರಿ ಹತ್ತಿರ, ಬಳ್ಳಾರಿ-ಸಿರುಗುಪ್ಪ ರಸ್ತೆ, ತಾ: ಸಿರುಗುಪ್ಪ - 583120. ಬಳ್ಳಾರಿ ಜಿಲ್ಲೆ. ಕರ್ನಾಟಕ
M: 6364482226 | email : info@kishkindauniversity.edu.in | www.kishkindauniversity.edu.in

ಮೊದಲನೇ ವಾರ್ಷಿಕ ಘಟಿಕೋತ್ಸವ

ಕಿಷ್ಕಿಂದ ವಿಶ್ವವಿದ್ಯಾಲಯದ ಕುಲಪತಿಗಳು, ಆಡಳಿತ ಮಂಡಳಿಯ ಸದಸ್ಯರು,
ವ್ಯವಸ್ಥಾಪಕ ಮಂಡಳಿಯ ಸದಸ್ಯರು, ವಿದ್ಯಾ ವಿಷಯಕ ಪರಿಷತ್ ಸದಸ್ಯರು
ಮೊದಲನೇ ವಾರ್ಷಿಕ ಘಟಿಕೋತ್ಸವಕ್ಕೆ ತಮ್ಮನ್ನು ಹೃತ್ಪೂರ್ವಕವಾಗಿ ಆಹ್ವಾನಿಸುತ್ತೇವೆ.
ಬುಧವಾರ 24ನೇ ಡಿಸೆಂಬರ್ 2025, ಮಧ್ಯಾಹ್ನ 12.30ಕ್ಕೆ ವಿಶ್ವವಿದ್ಯಾಲಯದ ಆವರಣ

ಮುಖ್ಯ ಅತಿಥಿಗಳು
ಶ್ರೀ ಥಾವರ್ ಚಂದ್ ಗೆಹ್ಲೋಟ್
ಕರ್ನಾಟಕ ರಾಜ್ಯದ ಗೌರವಾನ್ವಿತ ರಾಜ್ಯಪಾಲರು

ಉಪಸ್ಥಿತಿ
ಡಾ. ಎಂ. ಸಿ. ಸುಧಾಕರ್
ಸನ್ಮಾನ್ಯ ಉನ್ನತ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ

ಗೌರವಾನ್ವಿತ ಅತಿಥಿಗಳು
ಶ್ರೀ ಜಗದೀಶ್ ಶೆಟ್ಟರ್
ಮಾಜಿ ಮುಖ್ಯಮಂತ್ರಿಗಳು ಮತ್ತು ಲೋಕ ಸಭಾ ಸದಸ್ಯರು, ಬೆಳಗಾವಿ ಕ್ಷೇತ್ರ.

ಉಪಸ್ಥಿತಿ
ಶ್ರೀ ಬಿ. ಎಂ. ನಾಗರಾಜ
ವಿಧಾನ ಸಭಾ ಸದಸ್ಯರು, ಸಿರುಗುಪ್ಪ

ಗೌರವಾನ್ವಿತ ಅತಿಥಿಗಳು
ಶ್ರೀ ಬಾದರ್ಲಿ ಹಂಪನಗೌಡ
ವಿಧಾನ ಸಭಾ ಸದಸ್ಯರು, ಸಿಂಧನೂರು

ಗೌರವ ಡಾಕ್ಟರೇಟ್ ಪ್ರದಾನ
ಪರಮ ಪೂಜ್ಯ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು
ಸುವರ್ಣಗಿರಿ ವಿರಕ್ತ ಮಠ, ವಳಬಳ್ಳಾರಿ

ಪ್ರಾಯೋಜಕ ಸಂಸ್ಥೆ ಟಿ.ಇ.ಹೆಚ್.ಆರ್.ಡಿ. ಟ್ರಸ್ಟ್ ಸದಸ್ಯರು
ಡಾ. ಎಸ್. ಜೆ. ವಿ. ಮಹಿಪಾಲ್, ಅಧ್ಯಕ್ಷರು, ಟಿ.ಇ.ಹೆಚ್.ಆರ್.ಡಿ. ಟ್ರಸ್ಟ್ (ರಿ), ಬಳ್ಳಾರಿ
ಡಾ. ಯಶವಂತ್ ಭೂಪಾಲ್, ಕುಲಾಧಿಪತಿಗಳು, ಕಿಷ್ಕಿಂದ ವಿಶ್ವವಿದ್ಯಾಲಯ
ಶ್ರೀ ಎಸ್. ಬಿ. ಅಶೋಕ್ ಭೂಪಾಲ್, ಟ್ರಸ್ಟಿ, ಟಿ.ಇ.ಹೆಚ್.ಆರ್.ಡಿ. ಟ್ರಸ್ಟ್ (ರಿ)
ಡಾ. ವಿ. ಜೆ. ಭರತ್, ಟ್ರಸ್ಟಿ, ಟಿ.ಇ.ಹೆಚ್.ಆರ್.ಡಿ. ಟ್ರಸ್ಟ್ (ರಿ)
ಶ್ರೀ ವೈ. ಜೆ. ಪೃಥ್ವಿರಾಜ್ ಭೂಪಾಲ್, ಸಹ ಕುಲಾಧಿಪತಿಗಳು, ಕಿಷ್ಕಿಂದ ವಿಶ್ವವಿದ್ಯಾಲಯ
ಶ್ರೀ ಅಮರ ರಾಜ್ ಭೂಪಾಲ್, ಟ್ರಸ್ಟಿ, ಟಿ.ಇ.ಹೆಚ್.ಆರ್.ಡಿ. ಟ್ರಸ್ಟ್ (ರಿ)

ವಿಶ್ವವಿದ್ಯಾಲಯದ ಅಧಿಕಾರಿಗಳು
ಡಾ. ಟಿ. ಎನ್. ನಾಗಭೂಷಣ, ಕುಲಪತಿಗಳು
ಡಾ. ಯು. ಈರಣ್ಣ, ಕುಲಸಚಿವರು
ಡಾ. ರಾಜು ಜಾಡರ, ಕುಲಸಚಿವರು, (ಮೌಲ್ಯಮಾಪನ)

**ಕಾಂಗ್ರೆಸ್ ಪಕ್ಷವು ಮಹಾತ್ಮಾ ಗಾಂಧೀಜಿಯವರನ್ನು ದೈಹಿಕವಾಗಿ ಅಲ್ಲದಿದ್ದರೂ, ಸೈದ್ಧಾಂತಿಕವಾಗಿ ಕೊಲೆ ಮಾಡಿದೆ: ಸಂಸದ ಬಸವರಾಜ ಬೊಮ್ಮಾಯಿ**

# 29 ರಂದು ಬೊಮ್ಮಗೊಂಡೇಶ್ವರ ದೇವಸ್ಥಾನ ಭೂಮಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಚಿದ್ರಿಯಲ್ಲಿನಡೆಯಲಿರುವ ಮಹಾತ್ಮಬೊಮ್ಮಗೊಂಡೇಶ್ವರನೂತನ ದೇವಸ್ಥಾನಕಟ್ಟಡನಿರ್ಮಾಣಭೂಮಿ ಪೂಜೆಕಾರ್ಯಕ್ರಮದಭಿತ್ತಿಪತ್ರವನ್ನು ನಗರದ ಬೊಮ್ಮಗೊಂಡೇಶ್ವರ ವೃತ್ತದಲ್ಲಿ ಸೋಮವಾರ ಬಿಡುಗಡೆ ಮಾಡಲಾಯಿತು.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ ಭಿತ್ತಿ ಪತ್ರ ಬಿಡುಗಡೆ ಮಾಡಿದರು.

ನಗರದ ಚಿದ್ರಿ ಮಹಾತ್ಮ ಬೊಮ್ಮಗೊಂಡೇಶ್ವರಜನ್ಮಸ್ಥಳವಾಗಿದೆ. ಹೀಗಾಗಿ ಚಿದ್ರಿಯ ಪವಿತ್ರ ಸ್ಥಳದಲ್ಲಿ ಮಹಾತ್ಮ ಬೊಮ್ಮಗೊಂಡೇಶ್ವರ ಜನ್ಮಭೂಮಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಅವರ ದೇವಸ್ಥಾನ ನಿರ್ಮಿಸಲಾಗುತ್ತಿದೆ. ಡಿ. 29ಕ್ಕೆ ದೇವಸ್ಥಾನ ಕಟ್ಟಡದ ಭೂಮಿ ಪೂಜೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ರಾಜ್ಯ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷರೂ ಆದ ಟ್ರಸ್ಟ್ ಅಧ್ಯಕ್ಷ ಪಂಡಿತರಾವ್ ಚಿದ್ರಿ ತಿಳಿಸಿದರು.

ರಾಜ್ಯ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ. ರೇವಣ್ಣ, ಪೌರಾಡಳಿತ ಸಚಿವ ರಹೀಂಖಾನ್, ಜನಪ್ರತಿನಿಧಿಗಳು, ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಗೊಂಡ (ಕುರುಬ) ಸಮಾಜದವರು ಹಾಗೂ ಸಾರ್ವಜನಿರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ನಿವೃತ್ತ ಕೃಷಿ ಅಧಿಕಾರಿ ಎಂ.ಎಸ್. ಕಟಗಿ, ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ಅಧ್ಯಕ್ಷ ಸಂತೋಷ್ ಜೋಳದಾಪಕೆ ಮಾತನಾಡಿದರು.

ಪ್ರಮುಖರಾದ ಭಯ್ಯಾ ಸಾಹೇಬ ಇಂದಾಪುರ, ವಿದ್ಯಾಸಾಗರ, ಶ್ರೀಕಾಂತ, ಶ್ರಾವಣ ಘುಲೇಕರ್, ಪಂಡಿತ ಎಂ.ಎಸ್, ರಮೇಶ ಮಾಶೆಟ್ಟಿ, ದತ್ತು ಮೇತ್ರೆ, ಸಂಗಪ್ಪ ಚಿದ್ರಿ, ಹಣಮಂತ ಮಲ್ಕಾಪುರೆ, ಸಚಿನ್ ಮಲ್ಕಾಪುರೆ, ಹಣ್ಮು ಪಾಜಿ, ಲೋಕೇಶ ಮರ್ಜಾಪುರ, ತುಕಾರಾಮ ಚಿದ್ರಿ, ರಾಜು ಜೇಯಮ್, ವಿಶ್ವನಾಥ ಮೇತ್ರೆ, ವಿಜಯ ವಡ್ಡಿ, ರಮೇಶ್ ಮರ್ಜಾಪುರ, ವೆಂಕಟ ಚಿದ್ರಿ, ಶಿವಕುಮಾರ ವಗ್ಗೆ, ಬಸು ವಗ್ಗೆ, ಅನಿಲ್ ವಗ್ಗೆ, ನಾಗೇಶ ವಗ್ಗೆ, ರಾಜಶೇಖರ ವಗ್ಗೆ, ಆನಂದ ಕಮಠಾಣ, ಪವನ್ ಶ್ರೀಮಂಡಲ್

> ಮಹಾತ್ಮ ಬೊಮ್ಮಗೊಂಡೇಶ್ವರ ದೇವಸ್ಥಾನ ಕಟ್ಟಡ ನಿರ್ಮಾಣ ಭೂಮಿ ಪೂಜೆ ಕಾರ್ಯಕ್ರಮದ ಭಿತ್ತಿಪತ್ರವನ್ನು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ ಬೀದರ್‌ನಲ್ಲಿ ಬಿಡುಗಡೆ ಮಾಡಿದರು

# ಬಿ.ವಿ.ಭೂಮರಡ್ಡಿ ಕಾಲೇಜಿನಲ್ಲಿ ಉದ್ಯಮಶೀಲತೆ ಜಾಗೃತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ ಬೀದರ: ವಿದ್ಯಾರ್ಥಿಗಳಲ್ಲಿ ಉದ್ಯಮಶೀಲತೆ ಹಾಗೂ ಸ್ವಯಂ ಉದ್ಯೋಗದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಬಿ.ವಿ.ಭೂಮರಡ್ಡಿ ಕಾಲೇಜು, ಬೀದರದಲ್ಲಿ ಉದ್ಯಮಶೀಲತಾ ಜಾಗೃತಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೀದರ ವಾಣಿಜ್ಯ ಮಂಡಳಿಯ ಉಪಾಧ್ಯಕ್ಷರಾದ ಡಾ. ರಾಜನಿಶ್ ವಾಳಿ ಅವರು ವಹಿಸಿ, ಉದ್ಯಮಶೀಲತೆ ಆರ್ಥಿಕ ಅಭಿವೃದ್ಧಿಗೆ ಅತ್ಯಂತ ಅಗತ್ಯವಾಗಿದ್ದು, ವಿದ್ಯಾರ್ಥಿಗಳು ಉದ್ಯೋಗ ಹುಡುಕುವವರಾಗದೇ ಉದ್ಯೋಗ ಸೃಷ್ಟಿಕರ್ತರಾಗಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಬೀದರ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಯ ಕಾರ್ಯದರ್ಶಿ ಶ್ರೀ ವೀರೇಂದ್ರಶಾಸ್ತ್ರಿ ಅವರು ಯುವ ಉದ್ಯಮಿಗಳಿಗೆ ಕೈಗಾರಿಕಾ ಸಂಸ್ಥೆಗಳ ಬೆಂಬಲದ ಮಹತ್ವವನ್ನು ವಿವರಿಸಿದರು.

ಸಂಪನ್ಮೂಲವ್ಯಕ್ತಿಯಾಗಿ ಮಾತನಾಡಿದ ಎಂಎ–ಂಇ–ಡಿಎ– ಹುಬ್ಬಳ್ಳಿಯ ಉಪನಿರ್ದೇಶಕರಾದ ಶ್ರೀ ಡೋಣೆ ಕಿರಣ್ ಕುಮಾರ್ ಅವರು ಎಂಎ–ಂಇ ಯೋಜನೆಗಳು, ಸರ್ಕಾರಿ ಸೌಲಭ್ಯಗಳು, ಹಣಕಾಸು ನೆರವು ಹಾಗೂ ಉದ್ಯಮ ಆರಂಭಿಸಲು ಲಭ್ಯವಿರುವ ಅವಕಾಶಗಳ ಕುರಿತು ವಿವರವಾದ ಮಾಹಿತಿ ನೀಡಿದರು. ಕಾಲೇಜಿನ ಪ್ರಾಂಶುಪಾಲರಾದ ಡಾ. ದೀಪಾ ರಾಗಾ ಅವರು ಮಾತನಾಡಿ, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಉದ್ಯಮಶೀಲ ಚಿಂತನೆ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮಕ್ಕೆ ಡಾ. ಮಲ್ಲಿಕಾರ್ಜುನ ಕೋಟೆ ಅವರು ಸ್ವಾಗತ ಭಾಷಣ ಮಾಡಿದರು. ಕಾರ್ಯಕ್ರಮವನ್ನು ಡಾ. ಸೂರ್ಯವಂಶಿ ಪೂಜಾ ಅವರು ಸುಗಮವಾಗಿ ನಿರ್ವಹಿಸಿದರು. ಕಾರ್ಯಕ್ರಮದ ಕೊನೆಯಲ್ಲಿ ಡಾ. ಲಕ್ಷ್ಮೀ ವಿಶ್ವನಾಥ್ ಅವರು ವಂದನಾ ಸಮರ್ಪಿಸಿ, ಗಣ್ಯರು, ಆಯೋಜಕರು ಹಾಗೂ ಭಾಗವಹಿಸಿದ ಎಲ್ಲರಿಗೂ ಧನ್ಯವಾದ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಅಧ್ಯಾಪಕರು, ಸಿಬ್ಬಂದಿ ಹಾಗೂ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿಯಾದರು.

# ಜಿಲ್ಲಾಮಟ್ಟದ ಅಬಾಕಸ್ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ



ಮಲ್ಲಮ್ಮ ನುಡಿ ವಾರ್ತೆ ಬೀದರ: ಅಬಾಕಸ್‌ನಿಂದ ಬುದ್ಧಿಶಕ್ತಿ ಹಾಗೂ ಏಕಾಗ್ರತೆ ವೃದ್ಧಿಸುತ್ತದೆ ಎಂದು ವಾಲಿ ಗ್ರೂಪ್ ಆಫ್ ಕಂಪನಿಯ ನಿರ್ದೇಶಕ ಅಸ್‌ಶುಲ್ ರಜನೀಶ್ ವಾಲಿ ಹೇಳಿದರು.

ಜಿನಿಯಸ್ ಅಬಾಕಸ್ ತರಬೇತಿ ಕೇಂದ್ರದ ವತಿಯಿಂದ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಈಚೆಗೆ ನಡೆದ 9ನೇ ಜಿಲ್ಲಾಮಟ್ಟದ ಅಬಾಕಸ್ ಸ್ಪರ್ಧೆಯ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಬಾಕಸ್ ಗಣಿತ ತರಬೇತಿಯಷ್ಟೇ ಅಲ್ಲ; ಈ ತರಬೇತಿ ಪಡೆದ ಮಕ್ಕಳು ಎಲ್ಲದರಲ್ಲೂ ಚುರುಕಾಗಿರುತ್ತಾರೆ ಎಂದು ತಿಳಿಸಿದರು.

ಅಬಾಕಸ್ ತ್ವರಿತವಾಗಿ ಲೆಕ್ಕ ಮಾಡಲು, ತಕ್ಷಣ ಯೋಚಿಸಲು ನೆರವಾಗುತ್ತದೆ. ಮಕ್ಕಳ ಆತ್ಮವಿಶ್ವಾಸ ಇಮ್ಮಡಿಗೊಳಿಸುತ್ತದೆ ಎಂದು ಗ್ಲೋಬಲ್ ಸೈನಿಕ ಅಕಾಡೆಮಿಯ ಅಧ್ಯಕ್ಷ ಶರಣಪ್ಪ ಸಿಕೇನಪುರ ಹೇಳಿದರು.

ಅಬಾಕಸ್ ಮಕ್ಕಳಲ್ಲಿ ವೇಗ, ನಿಖರತೆ ಹಾಗೂ ಶಿಸ್ತು ಹೆಚ್ಚಿಸುವ ವೇದಿಕೆಯಾಗಿದೆ ಎಂದು ಸಿದ್ಧಾರೂಢ ಮಠದ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ತಿಳಿಸಿದರು.

ಪ್ರವೀಣಕುಮಾರ ಸ್ವಾಮಿ ಅವರು ಅಬಾಕಸ್ ತರಬೇತಿ ಮೂಲಕ ವಿದ್ಯಾರ್ಥಿಗಳಿಗೆ ಸಾಧನೆಗೆ ಪ್ರೇರಣೆ ನೀಡುತ್ತಿದ್ದಾರೆ ಎಂದು ರೋಟರಿ ಕಲ್ಯಾಣ ಝೋನ್ ಸಹಾಯಕ ಗವರ್ನರ್ ಹಾವಶೆಟ್ಟಿ ಪಾಟೀಲ ಹೇಳಿದರು.

ಅಬಾಕಸ್ ಶೈಕ್ಷಣಿಕ ಮಾರ್ಗದರ್ಶನ ಸ್ತಂಭವಾಗಿದೆ. ಮಕ್ಕಳ ಭವಿಷ್ಯ ಉಜ್ವಲಗೊಳಿಸಲು ನೆರವಾಗುತ್ತದೆ ಎಂದು ಜಿನಿಯಸ್ ಅಬಾಕಸ್ ಸೆಂಟರ್ ಮುಖ್ಯಸ್ಥ ಪ್ರವೀಣಕುಮಾರ ಸ್ವಾಮಿ ತಿಳಿಸಿದರು.

ಅಶ್ವಿನಿ ಕುದುರೆ ಪಬ್ಲಿಕ್ ಶಾಲೆಯ ಅಧ್ಯಕ್ಷ ಶಂಭುಲಿಂಗ ಕುದುರೆ, ಭಾಲ್ಕಿಯ ಭಾರತ ಪಬ್ಲಿಕ್ ಶಾಲೆ ಮುಖ್ಯಶಿಕ್ಷಕಿ ಚಿತ್ರಾ ದೇಶಪಾಂಡೆ, ಇನ್ಫಿನಿಟಿ ಶಾಲೆಯ ಮುಖ್ಯಶಿಕ್ಷಕಿ ಮೇಲ್ವಿನ್ ಬಾಬಿ ಮರ್ಜಿ ಮಾತನಾಡಿದರು.

ವಿವಿಧ ವಿಭಾಗಗಳ ಅಬಾಕಸ್ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಗಳಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಸಂಧ್ಯಾರಾಣಿ ಪಾಟೀಲ, ಲಕ್ಷ್ಮಿ ಮೂಲಗೆ, ರೂಪಾ ಪಾಟೀಲ, ಶಿವಲಿಂಗಯ್ಯ ಸ್ವಾಮಿ, ಜಿನಿಯಸ್ ಪಬ್ಲಿಕ್ ಶಾಲೆಯ ಮುಖ್ಯಶಿಕ್ಷಕಿ ಮುಕ್ತಾಂಜಲಿ ಹಿರೇಮಠ ಮತ್ತಿತರರು

# ಮೂರು ದಿನಗಳ ಕಾನೂನು ಕಾರ್ಯಗಾರ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಸಿಂಧನೂರು:

ನಿರಂತರ ಪರಿಶ್ರಮ, ಶ್ರದ್ಧೆ, ಪ್ರಾಮಾಣಿಕತೆಗಳನ್ನು ಆಲವಡಿಸಿಕೊಂಡರೆ ವಕೀಲರು ತಮ್ಮ ವೃತ್ತಿಯಲ್ಲಿ ಯಶಸ್ವಿಯಾಗಲು ಸಾಧ್ಯ ಎಂದು ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಲಕ್ಷ್ಮಿಕಾಂತ ಮಿಸ್ಕಿನ್ ಹೇಳಿದರು.

ಅವರು ಶುಕ್ರವಾರ ವಕೀಲರ ಸಂಘದ ಹಾಗೂ ಕರ್ನಾಟಕ ರಾಜ್ಯ ವಕೀಲರ ಪರಿಷತ್ ಸಂಯುಕ್ತಾಶ್ರಯದಲ್ಲಿ ಮೂರು ದಿನಗಳ ಕಾನೂನು ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು. ವಕೀಲರಿಗೆ ಕಾಲಕಾಲಕ್ಕೆ ತರಬೇತಿ ಅವಶ್ಯಕ. ಹೊಸ ಕಾನೂನುಗಳು, ಕಾನೂನುಗಳಲ್ಲಿನ ತಿದ್ದುಪಡಿಗಳನ್ನು ತಿಳಿದುಕೊಳ್ಳಲು ಕಾರ್ಯಾಗಾರಗಳು ನೇರವಾಗುತ್ತವೆ. ಇತ್ತಿಚಿಗೆ ಕೇಂದ್ರ ಸರ್ಕಾರ ಮೂರು ಹೊಸ ಕಾನೂನುಗಳನ್ನು ಜಾರಿಗೆ ತಂದಿದ್ದು ಈ ಕಾರ್ಯಾಗಾರದಲ್ಲಿ ಅವುಗಳ ಕುರಿತು ಅನುಭವಿ ಉಪನ್ಯಾಸಕರಿಂದ ಉಪನ್ಯಾಸಗಳು ನಡೆಯುತ್ತವೆ. ಅದರ ಸದುಪಯೋಗವನ್ನು ವಿಶೇಷವಾಗಿ ಕಿರಿಯ ವಕೀಲರು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ವಕೀಲರು ಹಣಕ್ಕಾಗಿ ತಮ್ಮ ವೃತ್ತಿಯನ್ನು ಮಾಡದೇ ಸೇವೆಗೆಂದು ಮಾಡಿದರೆ ಆತ್ಮತೃಪ್ತಿ ಸಿಗುತ್ತದೆ. ನೊಂದು-ಬೆಂದ ಕಕ್ಷಿದಾರರ ತಮ್ಮ ಹಲವಾರು ಸಮಸ್ಯೆಗಳನ್ನು ಹಾಗೂ ಲಕ್ಷಗಟ್ಟಲೇ ಬೆಲೆಬಾಳುವ ಆಸ್ತಿಗಳ ವ್ಯಾಜ್ಯಗಳನ್ನು ವಕೀಲರ ಕೈಗೆ ನೀಡಿರುತ್ತಾರೆ. ಅನ್ಯಾಯಕ್ಕೊಳಗಾದವರಿಗೆ, ವಿಧವೆಯರಿಗೆ ನ್ಯಾಯ ದೊರೆಸಿಕೊಡಲು ವಕೀಲರು ಮುಂದಾಗಬೇಕು ಯಾವುದೇ ಕಾರಣಕ್ಕೂ ವಕೀಲರ ತಪ್ಪಿನಿಂದ ಕಕ್ಷಿದಾರರಿಗೆ ಅನ್ಯಾಯವಾಗಬಾರದು ಎಂದು ಕಿವಿ ಮಾತು ಹೇಳಿದರು.

ಗುಳೇದಗುಡ್ಡದ ಹಿರಿಯ ವಕೀಲ ಜಿ.ಐ. ಮೇಟಿ ಮಾತನಾಡಿ ವಕೀಲರಿಗೆ ಪ್ರಸ್ತುತ ಕಾನೂನುಗಳ ಬಗ್ಗೆ ಜ್ಞಾನ, ಭಾಷೆಯಲ್ಲಿ ಹಿಡಿತ ಮತ್ತು ಪ್ರಾವಿಣ್ಯತೆ ಹಾಗೂ ತಮ್ಮ ವಾದವನ್ನು ದೈರ್ಯದಿಂದ, ಸಮರ್ಥವಾಗಿ ನ್ಯಾಯಾಲಯಗಳಲ್ಲಿ ಮಂಡಿಸುವ ಕಲೆಯನ್ನು ಕರಗತ ಮಾಡಿಕೊಳ್ಳಬೇಕು. ಮೊದಲು ವಕೀಲರು ವಿವಿಧ ನ್ಯಾಯಾಲಯದ ತೀರ್ಪುಗಳಿಗೆ, ಹೊಸ ಹೊಸ ಕಾನೂನುಗಳ ಮಾಹಿತಿ ಪಡೆಯಲು ಗ್ರಂಥಾಲಯಕ್ಕೆ ಹೋಗಬೇಕಿತ್ತು. ಆದರಿಗ ಅಂಗೈಯಲ್ಲಿಯೆ ಅಂ-ದರೆ ಮೋಬೈಲ್‌ನಲ್ಲಿ ಎಲ್ಲವೂ ದೊರೆಯುತ್ತವೆ. ಸಾಮಾಜಿಕ ಜಾಲತಾಣಗಳನ್ನು ಸಮರ್ಥವಾಗಿ ಬಳಸಿಕೊಂಡರೆ ಉತ್ತಮ ವಕೀಲರಾಗಲು ಸಾಧ್ಯ ಎಂದರು.

ವಕೀಲರ ಸಂಘದ ಅಧ್ಯಕ್ಷ ಎನ್. ರಾಮನಗೌಡ ಮಾತನಾಡಿ ಮೂರು ದಿನಗಳ ಕಾಲ ನಡೆಯುವ ಕಾನೂನು ಕಾರ್ಯಾಗಾರದಲ್ಲಿ ಕಿರಿಯ ವಕೀಲರು ತಪ್ಪದೇ ಭಾಗವಹಿಸಬೇಕು. ಹಿರಿಯ ವಕೀಳರ ಕಛೇರಿಗಳಿಗೆ ಹೋಗದೆ ಅವರ ಅನುಮತಿ ಪಡೆದು ಕಾರ್ಯಾಗಾರದಲ್ಲಿ ನಡೆಯುವ ಹೊಸ ಕಾನೂನುಗಳ ಸಂಪೂರ್ಣ ಮಾಹಿತಿಯನ್ನು ಪಡೆಯಬೇಕು. ತಮಗೇನಾದರೂ ಸಂದೇಹಗಳಿದ್ದರೆ ಉಪನ್ಯಾಸಕರು ನಡೆಯುವ ಸಂವಾದದಲ್ಲಿ ಭಾಗವಹಿಸಿ ಉತ್ತರಗಳನ್ನು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಸನ್ಮಾನ: ಇದೇ ವೇಳೆ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಲಕ್ಷ್ಮಿಕಾಂತ ಮಿಸ್ಕಿನ್, ಉಪನ್ಯಾಸಕ ಜಿ.ಐ. ಮೇಟಿ, ಹಿರಿಯ ವಕೀಲರಾದ ಟಿ. ಮಲ್ಲಯ್ಯ ಹಾಗೂ ಪ್ರಹ್ಲಾದ ಗುಡಿ ಅವರನ್ನು ಸನ್ಮಾಸಿಸಲಾಯಿತು.

ನಂತರ ಹಿರಿಯ ವಕೀಲ ಜಿ.ಐ.ಮೇಟಿ 'ಭಾರತೀಯ ನಾಗರಿಕ ಸಂರಕ್ಷಾ ಸಂಹಿತೆ-2023' ಕುರಿತು ಉಪನ್ಯಾಸ ನೀಡಿದರು. ನಂತರ ವಕೀಲರೊಂದಿಗೆ ಸಂವಾದ ನಡೆಸಿದರು. ವಕೀಲರ ಸಂಘದ ಕಾರ್ಯದರ್ಶಿ ಶಿವಕುಮಾರ ಬ್ಯೆರಿದೊರಿ, ಖಜಾಂಚಿ ಕೆ. ಶರಣಬಸವರ ಉಮಲೂಟಿ ಉಪಸ್ಥಿತರಿದ್ದರು. ಕಾರ್ಯಾಗಾರದಲ್ಲಿ ಹಿರಿಯ ವಕೀಲರಾದ ಹೆಚ್. ರಾಮನಗೌಡ, ಅಬ್ದುಲ್ ಗನಿಸಾಬ, ಜಿ.ಎಸ್. ಆರ್.ಕೆ. ರೆಡ್ಡಿ, ಕೆ. ವೀರನಗೌಡ, ಬಸವಂತರಾವಗೌಡ, ಎಂ.ಅಮರೇಗೌಡ, ವಿ.ಬಿ.ರೆಡ್ಡಿ, ಈರೇಶ ಇಲ್ಲೂರು, ಕೆ.ಭೀಮನಗೌಡ, ಬಸವರಾಜ ಗುಡದೂರು, ಶೇಖರಪ್ಪ ದುಮತಿ, ಜೆ.ರಾಯಪ್ಪ, ಅಜಯಕುಮಾರ ಗದ್ರಟಗಿ ಮತ್ತಿತರ ವಕೀಲರು ಇದ್ದರು. ಕೆ.ಅಮರೇಶ ಸಾಸಲಮರಿ ಮತ್ತು ಹೇಮಲತಾ ಜೋಳದರಾಶಿ ನಿರೂಪಿಸಿದರು.

## ಹಿಂದುಳಿದ ವರ್ಗದ ಘಟಕದ ಜಿಲ್ಲಾಧ್ಯಕರಾಗಿ ಏವಾರೆಡ್ಡಿ ತಂದೆ ಗಂಗಾರೆಡ್ಡಿ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ ಬೀದರ: ಜನ ಜಾಗೃತಿ ವೇದಿಕೆ (ರಿ) ವತಿಯಿಂದ ಹಿಂದುಳಿದ ವರ್ಗಗಳ ಬೀದರ್ ಘಟಕದ ನೂತನ ಜಿಲ್ಲಾಧ್ಯಕ್ಷರಾಗಿ ಏವಾರೆಡ್ಡಿ ತಂದೆ ಗಂಗಾರೆಡ್ಡಿ ಅವರನ್ನು ನೇಮಕ ಮಾಡಿ ಕಲ್ಯಾಣ ಕರ್ನಾಟಕದ ವಿಭಾಗಿಯ ಸಮಿತಿ ಅಧ್ಯಕ್ಷರಾದ ಅಭಿಲಾಷ್ ಸಿಂದೆ ನಾಗೊರಾ ಹಾಗೂ ಜಿಲ್ಲಾಧ್ಯಕ್ಷರಾದ ತುಕಾರಾಮ್ ಬೌದ್ಧ"ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ, ಜಿಲ್ಲಾ ಘಟಕ ಸಭೆಯು ಡಿ.22 ರಂದು ಜಿಲ್ಲಾ ಅತಿಥಿ ಗೃಹದಲ್ಲಿ ಸಭೆ ನಡೆಸಿ ಹಿಂದುಳೀದ ವರ್ಗದ ಬೀದರ್ ಘಟಕ ಅಧ್ಯಕ್ಷರನ್ನು ನೇಮಕ ಮಾಡಿ ಆಯ್ಕೆ ಪತ್ರ ವಿತರಿಸಿದರು, ಇದೆ ಸಂದರ್ಭದಲ್ಲಿ ವಿಭಾಗೀಯ ಪ್ರಧಾನ ಕಾರ್ಯದರ್ಶಿಯಾದ ಸಂಜುಕುಮಾರ ಖರ್ಗೆ ಹಾಗೂ ಅನೇಕ ಸದಸ್ಯರು ಸಭೆಯಲ್ಲಿ ಭಾಗವಹಿಸಿದ್ದರು,

## ಕ್ಲಸ್ಟರ್ ತರಬೇತಿ ಕಾರ್ಯಕ್ರಮ




ಯಾದಗಿರಿ : ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು ಹಾಗೂ ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ಯಾದಗಿರಿ ಹಾಗೂ ಸಹಕಾರ ಇಲಾಖೆ ಯಾದಗಿರಿ ನೀರು ಬಳಕೆದಾರರ ಸಹಕಾರ ಸಂಘದ ಹುಣಸಗಿ ಇವರುಗಳ ಸಂಯುಕ್ತಾಕ್ಷರದಲ್ಲಿ ಕ್ಲಸ್ಟರ್ ತರಬೇತಿ ಕಾರ್ಯಕ್ರಮ ಜರುಗಿಸಲಾಯಿತು ಸಸಿಗೆ ನೀರು ಹಾಕುವುದರ ಮುಖಾಂತರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಸಹಕಾರ ಸಂಘ ಸಂಸ್ಥೆಗಳು ಇಂದು ಜೀವನಾಡಿ ಎಲ್ಲಾ ಆಯಾಮಗಳನ್ನು ಆವರಿಸಿಕೊಂಡಿವೆ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಮತ್ತು ಜಿಲ್ಲಾ ಸಹಕಾರ ಯೂನಿಯನ್ ಎಲ್ಲಾ ಸಹಕಾರ ಸಂಘಗಳ ಅಧ್ಯಕ್ಷರು ನಿರ್ದೇಶಕರು ಮತ್ತು ಸಿಬ್ಬಂದಿಗೆ ಹೊಸ ಹೊಸ ವಿಚಾರಗಳು ಮತ್ತು ತಿದ್ದುಪಡಿಗಳ ಬಗ್ಗೆ ತರಬೇತಿಯನ್ನು ಜಿಲ್ಲಾ ಸಹಕಾರ ಯೂನಿಯನ್ ಮೂಲಕ ಸತತವಾಗಿ ಕ್ಲಸ್ಟರ್ ಜಿಲ್ಲಾಮಟ್ಟದ ತರಬೇತಿಗಳನ್ನು ನೀಡುತ್ತಾ ಬಂದಿರುತ್ತದೆ ಎಂದು ಆರ್ ಎಂ ಕಾಜಿ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಬಸವೇಶ್ವರ ಮಹಾಮಂಡಲ ಮಾತನಾಡಿದರು

ನೀರು ನಿರ್ವಹಣೆ ಕುರಿತು ಹಾಗೂ ನೀರು ಬಳಕೆದಾರರ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಣಾಧಿಕಾರಿಗಳ ಕರ್ತವ್ಯ ಜವಾಬ್ದಾರಿ ಕುರಿತು ಮಹೇಶ್ ಶಿವಾಜಿ ವಿಶೇಷವಾಗಿ ಉಪನ್ಯಾಸ ನೀಡಿದರು ಮಹಾಮಂಡಳ ಮತ್ತು ಯೂನಿಯನ್ ಕಾರ್ಯ ಚಟುವಟಿಕೆ ಕುರಿತು ಹಾಗೂ ಕಾರ್ಯಕ್ರಮದ ನಿರೂಪಣೆ ಶ್ರೀಮತಿ ಸುಜಾತ ಮಠ ಜಿಲ್ಲಾ ಸಹಕಾರ ಶಿಕ್ಷಕರು ಯಾದಗಿರಿ ಇವರು ನೆರವೇರಿಸಿದರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವರಾಜ ಸೇವಟಿ ವಹಿಸಿದ್ದರು ಕಾರ್ಯಕ್ರಮದ ವಂದನಾರ್ಪಣೆಯನ್ನು ಮಲ್ಲನಗೌಡ ಮಾಳನೂರ ನೆರವೇರಿಸಿದರು ರಮೇಶ್ ಹಾಗೂ ಹುಣಸಗಿ ತಾಲೂಕಿನ ಮುಖ್ಯ ಕಾರಣಾಧಿಕಾರಿಗಳು ಹಾಗೂ ಸಂಘದ ಸದಸ್ಯರು ಭಾಗವಹಿಸಿದ್ದರು

## ಜೇಸ್ಕಂ ಅಧಿಕಾರಿಗಳ ವಿರುದ್ಧ ಗಂಭೀರ ಆರೋಪ ಅಮಾನತಿಗೆ ರಾಜ್ಯಪಾಲರಿಗೆ ಮನವಿ




ಮಲ್ಲಮ್ಮ ನುಡಿ ವಾರ್ತೆ

ಬೀದರ್: ಜಿಲ್ಲೆಯ ಜೇಸ್ಕಂನ ಅಧೀಕ್ಷಕ ಅಭಿಯಂತರ ವೀರಭದ್ರಪ್ಪಾ ಶಾಲಿಮನಿ ಹಾಗೂ ಕಾರ್ಯನಿರ್ವಾಹಕ ಅಭಿಯಂತರ ರಮೇಶ ಪಾಟೀಲ್ ಅವರ ವಿರುದ್ಧ ಗಂಭೀರ ಅಕ್ರಮ ಆರೋಪಗಳನ್ನು ಮಾಡುತ್ತಾ, ಅವರನ್ನು ತಕ್ಷಣವೇ ಸೇವೆಯಿಂದ ಅಮಾನತುಗೊಳಿಸಬೇಕೆಂದು ಕರ್ನಾಟಕ ಪ್ರಜಾ ಶಕ್ತಿ ಸಮಿತಿ (ರಿ) ಬೀದರ್ ಜಿಲ್ಲಾ ಘಟಕವು ಕರ್ನಾಟಕ ರಾಜ್ಯಪಾಲರಾದ ಮಾನ್ಯ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಮನವಿ ಪತ್ರ ಸಲ್ಲಿಸಿದೆ.

ಮನವಿ ಪತ್ರದಲ್ಲಿ, ಬೀದರ್ ತಾಲೂಕಿನ ಖಾಸಗಿ ಲೇಔಟ್‌ಗಳ ಮಾಲೀಕರು ವಿದ್ಯುತ್ ಕಂಬಗಳ ಅಳವಡಿಕೆಗಾಗಿ ಚಲನ್ ಮುಖಾಂತರ ಹಣ ಪಾವತಿಸಿದರೂ, ಸಂಬಂಧಿಸಿದ ಅಧಿಕಾರಿಗಳು ಖಾಸಗಿ ಕಂಬಗಳು ಹಾಗೂ ಟ್ರಾನ್ಸ್ಫಾರ್ಮರ್‌ಗಳನ್ನು ಅಳವಡಿಸದೇ ಸರ್ಕಾರದ ಜೇಸ್ಕಂ ಕಂಬಗಳು ಮತ್ತು ಟಿ.ಸಿ.ಗಳನ್ನು ಬಳಸಿಕೊಂಡು ಸರ್ಕಾರದ ಆಸ್ತಿಯನ್ನು ದುರ್ಬಳಕೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಇದರಿಂದ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗಿದೆ ಎಂದು ಸಮಿತಿ ತಿಳಿಸಿದೆ.

ಈ ಸಂಬಂಧ ಈಗಾಗಲೇ ದಿನಾಂಕ 07-08-2025 ರಂದು ಕಾವೇರಿ ಭವನ ಬೆಂಗಳೂರುದಲ್ಲಿನ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಹಾಗೂ 07-11-2025 ರಂದು ಜೇಸ್ಕಂ ನಿಗಮ ಕಚೇರಿ ಕಲಬುರಗಿಗೆ ದೂರು ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. ಇದರಿಂದ ಸಂಬಂಧಿಸಿದ ಅಧಿಕಾರಿಗಳೂ ಅಕ್ರಮದಲ್ಲಿ ಭಾಗಿಯಾಗಿರುವ ಶಂಕೆ ವ್ಯಕ್ತವಾಗುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಆದಿತ್ಯ ನೌಬಾದೆ ಲೇಔಟ್ ಸೇರಿದಂತೆ ಬೀದರ್‌ನ ಅನೇಕ ಖಾಸಗಿ ಲೇಔಟ್‌ಗಳಲ್ಲಿ ಇದೇ ರೀತಿಯ ಅಕ್ರಮಗಳು ನಡೆದಿವೆ ಎಂದು ಆರೋಪಿಸಲಾಗಿದ್ದು, ಈ ಕುರಿತು ವಿಶೇಷ ತನಿಖಾ ತಂಡ ರಚಿಸಿ ಸಂಪೂರ್ಣ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಲಾಗಿದೆ.

ಬೀದರ್ ಜಿಲ್ಲೆಯ ಅಧೀಕ್ಷಕ ಅಭಿಯಂತರ ಹಾಗೂ ಕಾರ್ಯನಿರ್ವಾಹಕ ಅಭಿಯಂತರರು ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ತನಿಖೆ ಪೂರ್ಣಗೊಳ್ಳುವವರೆಗೆ ಅವರನ್ನು ತಕ್ಷಣ ಅಮಾನತುಗೊಳಿಸಬೇಕೆಂದು ಕರ್ನಾಟಕ ಪ್ರಜಾ ಶಕ್ತಿ ಸಮಿತಿ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ಕರ್ನಾಟಕ ಪ್ರಜಾ ಶಕ್ತಿ ಸಮಿತಿ ನಗರ ಘಟಕ ಅಧ್ಯಕ್ಷ ವಿನೋದ ಶಿಂಧೆ, ಜಿಲ್ಲಾ ಉಪಾಧ್ಯಕ್ಷ ಮಹೇಂದ್ರಕುಮಾರ ಹೊಸಮನಿ, ಜಿಲ್ಲಾ ಅಧ್ಯಕ್ಷ ಸಾಯಿ ಶಿಂಧೆ, ತಾಲೂಕು ಅಧ್ಯಕ್ಷ ಗುರು ನೇಮತಾಬಾದ, ವಲಯ ಅಧ್ಯಕ್ಷ ರಾಜಕುಮಾರ ಗುಮ್ಮೆ, ಜಿಲ್ಲಾ ಖಜಾಂಚಿ ರಾಜಕುಮಾರ ಹೊನ್ನಿಕೇರಿ, ಯುವ ಮುಖಂಡ ಶಿವಕುಮಾರ, ವಿದ್ಯಾರ್ಥಿ ಘಟಕದ ಅಧ್ಯಕ್ಷ ಆಕಾಶ ತ್ರಿಮುಖೆ ಹಾಗೂ ದಕ್ಷಿಣ ಕ್ಷೇತ್ರ ಅಧ್ಯಕ್ಷ ಧನರಾಜ ಮೇತ್ರೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸೊಯಾಬೀನ, ಉದ್ದು ಖರೀದಿ ದಿನಾಂಕವನ್ನು ವಿಸ್ತರಿಸಲು ಡಿಸಿ ಅವರಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ರೈತರ ಶೇ 40% ರಷ್ಟು ಮಾತ್ರ ಪಿ.ಕೆ.ಪಿ.ಎಸ್ ಮುಖಾಂತರ ಸೋಯಾಬಿನ ಉದ್ದು ಖರೀದಿ ಮಾಡಲಾಗಿದೆ. ಉಳಿದ ಶೇ 60 ರಮ್ಮ ನೊಂದಣಿ ಮಾಡಿದ ರೈತರ ಸೊಯಾಬೀನ ಖರೀದಿ ಮಾಡುವುದು ಬಾಕಿ ಉಳಿದಿದೆ. ಆದ್ದಕಾರಣ ಸೊಯಾಬೀನ, ಉದ್ದು ಖರೀದಿ ದಿನಾಂಕ ಜನವರಿ ತಿಂಗಳ ವರೆಗೆ ವಿಸ್ತರಣೆ ಮಾಡಲು ಮನವಿ, ಕಾರಣ ಇಲ್ಲಿವರೆಗೆ ಸೊಯಾಬೀನ ನೊಂದಣಿ ಮಾಡಿದ ರೈತರ ಮನವಿ ಮೆರೆಗೆ ತಾವುಗಳು ದಯಮಾಡಿ ದಿನಾಂಕವನ್ನು ವಿಸ್ತರಿಸಬೇಕಾಗಿ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಬರೆದ ಮನವಿ ಪತ್ರದಲ್ಲಿ ಗುರುನಾಥ ವಡ್ಡೆ ಪಿಕೆಪಿಎಸ್ ಮುಧೋಳ (ಬಿ) ಕಮಲನಗರ ಅವರು ತಿಳಿಸಿದ್ದಾರೆ.

ಮಾನ್ಯ ಜಿಲ್ಲಾಧಿಕಾರಿಗಳು ಈ ಸಂಬಂಧ ಮುತರ್ಜಿ ವಹಿಸಿ ದಿನಾಂಕವನ್ನು ವಿಸ್ತರಣೆ ಮಾಡಿದರೆ ಜಿಲ್ಲೆಯ ಸಾವಿರಾರು ರೈತರಿಗೆ ನ್ಯಾಯ ಕೊಡಿಸಿ ಅವರ ಕಣ್ಣೀರು ಒರೆಸಿದಂತೆ ಆಗುತ್ತದೆ ಎಂದು ಜಿಲ್ಲೆಯ ರೈತರ ತಮ್ಮ ಅಳಲನ್ನು ತೋರಿ ಕೊಂಡಿದ್ದಾರೆ. ರೈತರಿಗೆ ನ್ಯಾಯ ಕೊಡಿಸಿ ಅವರ ಕಣ್ಣೀರು ಒರೆಸಿದಂತೆ ಆಗುತ್ತದೆ ಎಂದು ಜಿಲ್ಲೆಯ ರೈತರ ತಮ್ಮ ಅಳಲನ್ನು ತೋರಿ ಕೊಂಡಿದ್ದಾರೆ.

**ಸಕಾಲಕ್ಕೆ ಖರೀದಿ ಕಾರ್ಯ ಯಾಕೆ ಮುಗದ್ದಿಲ್ಲಾ**

**ವಿಳಂಬಕ್ಕೆ ಖರೀದಿ ಕೇಂದ್ರಕ್ಕೆ ಸಕಾಲದಲ್ಲ ಖಾಲಿ ಚಿಲ, ಬಾರ-ಕೋಡ, ಹಾಗೂ ಲಾರಿ ವ್ಯವಸ್ಥೆ ಇಲ್ಲದ ಕಾರಣ ಇಲ್ಲ ವರೆಗೆ ಖರೀದಿ ಮಾಡಿಕೊಳ್ಳಲು ಸಾಧ್ಯ ವಾಗಿಲ್ಲ, ಸಂಬಂಧ ಪಟ್ಟ ಅಧಿಕಾರಿಗಳು ಸರಿಯಾಗಿ ಕೆಲಸ ಮಾಡದ್ದೆ ಇರುವುದೇ ಇಂದು ರೈತರಿಗೆ ದೊಡ್ಡ ಸಮಸ್ಯೆ ಯಾಗಿದೆ.**

## ದೇಶದ ಅಭಿವೃದ್ಧಿಯಲ್ಲಿ ಮಹಿಳೆಯ ಪಾತ್ರ ಅತ್ಯಂತ ವಿಶೇಷ.



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ : ದೇಶದ ಅಭಿವೃದ್ಧಿಯಲ್ಲಿ ಮಹಿಳೆಯ ಪಾತ್ರ ಅತ್ಯಂತ ವಿಶಿಷ್ಟವಾದದ್ದು ಹಾಗೂ ತೊಟ್ಟಿಲು ತೂಗುವ ಕೈ ಸಮಯ ಬಂದರೆ ದೇಶವನ್ನು ಆಳಿತು ಎಂಬ ಮಾತನ್ನು ಮರೆಯುವಂತಿಲ್ಲ.

ಎಂದು ಸಂಪನ್ಮೂಲ ವ್ಯಕ್ತಿಯಾದ ರೇವಣಸಿದ್ದ ಜಾಡರ್ ಅಭಿಪ್ರಾಯಪಟ್ಟರು. ತಾಲೂಕಿನ ತಳವಾಡ ಕೆ ಗ್ರಾಮದಲ್ಲಿ ರಾಷ್ಟ್ರೀಯ ಜೀವನೋಪಾಯ ಚಟುವಟಿಕೆ (ಎನ್ ಆರ್ ಎಲ್ ಎಂ) ವತಿಯಿಂದ, ಸಂಜೀವಿನಿ ಒಕ್ಕೂಟದ ನೇತೃತ್ವದಲ್ಲಿ ಲಿಂಗತ್ವ ಆಧಾರಿತ ದೌರ್ಜನ್ಯ ವಿರುದ್ಧ ಅಭಿಯಾನದ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ರೇವಣಸಿದ್ದ ಜಾಡರ್ ಮಾತನಾಡಿ ಸಮಾಜ ದೇಶ ಅಭಿವೃದ್ಧಿಯಲ್ಲಿ ಹೆಣ್ಣುಮಕ್ಕಳು ಎಲ್ಲಾ ಕ್ಷೇತ್ರಗಳಲ್ಲೂ ತಮ್ಮದೇ ಆದ ಕೊಡುಗೆ ನಿಡುತಿದ್ದಾರೆ, ಆದ್ರೆ ಇನ್ನೂ ಗ್ರಾಮಿಣ ಭಾಗದಲ್ಲಿ ಲಿಂಗತ್ವ ಆಧಾರಿತ ದೌರ್ಜನ್ಯ ಪ್ರಕರಣಗಳು ಕಾಣಸಿಗುತ್ತವೆ, ಇದನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ಸಂಘ ಸಂಸ್ಥೆಗಳು ನಿರಂತರವಾಗಿ ಕಾರ್ಯ ಮಾಡುತೀದ್ದು. ಗ್ರಾಮಿಣ ಮಹಿಳೆಯರನ್ನು ಸಾಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಸ್ವಸಹಾಯ ಸಂಘಗಳ ನಿರ್ಮಾಣ ಸೇರಿದಂತೆ ಸ್ವಯಂ ಉದ್ಯೋಗ ಉತ್ತೇಜನಕ್ಕೆ ಆರ್ಥಿಕ, ಕಾನೂನು ನೆರವು ಸೇರಿದಂತೆ ಹತ್ತು ಹಲವು ಯೋಜನೆಗಳನ್ನು ರೂಪಿಸಿದ್ದು ಇದರ ಸದೂಪಯೋಗ ಪಡೆದುಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವಂತಾಗಬೇಕು, ಈ ನಿಟ್ಟಿನಲ್ಲಿ ಎನ್ ಆರ್ ಎಲ್ ಎಂ ಕಾರ್ಯ ಶ್ಲಾಘನೀಯವಾಗಿದೆ ಎಂದು ನುಡಿದರು. ಅದೆ ರೀತಿ ಎಂಬಿಕೆ ಮಾಣಿಕೇಶ್ವರಿ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ ನಮ್ಮ ತಂಡ ಸಂಜೀವಿನಿ ಒಕ್ಕೂಟದ ಮೂಲಕ ಆರ್ಥಿಕ ನೆರವು ಸೆರಿದಂತೆ ಹತ್ತು ಹಲವು ನಿರಂತರವಾಗಿ ಜಾಗ್ರತಿ ಕಾರ್ಯಕ್ರಮ ಮಾಡಲಾಗುತ್ತಿದೆ ಎಂದು ನುಡಿದರು. ಈ ಸಂದರ್ಭದಲ್ಲಿ ತಳವಾಡ ಪಂಚಾಯತ್ ಸಂಜೀವಿನಿ ಒಕ್ಕೂಟದ ಅಧ್ಯಕ್ಷೆ ಪ್ರಭಾವತಿ ಹಾಗೂ ವಾರ್ಡ್ ಒಕ್ಕೂಟದ ಅಧ್ಯಕ್ಷೆ ರುಪಾವತಿ ಪಾಟಿಲ್, ಎಲ್ ಸಿ ಪಿ ಸವಿತಾ ಪಾಟಿಲ್, ಜ್ಯೋತಿ ಕಮಲಾಪೂರೆ,ಕ್ ,ಪಶುಸಖಿ ರಮಾಬಾಯಿ ತಳವಾಡ, ಕರಡ್ಯಾಳ, ಕದಲಾಬಾದ ,ಧಾರಜವಾಡಿ ಗ್ರಾಮದ ವಿವಿಧ ಸ್ವಸಾಹಯ ಸಂಘಗಳ ಮಹಿಳೆಯರು ಉಪಸ್ಥಿತರಿದ್ದರು.

# ಕ್ರೀಡೆಯಿಂದ

## ಕ್ರೀಡಾಮನೋಭಾವನೆ ಬೆಳಸಿಕೊಳ್ಳಿ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಕ್ರೀಡೆಯಲ್ಲಿ ಎಲ್ಲರೂ ಭಾಗವಹಿಸಿ ಕ್ರೀಡಾಮನೋಭಾವವನ್ನು ಬೆಳಸಿಕೊಳ್ಳಬೇಕು ಆರೋಗ್ಯಕರ ಜೀವನ ನಡೆಸಬೇಕಾದರ ಕ್ರೀಡಾ ಬಹಳ ಮುಖ್ಯವಾಗಿದೆ ಎಂದು ಪ್ರಾಂಶುಪಾಲರಾದ ಕರಿಬಸವೇಶ್ವರ ಅವರು ಹೇಳಿದರು.

ಇತ್ತೀಚಿಗೆ ಮೇರಾ ಯುವ ಭಾರತ್ ಕಲಬುರ್ಗಿ ಸ್ವಾಮಿ ವಿವೇಕಾನಂದ ಕನ್ನಡ ಸಂಘ ಕಮಕನೂರು ಮತ್ತು ಮುರಾರ್ಜಿ ದೇಸಾಯಿ ವಸತಿ ಮಾದರಿ ವಿಜ್ಞಾನ ಪದವಿ ಪೂರ್ವ ಕಾಲೇಜು ಗಂಡುಗುರ್ತಿ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ತಾಲೂಕು ಮಟ್ಟದ ಕ್ರೀಡಾಕೂಟ ಕಾಲೇಜಿನ ಪ್ರಾಂಶುಪಾಲರಾದ ಕರಿಬಸವೇಶ್ವರ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

ಅಧ್ಯಕ್ಷತೆಯನ್ನು ಉಪನ್ಯಾಸಕರಾದ ವಿಜಯಕುಮಾರ್ ಗಣ–ಕಯಂತ್ರ ತಾಲೂಕು ಮಟ್ಟದ ಕ್ರೀಡಾಕೂಟ ಕಾರ್ಯಕ್ರಮ ವಿದ್ಯಾರ್ಥಿಗಳ ಮುಖದಲ್ಲಿ ಸಂತೋಷ ತಂದುಕೊಟ್ಟಿದೆ ಎಂದು ಪ್ರಸ್ತಾವಿಕವಾಗಿ ಮಾತನಾಡಿದರು.

: ಉಪನ್ಯಾಸಕರು ವಿನೋದ್ ಕುಮಾರ್ ಕನ್ನಡ ಬಾಬುರಾವ್ ನಾಯ್ಕೋಡಿ ಉಪನ್ಯಾಸಕರು ರಾಸಾಯನ ಶಾಸ್ತ್ರ ಸಂಜಯ್ ಕುಮಾರ್ ಉಪನ್ಯಾಸಕರ ಭೌತಶಾಸ್ತ್ರ ಹರಿತ ಉಪನ್ಯಾಸಕರು ಗಣಿತ ವಿಭಾಗ ಅಂಬಿಕಾ ದ್ವಿತೀಯ ದರ್ಜೆ ಸಹಾಯಕರು ಮಂಗಲ ಬರಮಚಿ ಅತಿಥಿ ಆರೋಗ್ಯ ನಿರೀಕ್ಷಕರು ನಾಗರಾಜ್ ಕಮಕನೂರ ಅಧ್ಯಕ್ಷರು ಸ್ವಾಮಿ ವಿವೇಕಾನಂದ ಯುವಕ ಕಮಕನೂರ ಅಂಬರೀಷ್ ಜಮಾದರ್ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಚನ್ನಬಸವೇಶ್ವರ ಜಾತ್ರಾ ಮಹೋತ್ಸವ ಪದಾಧಿಕಾರಿಗಳಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ, ಕಮಲನಗರ: ಪಟ್ಟಣದಲ್ಲಿ ಡಾ. ಚನ್ನಬಸವೇಶ್ವರ ಜಾತ್ರಾ ಮಹೋತ್ಸವ ಸ್ವಾಗತ ಸಮಿತಿ ಅಧ್ಯಕ್ಷ, ಉಪಾಧ್ಯಕ್ಷ, ಕಾರ್ಯಾಧ್ಯಕ್ಷ ನೇಮಕ ಪೂರ್ವ ಸಿದ್ಧತಾ ಸಭೆಯಲ್ಲಿ ನೇಮಕ ಮಾಡಿದ ಪದಾಧಿಕಾರಿಗಳನ್ನು ಮಂಗಳವಾರ ಅನುಭವ ಮಂಟಪ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಸನ್ಮಾನಿಸಿ ಅಭಿನಂದಿಸಿದರು.

ನಂತರ ಮಾತನಾಡಿ,ಡಾ.ಚನ್ನಬಸವ ಪಟ್ಟದ್ದೇವರು. ಅವರ ಜನ್ಮಭೂಮಿಯಾದ ಕಮಲನಗರ ಶರಣಕ್ಷೇತ್ರವಾಗಿ ಕಂಗೊಳಿಸುತ್ತಿದೆ. ಪೂಜ್ಯರು 22 ಡಿಸೆಂಬರ್ 1890 ರಲ್ಲಿ ಜನಿಸಿ, 1924 ರಲ್ಲಿ ಭಾಲ್ಕಿಯ ಹಿರೇಮಠ ಸಂಸ್ಥಾನದ ಪಟ್ಟಾಧ್ಯಕ್ಷರಾದರು.

ಗ್ರಾಮೀಣ ಭಾಗದ ಬಡಮಕ್ಕಳ ಶೈಕ್ಷಣಿಕ ಏಳಿಗೆಗಾಗಿ 1936 ರಲ್ಲಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಿ ಶಿಕ್ಷಣ ಪ್ರೇಮಿಗಳಾದರು. ಹೊರಗಡೆ ಉರ್ದುಬೋರ್ಡನ್ನು ಹಾಕಿ ಒಳಗಡೆ ಕನ್ನಡ ಕಲಿಸಿ ಕನ್ನಡದ ರಕ್ಷಕರಾದರು ಎಂದು ಹೇಳಿದರು.ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾನಾಡಿ, ಚನ್ನಬಸವ ಪಟ್ಟದ್ದೇವರ ಜಯಂತ್ಯುತ್ಸವ ಹಾಗೂ ಚನ್ನಬಸವೇಶ್ವರ ಜಾತ್ರಾ ಮಹೋತ್ಸವ ಮತ್ತು ಪೂಜ್ಯಶ್ರೀ ಡಾ.ಚನ್ನಬಸವ ಪಟ್ಟದ್ದೇವರ ಕನ್ನಡ ರಥೋತ್ಸವ ಬಹು ಸಡಗರ ಸಂಭ್ರಮದಿಂದ ಡಿ.26 ರಂದು ಆಚರಿಸಲು ನಿರ್ಧರಿಸಿ, ಸ್ವಾಗತ ಸಮಿತಿ ರಚಿಸಲಾಗಿದೆ ಎಂದು ತಿಳಿಸಿದರು.

ಪದಾಧಿಕಾರಿಗಳು ನೇಮಕ: ಸ್ವಾಗತ ಸಮಿತಿ ಅಧ್ಯಕ್ಷರಾಗಿ ಶರಣ ಶಿವಕುಮಾರ ಜುಲ್ಫೆ, ಉಪಾಧ್ಯಕ್ಷರಾಗಿ ಶರಣ ಮಡಿವಾಳಪ್ಪ ಮಹಾಜನ, ಕಾರ್ಯದರ್ಶಿಯಾಗಿ ಶರಣ ಚಂದ್ರಕಾಂತ ಸಂಗಮೆ ಮತ್ತು ಖಜಾಂಚಿಯಾಗಿ ಪ್ರಭುರಾವ ಕಳಸೆ ಅವರಿಗೆ ನೇಮಕ ಮಾಡಲಾಗಿದೆ.

ಇದೇ ಸಂದರ್ಭದಲ್ಲಿ ಮಃಆಲಿಗ ದೇವರು, ಪ್ರಕಾಶ ಸೊಲಪುರೆ, ಉಮಾಕಾಂತ ಮಹಾಜನ, ಸಂತೋಷ ಸೊಲಪುರೆ, ಸುರೇಶ ಸೊಲಪುರೆ, ಸೂರ್ಯಕಾಂತ ಮಹಾಜನ, ಶಿವಶರಣಪ್ಪ ಚಿಕಮುರ್ಗೆ, ಅವಿನಾಶ ಶಿವಣಕರ್, ಗುರುನಾಥ ಬಿರಾದಾರ, ಮಹಾದೇವ ಬಿರಾದಾರ, ರಮೇಶ ಬಿರಾದಾರ, ಅಮರ ಶಿವಣಕರ್, ಆನಂದ ಸುಲಾಕೆ, ರಾಮೇಶ್ವರ ಶಿವಣಕರ್, ಕಲ್ಲೇಶ ಉದಗೀರೆ ಮುಂತಾದವರು ಉಪಸ್ಥಿತರಿದ್ದರು.

ಪಟ್ಟದ್ದೇವರ ಜಯಂತ್ಯುತ್ಸವ ನಿಮಿತ್ಯ ವಚನ ಪಠಣ, ಕಬ್ಬಡಿ, ವಾಲಿಬಾಲ್ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆಯಲಿದ್ದು, ಎಲ್ಲ ಬಸವಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡ ಉತ್ಸವದಲ್ಲಿ ಪಾಲ್ಗೊಳ್ಳಬೇಕು ಪ್ರಕಟಣೆಗೆ ತಿಳಿಸಿದ್ದಾರೆ.

# ನಾಲ್ಕು ಬಸ್‌ಗಳಿಗೆ ಸಾಂಕೇತಿಕವಾಗಿ ಚಾಲನೆ





ಮಲ್ಲಮ್ಮ ನುಡಿ ವಾರ್ತೆಕಮ ಕಲಬುರಗಿ: ವಿಜಯಪುರ ನಗರದಲ್ಲಿ ಕಳೆದ ಡಿಸೆಂಬರ್ 20 ರಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ ನೀಡಿರುವ ಒಟ್ಟು 102 ನೂತನ ನಗರ ಸಾರಿಗೆ ವಾಹನಗಳನ್ನು ಸಾರಿಗೆ ಸಚಿವರು ಲೋಕಾರ್ಪಣೆ ಮಾಡಿದ್ದು, ಇದರ ಪ್ರಯುಕ್ತ ಕಲಬುರಗಿ ಉತ್ತರ ಮತಕ್ಷೇತ್ರ ಶಾಸಕರಾದ ಕನೀಜ್ ಫಾತೀಮಾ ಅವರು ಡಿಸೆಂಬರ್ 23 ರಂದು (ಮಂಗಳವಾರ) ರಾಮಮಂದಿರ–ರಾಮಮಂದಿರ ವಾಯಾ ಸೇಡಂ ರಿಂಗ್ ರೋಡ, ಮಹೆಬೂಬ ನಗರ ಮಾರ್ಗದಲ್ಲಿ ಸಂಚರಿಸಲಿರುವ ನಾಲ್ಕು ನಗರ ಸಾರಿಗೆ ನೂತನ ಬಸ್‌ಗಳಿಗೆ ಸಾಂಕೇತಿಕವಾಗಿ ಚಾಲನೆ ನೀಡಿದರು. ಈಗಾಗಲೇ ಕಲಬುರಗಿ ನಗರದಲ್ಲಿ ಕಾರ್ಯಾಚರಣೆಯಲ್ಲಿರುವ ನಗರ ಸಾರಿಗೆ ಮಾರ್ಗಗಳಲ್ಲಿ ಹೆಚ್ಚಿನ ಜನ ದಟ್ಟಣೆ ಇರುವ ಮಾರ್ಗಗಳನ್ನು ಗುರುತಿಸಿ ಸದರಿ ಮಾರ್ಗಗಳಲ್ಲಿ ಹೆಚ್ಚುವರಿ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲು ಉದ್ದೇಶಿಸಲಾಗಿದ್ದು, ಸಾರ್ವಜನಿಕರು ಈ ನಗರ ಸಾರಿಗೆ ವಾಹನಗಳ ಸದುಪಯೋಗಪಡೆದುಕೊಳ್ಳಬೇಕೆಂದು ಕಲಬುರಗಿ ಉತ್ತರ ಮತಕ್ಷೇತ್ರ ಶಾಸಕರಾದ ಕನೀಜ್ ಫಾತೀಮಾ ಅವರು ಹೇಳಿದರು. ಇದರ ಪ್ರಯುಕ್ತ ಕಲಬುರಗಿ ದಕ್ಷಿಣ ಮತಕ್ಷೇತ್ರ ಶಾಸಕರಾದ ಅಲ್ಲಮಪ್ರಭು ಪಾಟೀಲ ಅವರು ಡಿಸೆಂಬರ್ 23 ರಂದು (ಮಂಗಳವಾರ) ರಾಮಮಂದಿರ–ರಾಮಮಂದಿರ ವಾಯಾ ಹೈಕೋರ್ಟ್ ಮಾರ್ಗದಲ್ಲಿ ಸಂಚರಿಸುವ ನಾಲ್ಕು ನಗರ ಸಾರಿಗೆ ಬಸ್‌ಗಳಿಗೆ ಸಾಂಕೇತಿಕವಾಗಿ ಚಾಲನೆ ನೀಡಿದರು. ಈಗಾಗಲೆ ಕಲಬುರಗಿ ನಗರದಲ್ಲಿ ಕಾರ್ಯಾಚರಣೆಯಲ್ಲಿರುವ ನಗರ ಸಾರಿಗೆ ಮಾರ್ಗಗಳಲ್ಲಿ ಹೆಚ್ಚಿನ ಜನದಟ್ಟಣೆ ಇರುವ ಮಾರ್ಗಗಳನ್ನು ಗುರುತಿಸಿ ಸದರಿ ಮಾರ್ಗಗಳಲ್ಲಿ ಹೆಚ್ಚುವರಿ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲು ಉದ್ದೇಶಿಸಲಾಗಿದ್ದು, ಸಾರ್ವಜನಿಕರು ಈ ನಗರ ಸಾರಿಗೆ ವಾಹನಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಕಲಬುರಗಿ ದಕ್ಷಿಣ ಮತಕ್ಷೇತ್ರ ಶಾಸಕರಾದ ಅಲ್ಲಮಪ್ರಭು ಪಾಟೀಲ ಅವರು ತಿಳಿಸಿದರು. ಈ ಸಂದರ್ಭದಲ್ಲಿ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಜಹರ್ ಆಲಂ ಖಾನ್ ಸೇರಿದಂತೆ ಸ್ಥಳಿಯ ಮಹಾನಗರ ಪಾಲಿಕೆಯ ಸದಸ್ಯರು, ಕಲಬುರಗಿ ವಿಭಾಗ–1, ಘಟಕ ವ್ಯವಸ್ಥಾಪಕರು ಕಲಬುರಗಿ ಘಟಕ–4, ವಿಭಾಗೀಯ ನಿಯಂತ್ರಣಾಧಿಕಾರಿಗಳು, ವಿಭಾಗೀಯ ಸಂಚಾರ ಅಧಿಕಾರಿಗಳು, ವಿಭಾಗೀಯ ತಾಂತ್ರಿಕ ಶಿಲ್ಪಿಗಳು, ಸಾರ್ವಜನಿಕರು ಹಾಗೂ ನಿಗಮದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮನೆ ಕಳ್ಳತನ ಪ್ರಕರಣ; ಆರೋಪಿಗೆ 3 ವರ್ಷ ಜೈಲು ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ,ಕೊಪ್ಪಳ : ಕಾರಟಗಿ ಪಟ್ಟಣದ ಸರ್ಕಾರಿ ಆಸ್ಪತ್ರೆ ಸಮೀಪದ ಮನೆಯೊಂದರಲ್ಲಿ ನಡೆದಿದ್ದ ಬಂಗಾರದ ಆಭರಣಗಳ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಗಂಗಾವತಿಯ ನ್ಯಾಯಾಲಯವು ಆರೋಪಿಗೆ 3 ವರ್ಷ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಿ ಮಹತ್ವದ ತೀರ್ಪು ನೀಡಿದೆ.

2025ರ ಜನವರಿ 27ರಂದು ಕಾರಟಗಿ ಪಟ್ಟಣದ ನಿವಾಸಿ ದಿಗಂಬರ ಎಂಬುವವರ ಮನೆಯ ಮೊದಲ ಮಹಡಿಯಲ್ಲಿ ವಾಸವಿದ್ದ ಸಾಕ್ಷಿದಾರರು ಕೆಲಸಕ್ಕೆ ಮತ್ತು ಉಳಿದ ಮನೆಯವರು ದೇವಸ್ಥಾನಕ್ಕೆ ಹೋಗಿದ್ದ ಸಂದರ್ಭವನ್ನು ಬಳಸಿಕೊಂಡಿದ್ದ ಕಳ್ಳರು, ಬೀಗ ಮುರಿದು ಒಳನುಗ್ಗಿ ಸುಮಾರು 5 ತೊಲೆ ಬಂಗಾರದ ಆಭರಣಗಳನ್ನು (ಅಂ–ದಾಜು ಮೌಲ್ಯ 2,48,000 ರೂ.) ಕಳ್ಳತನ ಮಾಡಿದ್ದರು. ಈ ಬಗ್ಗೆ ಕಾರಟಗಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಈ ಪ್ರಕರಣದ ತನಿಖೆ ನಡೆಸಿದ ಕಾರಟಗಿ ಪಿ.ಎಸ್.ಐ ಕಾಮಣ್ಣ ಅವರು ಆರೋಪಿ ಶಿವಪ್ರಸಾದ ಅಲಿಯಾಸ್ ಶಿವಕುಮಾರ @ ಶಿವು ಎಂಬಾತನ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ ಸಲ್ಲಿಸಿದ್ದರು. ಗೌರವಾನ್ವಿತ ಗಂಗಾವತಿಯ 1ನೇ ಹೆಚ್ಚುವರಿ ಸಿ.ಜೆ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯದ (ಪ್ರಭಾರ) ನ್ಯಾಯಾಧೀಶರಾದ ನಾಗೇಶ ಪಾಟೀಲ ಅವರು ವಿಚಾರಣೆ ನಡೆಸಿ, ಸಾಕ್ಷ್ಯಾಧಾರಗಳ ಮೇರೆಗೆ ಆರೋಪಿತನು ತಪ್ಪಿತಸ್ಥನೆಂದು ತೀರ್ಮಾನಿಸಿ ಗುರುವಾರದಂದು ಶಿಕ್ಷೆ ಪ್ರಕಟಿಸಿದ್ದಾರೆ.

*ಶಿಕ್ಷೆ ವಿವರ:* ಬಿ.ಎನ್.ಎಸ್ ಕಲಂ 331(3)ರ ಅಡಿಯಲ್ಲಿ 3 ವರ್ಷ ಸಾದಾ ಕಾರಾಗೃಹ ಶಿಕ್ಷೆ ಮತ್ತು 5000 ರೂ. ದಂಡ. ಒಂದು ವೇಳೆ ದಂಡ ಕಟ್ಟದಿದ್ದಲ್ಲಿ ಹೆಚ್ಚುವರಿ 1 ತಿಂಗಳು ಜೈಲು ಶಿಕ್ಷೆ ಹಾಗೂ ಬಿ.ಎನ್.ಎಸ್ ಕಲಂ 305ರ ಅಡಿಯಲ್ಲಿ 3 ವರ್ಷ ಸಾದಾ ಕಾರಾಗೃಹ ಶಿಕ್ಷೆ ಮತ್ತು 5000 ರೂ. ದಂಡ (ದಂಡ ಕಟ್ಟದಿದ್ದಲ್ಲಿ ಹೆಚ್ಚುವರಿ 1 ತಿಂಗಳು ಶಿಕ್ಷೆ).

ಈ ಪ್ರಕರಣದ ತನಿಖೆಯಲ್ಲಿ ಪಿ.ಎಸ್.ಐ ಕಾಮಣ್ಣ ಅವರಿಗೆ ಸಿಬ್ಬಂದಿ ಮುತ್ತುರಾಜ (ಸಿಹೆಚ್–178) ಸಹಕರಿಸಿದ್ದು, ನ್ಯಾಯಾಲಯದ ವಿಚಾರಣಾ ಸಮಯದಲ್ಲಿ ಸಾಕ್ಷಿಗಳನ್ನು ಸಕಾಲಕ್ಕೆ ಹಾಜರುಪಡಿಸುವಲ್ಲಿ ಕಾರ್ತೀಕ್ (ಸಿಪಿಸಿ–320), ಅಶೋಕ, ಮರಿಯಪ್ಪ ಹಾಗೂ ಗಂಗಾಧರ ಶ್ರಮಿಸಿದ್ದಾರೆ. ಸರ್ಕಾರದ ಪರವಾಗಿ ಸಹಾಯಕ ಸರ್ಕಾರಿ ಅಭಿಯೋಜಕರಾದ ಕರುಣಾಕರ ಬಂಗಿ ಅವರು ಸಮರ್ಥವಾಗಿ ವಾದ ಮಂಡಿಸಿದರು ಎಂದು ಸಹಾಯಕ ಸರ್ಕಾರಿ ಅಭಿಯೋಜಕರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಯಶಸ್ವಿಯಾಗಿ ಜರುಗಿದ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿಶೇಷ ಚೇತನ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ ಕ್ರೀಡಾಕೂಟ



ಮಲ್ಲಮ್ಮ ನುಡಿ ವಾರ್ತೆ, ಅಂಕೋಲಾ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಉತ್ತರ ಕನ್ನಡ, ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ ಉತ್ತರ ಕನ್ನಡ, ಕ್ಷೇತ್ರಶಿಕ್ಷಣಾಧಿಕಾರಿಗಳ ಕಾರ್ಯಾಲಯ ಅಂಕೋಲಾ ಇವರ ಸಯುಕ್ತ ಆಶ್ರಯದಲ್ಲಿ 14 ಮತ್ತು 17 ವಯೋಮಾನದ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿಶೇಷ ಚೇತನ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ ಕ್ರೀಡಾಕೂಟ ತಾಲೂಕು ಕ್ರೀಡಾಂಗಣ ಅಂಕೋಲಾದಲ್ಲಿ ಯಶಸ್ವಿಯಾಗಿ ಜರುಗಿತು.

ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದ ಉತ್ತರ ಕನ್ನಡ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಲತಾ ಎಂ. ನಾಯಕ, ವಿಶೇಷ ಚೇತನರಿಗೆ ಪ್ರತಿಭೆಗಳನ್ನು ಹೊರಹಾಕಲು ಹೆಚ್ಚಿನ ಬೆಂಬಲ ಹಾಗೂ ಪ್ರೋತ್ಸಾಹವನ್ನು ನಾವೆಲ್ಲರೂ ನೀಡಬೇಕಾಗಿದೆ. ಸರ್ಕಾರವು ವಿಶೇಷ ಚೇತನರಿಗೆ ಅನೇಕ ಸವಲತ್ತುಗಳನ್ನು ನೀಡುತ್ತಿದೆ. ವಿಶೇಷ ಚೇತನರಲ್ಲಿ ಹಿಂಜರಿಕೆಯ ಭಾವನೆಯನ್ನು ದೂರಗೊಳಿಸಿ ಅವರಲ್ಲಿ ಸ್ವಾಭಿಮಾನ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುವ ಕಾರ್ಯವನ್ನು ಪಾಲಕರು ಹಾಗೂ ಶಿಕ್ಷಕರು ಮಾಡಬೇಕಾಗಿದೆ. ಅವರಿಗೆ ಅನುಕಂಪಕ್ಕಿಂತ ಪ್ರೋತ್ಸಾಹದ ಅಗತ್ಯವಿದೆ ಹೀಗಾದಲ್ಲಿ ಮಾತ್ರ ಅವರು ತಮ್ಮ ಪ್ರತಿಭೆಯನ್ನು ಹೊರಹಾಕುವುದು ಸಾಧ್ಯವಿದೆ. ಅನೇಕ ವಿಶೇಷ ಚೇತನರು ಇವತ್ತು ಜಗತ್ತಿನಲ್ಲಿ ಹೆಸರುಗಳಿಸಿದ್ದಾರೆ. ಅರುಣಿಮಾ ಸಿನ್ಹಾ ಒಂದು ಸ್ಪೂರ್ತಿದಾಯಕ ವ್ಯಕ್ತಿತ್ವವಾಗಿ ನಮ್ಮ ಮುಂದಿದ್ದಾರೆ ಎಂದರು. ವೇದಿಕೆಯಲ್ಲಿ ಕ್ಷೇತ್ರಶಿಕ್ಷಣಾಧಿಕಾರಿ ಮಂಗಲಲಕ್ಷ್ಮಿ ಪಾಟೀಲ, ಡಿ.ವಾಯ್.ಪಿ.ಸಿ. ಭಾಸ್ಕರ ಗಾಂವಕರ, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಮಂಜುನಾಥ ಎಮ್ ನಾಯಕ, ಕರ್ನಾಟಕ ರಾಜ್ಯ ಗ್ರೇಡ್ ಒನ್ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಗಿರೀಶ ನಾಯಕ, ಜಿಲ್ಲಾಧ್ಯಕ್ಷ ಪ್ರಕಾಶ ನಾಯ್ಕ, ಹೊನ್ನಾವರ ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಅರುಣ ಕುಮಾರ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಆನಂದು ಗಾಂವಕರ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಅಂಕೋಲಾ ತಾಲೂಕು ಘಟಕದ ಅಧ್ಯಕ್ಷ ಜಗದೀಶ ಜಿ. ನಾಯಕ ಹೊಸ್ಕೇರಿ, ತಾಲೂಕು ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷ ರಾಜೇಶ ನಾಯಕ, ಯುವಜನ ಸೇವಾ ಹಾಗೂ ಕ್ರೀಡಾಧಿಕಾರಿ ವೆಂಕಟೇಶ ಎನ್. ನಾಯಕ ಉಪಸ್ಥಿತರಿದ್ದರು.

ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ವಿಠೋಬ ನಾಯಕ ಸ್ವಾಗತಿಸಿದರು. ತಾಲೂಕಿನ ದೈಹಿಕ ಶಿಕ್ಷಣ ಶಿಕ್ಷಕರು, ಸಿ.ಆರ್.ಪಿ., ಬಿ.ಆರ್.ಪಿ.ಗಳು, ಜಿಲ್ಲಾ ಹಾಗೂ ತಾಲೂಕು ಐ.ಇ.ಆರ್.ಟಿ.ಗಳು, ಶಿಕ್ಷಕರು ಹಾಜರಿದ್ದರು. ರಾಜೇಶ ನಾಯಕ ಸೂರ್ವೆ, ಕಾರ್ಯಕ್ರಮ ನಿರ್ವಹಿಸಿ, ವಂದಿಸಿದರು. ಅಂಕೋಲಾ ನಂಬರ್ 2 ಶಾಲೆಯ ವಿದ್ಯಾರ್ಥಿನಿಯರು ಪ್ರಾರ್ಥಿಸಿ, ಸ್ವಾಗತಗೀತೆ ಹಾಡಿದರು.

# ಸಾಮಾಜಿಕ ಮತ್ತು ಶೈಕ್ಷಣಿಕ ಕೊಡಗೆ ಅಪಾರ:ಚನ್ನಬಸವ ಫಾಳೆ



ಮಲ್ಲಮ್ಮ ನುಡಿ ವಾರ್ತೆಕಮಲನಗರ: ಪಟ್ಟಣದ ಡಾ. ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆ, ಶ್ರೀ ಗುರಪ್ಪಾ ಟೊಣ್ಣೆ ಪ್ರಾಥಮೀಕ ಶಾಲೆ ಹಾಗೂ ಗುರುಕಾರುಣ್ಯ ಪಬ್ಲಿಕ್ ಸ್ಕೂಲ್ ನಲ್ಲಿ ಡಾ. ಚನ್ನಬಸವ ಪಟ್ಟದ್ದೇವರ 136ನೇ ಜಯಂತ್ಯೋತ್ಸವ ಕಾರ್ಯಕ್ರಮ ಆಚರಿಸಲಾಯಿತು.ಕಾರ್ಯಕ್ರಮದಲ್ಲಿ ಶಾಲೆಯ ಆಡಳಿತಾಧಿಕಾರಿಗಳಾದ ಶ ಚನ್ನಬಸವ ಫಾಳೆ ಅವರು ಮಾತನಾಡಿ ಪೂಜ್ಯರ ಸಾಮಾಜಿಕ ಮತ್ತು ಶೈಕ್ಷಣಿಕ ಕಾರ್ಯ ದಿಂದ ಇಂದು ಈ ಭಾಗದ ಸಾವಿರಾರು ವಿದ್ಯಾರ್ಥಿಗಳು ಉನ್ನತ ಸ್ಥಾನವನ್ನು ಪಡೆದು ಕೊಂಡಿದ್ದಾರೆ.

ಸಮಾಜದ ಬಗ್ಗೆ ಅಪಾರ ಕಾಳಜಿ ಹೊಂದುರುವ ಪೂಜ್ಯ ಅಪ್ಪಾಜಿ ಅವರು ಎಲ್ಲರನ್ನು ಸಮನಾಗಿ ಕಂಡರು ಎಂದು ನುಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಕಾಯಕಜೀವಿ ಸಂಜುಕುಮಾರ ಹಕ್ಯಾಳಕರ ರವರು ಭಾಗವಹಿಸಿದರು,

ಅದೆ ರೀತಿ ಸಂಸ್ಥೆಯ ವತಿಯಿಂದ ನಡೆಸುವ 10ನೇ ತರಗತಿಯಲ್ಲಿ ಅಗ್ರ ಶ್ರೇಣಿಯಲ್ಲಿ ಉತೀರ್ಣರಾದ 5 ವಿದ್ಯಾರ್ಥಿಗಳನ್ನು ಸನ್ಮಾಸಿ ಪ್ರೋತ್ಸಾಹಿಸಲಾಯಿತು. ಶಾಲೆಯ ವಿದ್ಯಾರ್ಥಿಯಾದ ಮೇಘನಾ ಸುತಾರ ಮತ್ತು ಮಹೇಶ್ವರಿ ಅವಿನಾಶ ಪೂಜ್ಯರ ಜೀವನದ ಅನೇಕ ಕೊಡುಗೆಗಳ ಬಗ್ಗೆ ಭಾಷಣ ಮಾಡಿದರು.ಈ ಸಂದರ್ಭದಲ್ಲಿ ಗುರುಕಾರುಣ್ಯ ಪಬ್ಲಿಕ್ ಶಾಲೆಯ ಪ್ರಾಂಶುಪಾಲರಾದ ನಿಲಕಂಠ ಪಾಂಡ್ರೆ ಮತ್ತು ಶಾಲೆಯ ಎಲ್ಲ ಸಿಬ್ಬಂಧಿ ವರ್ಗದವರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಭರತ ನಂದನ ನಿರೂಪಣೆ ಮಾಡಿದರು.

# ರಾಷ್ಟ್ರ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಮಹತ್ವ: ಮಾರುತಿ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ, ಚಿಟಗುಪ್ಪ: ಸದೃಢ ರಾಷ್ಟ್ರ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಮಹತ್ವದ್ದಾಗಿದೆ ಎಂದು ಮನ್ನಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಮಾರುತಿ ರೆಡ್ಡಿ ಹೇಳಿದರು. ಪಟ್ಟಣದ ಶ್ರೀ ರೇವಣಸಿದ್ದೇಶ್ವರ ದೇವಸ್ಥಾನದ ಆವರಣದಲ್ಲಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಆಯೋಜಿಸಿದ್ದ ಎನ್ ಎಸ್ ಎಸ್ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ದೇಶಭಕ್ತಿ, ಸಮಾನತೆ, ಭಾವೈಕ್ಯತೆ ಬೆಳೆಸುತ್ತದೆ. ಸಾಮಾಜಿಕ ಹೊಣೆಗಾರಿಕೆ, ಶಿಸ್ತು, ಸಮಯ ಪ್ರಜ್ಞೆಯನ್ನೂ ಕಲಿಸಿಕೊಡುತ್ತದೆ ಎಂದು ತಿಳಿಸಿದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯು ಬದುಕನ್ನು ಪ್ರಬುದ್ಧವಾಗಿ ರೂಪಿಸುವ ಜತೆಗೆ ರಾಷ್ಟ್ರನಿರ್ಮಾಣದಲ್ಲಿ ದೊಡ್ಡ ಕೊಡುಗೆ ನೀಡುತ್ತಿದೆ. ವಿದ್ಯಾರ್ಥಿಗಳು ಈ ಚಟುವಟಿಕೆಯಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡು ಬದುಕನ್ನು ಬೆಳಗಿಸಿಕೊಳ್ಳಬೇಕು. ಇಂದು ಸಂಸ್ಕಾರಯುತ ಜೀವನಶೈಲಿ ದೂರವಾಗಿದೆ. ಪ್ರತಿಯೊಂದನ್ನೂ ವ್ಯಾವಹಾರಿಕವಾಗಿ ನೋಡುವ ದೃಷ್ಟಿಕೋನ ನಮ್ಮದಾಗಿದೆ. ಹಾಗಾಗಿಯೇ ಇಂದು ಮನುಷ್ಯತ್ವ, ಮಾನವೀಯತೆ ನಮ್ಮಿಂದ ದೂರವಾಗಿದೆ. ಸಂಸ್ಕಾರ ನೀಡುವ ಚಟುವಟಿಕೆಯಲ್ಲಿ ಹೆಚ್ಚು ತೊಡಗಿಸಿಕೊಳ್ಳುವುದರಿಂದ ಬದುಕು ಅರ್ಥವತ್ತಾಗುತ್ತದೆ' ಎಂದರು. ಕಾಲೇಜಿನ ಪ್ರಾಂಶುಪಾಲ ರಾಜೇಂದ್ರ ಚವ್ಹಾಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಿಗೆ ಸೇವಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡುತ್ತದೆ. ಪ್ರಸ್ತುತ ಸ್ಪರ್ಧಾತ್ಮಕ ಯುಗ ಇದೆ. ಹೀಗಾಗಿ ವಿದ್ಯಾರ್ಥಿಗಳು ಕಠಿಣ ಪರಿಶ್ರಮ ಪಟ್ಟು ಉಜ್ವಲ ಭವಿಷ್ಯ ಕಟ್ಟಿಕೊಳ್ಳಲು ಪ್ರಯತ್ನಿಸಬೇಕು ಎಂದು ತಿಳಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಚಂದ್ರಕಾಂತ ಥೋರೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ರೇವಣಸಿದ್ದೇಶ್ವರ ದೇವಸ್ಥಾನ ಸಮಿತಿ ಸದಸ್ಯ ಈರಪ್ಪಣ್ಣ ಕಲ್ಲೂರ್, ಪುರಸಭೆ ನಿಕಟಪೂರ್ವ ಉಪಾಧ್ಯಕ್ಷ ಮಹಮ್ಮದ್ ನಸೀರ್ ಖಾನ್, ಉಪನ್ಯಾಸಕರಾದ ಅಂಬಿಕಾ, ಶೃತಿ, ಸುಪ್ರಿಯಾ, ಮಹಮ್ಮದ್ ನಿಜಾಮ, ಸುನೀಲಕುಮಾರ್ ಹಡಪದ, ಬಸವರಾಜ, ಯೋಹಾನ್, ಸೇರಿದಂತೆ ಶಿಬಿರಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಉಪನ್ಯಾಸಕ ಶಿವಕುಮಾರ ನಿರೂಪಿಸಿದರು. ಅನುಪ್ರಿಯಾ ವಂದಿಸಿದರು.

# ಕಲಬುರಗಿ ಮತ್ತು ಬೆಂಗಳೂರು ವಿಶೇಷ ರೈಲು ಸಂಚಾರ

ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ: ಡಿ.23.(ಕ.ವಾ)– ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಪ್ರಯಾಣಿಕರ ಅನುಕೂಲಕ್ಕಾಗಿ ರೈಲ್ವೆ ಇಲಾಖೆಯು ಕಲಬುರಗಿ ಮತ್ತು ಬೆಂಗಳೂರು ಕಂಟೋನ್ಮೆಂಟ್ ನಡುವೆ ಕ್ರಿಸ್‌ಮಸ್ ವಿಶೇಷ ರೈಲು ಓಡಿಸಲಿದೆ ಎಂದು ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಬೆಂಗಳೂರು ಕಂಟೋನ್ಮೆಂಟ್ – (ರೈಲು ಸಂಖ್ಯೆ 06589) ಕಲಬುರಗಿ ಕ್ರಿಸ್‌ಮಸ್ ವಿಶೇಷ ರೈಲು ಇದೇ ಡಿಸೆಂಬರ್ 23 ರಂದು ಸಂಜೆ 7.20 ಕ್ಕೆ ಬೆಂಗಳೂರು ಕಂಟೋನ್ಮೆಂಟ್‌ನಿಂದ ಹೊರಟು ಮರುದಿನ ಬೆಳಿಗ್ಗೆ 7.30 ಕ್ಕೆ ಕಲಬುರಗಿಗೆ ಆಗಮಿಸಲಿವೆ. ಅದೇ ರೀತಿ ಕಲಬುರಗಿ–ಬೆಂಗಳೂರು ಕಂಟೋನ್ಮೆಂಟ್ ವಿಶೇಷ ರೈಲು (ರೈಲು ಸಂಖ್ಯೆ 06590) ಇದೇ ಡಿಸೆಂಬರ್ 24 ರಂದು ಬೆಳಿಗ್ಗೆ 9.35 ಕ್ಕೆ ಕಲಬುರಗಿಯಿಂದ ಹೊರಟು ಅದೇ ದಿನ ರಾತ್ರಿ 20.30 ಕ್ಕೆ ಬೆಂಗಳೂರು ಕಂಟೋನ್ಮೆಂಟ್ ತಲುಪಲಿವೆ. ಈ ರೈಲು ಯಲಹಂಕ, ಹಿಂದೂಪುರ, ಧರ್ಮವರಂ, ಅನಂತಪುರ, ಗುಂತಕಲ್, ಅದೋನಿ, ಮಂತ್ರಾಲಯ ರಸ್ತೆ, ರಾಯಚೂರು, ಕೃಷ್ಣ, ಯಾದಗಿರಿ ಮತ್ತು ಶಹಾಬಾದ್ ನಿಲ್ದಾಣಗಳಲ್ಲಿ ನಿಲ್ಲಲಿದೆ.

ಪ್ರಯಾಣಿಕರು ಹೆಚ್ಚಿನ ಮಾಹಿತಿಗಾಗಿ ತಿತಿತಿ.ಎಡಿಭಿಣಿಭಿ.ಭಿಠ.ಟಿ ವೆಬ್‌ಸೈಟ್‌ನ್ನು, ಕಾಯ್ದಿರಿಸದ ಕೋಚ್‌ಗಳ ಬುಕಿಂಗ್ ಅನ್ನು ನಿಲ್ದಾಣಗಳಲ್ಲಿನ ಬುಕಿಂಗ್ ಕೌಂಟರ್‌ಗಳು ಮತ್ತು ಯುಟಿಸ್ (ಗಖಿಖ) ಅಪ್ಲಿಕೇಶನ್ ಮೂಲಕವೂ ಮಾಡಬಹುದು.

ಅನಾನುಕೂಲತೆಯನ್ನು ತಪ್ಪಿಸಲು ಪ್ರಯಾಣಿಕರು ತಪ್ಪದೇ ಟಿಕೆಟ್‌ಗಳೊಂದಿಗೆ ಪ್ರಯಾಣಿಸಬೇಕು.

ಈ ವಿಶೇಷ ರೈಲುಗಳ ನಿಲುಗಡೆಗಳ ವಿವರವಾದ ಸಮಯ ಹಾಗೂ ಹೆಚ್ಚಿನ ಮಾಹಿತಿಯನ್ನು www.enquiry.indianrail.gov.in ಗೆ ಭೇಟಿ ನೀಡಿ ಅಥವಾ RailOne ಅಥವಾ ಎನ್.ಟಿ.ಇ.ಎಸ್. (NTES) ಅಪ್ಲಿಕೇಶನ್ ಡೌನ್‌ಲೋಡ್ ಮಾಡಿ ಪಡೆಯಬಹುದಾಗಿದೆ

# ಜಿಲ್ಲೆಯ ಕಲೆ ಸಂಸ್ಕೃತಿಯನ್ನು ಯುವ ಪೀಳಿಗೆಗೆ ಪರಿಚಯಿಸಬೇಕು : ಸಿಇಓ ಡಾ.ದಿಲೀಷ್ ಶಶಿ



ಮಲ್ಲಮ್ಮ ನುಡಿ ವಾರ್ತೆ, ಕಾರವಾರ, ಉತ್ತರ ಕನ್ನಡ ಜಿಲ್ಲೆಯ ಕಲೆ, ಸಂಸ್ಕೃತಿ ಪರಂಪರೆಯನ್ನು ಯುವ ಪೀಳಿಗೆಗೆ ಪರಿಚಯಿಸಬೇಕು, ಇದೇ ಉದ್ದೇಶದಿಂದ ಕರಾವಳಿ ಉತ್ಸವ ಸಂದರ್ಭದಲ್ಲಿ ಛಾಯಾ ಚಿತ್ರ ಹಾಗೂ ರೀಲ್ಸ್ ಪ್ರದರ್ಶನ ಮತ್ತು ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ದಿಲೀಷ್ ಶಶಿ ಹೇಳಿದರು.

ಅವರು ಮಂಗಳವಾರ ನೂತನ ಜಿಲ್ಲಾಧಿಕಾರಿ ಕಚೇರಿ ಪ್ರಜಾಸೌಧದಲ್ಲಿ, ಕರಾವಳಿ ಉತ್ಸವದ ಅಂಗವಾಗಿ ಆಯೋಜಿಸಿದ್ದ ಛಾಯಾ ಚಿತ್ರ ಹಾಗೂ ರೀಲ್ಸ್ ಪ್ರದರ್ಶನ ಮತ್ತು ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಪ್ರವಾಸೋದ್ಯಮ ಹೆಚ್ಚಾಗಿರುವುದರಿಂದ ಪ್ರಮುಖ ಪ್ರವಾಸಿ ಸ್ಥಳಗಳ, ಜಲಪಾತಗಳ, ಕಡಲತೀರಗಳ, ಪಾರಂಪರಿಕ ತಾಣಗಳ ಛಾಯಾಚಿತ್ರ ನೀಡಿದಲ್ಲಿ, ಅವುಗಳನ್ನು ವೇದಿಕೆಯಲ್ಲಿ ಪ್ರದರ್ಶಿಸಲಾಗುವುದು. ಈಗಾಗಲೇ ಕೆಲವು ಛಾಯಾಗ್ರಾಹಕರು ಛಾಯಚಿತ್ರಗಳನ್ನು ಮತ್ತು ರೀಲ್ಸ್‌ಗಳನ್ನು ನೀಡಿದ್ದಾರೆ. ಈ ಸ್ಪರ್ಧೆ ಮತ್ತು ಪ್ರದರ್ಶನದಲ್ಲಿ ಇನ್ನೂ ಆಕರ್ಷಣೆಯ, ಇತಿಹಾಸಯುಳ್ಳ ಛಾಯಾ ಚಿತ್ರಗಳನ್ನು ಸಂಗ್ರಹಿಸುವ ಪ್ರಯತ್ನ ಮಾಡಲಾಗುತ್ತಿದೆ ಇಂತಹ ಅಪರೂಪದ ಮತ್ತು ಐತಿಹಾಸಿಕ ಛಾಯಾ ಚಿತ್ರಗಳು ಇದ್ದಲ್ಲಿ ಪ್ರದರ್ಶನಕ್ಕೆ ಇಡುವಂತೆ ತಿಳಿಸಿದ ಅವರು, ಉತ್ತಮ ಛಾಯ ಚಿತ್ರ ಮತ್ತು ರೀಲ್ಸ್‌ಗಳನ್ನು ಗುರುತಿಸಿ ಕೊನೆಯ ದಿನ ಬಹುಮಾನವನ್ನು ನೀಡಲಾಗುವುದು ಎಂದರು.

ನಿಗದಿತ ದಿನಾಂಕದೊಳಗೆ ಆಗಮಿಸಿದ ಛಾಯಾಚಿತ್ರ ಮತ್ತು ರೀಲ್ಸ್‌ಗಳನ್ನು ಈ ಸ್ಪರ್ಧೆಗೆ ಪರಿಗಣಿಸಲಾಗುವುದು. ನಂತರ ಬಂದ ಛಾಯಾಚಿತ್ರ ಮತ್ತು ರೀಲ್ಸ್ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಲಾಗುವುದು, ಉತ್ತಮವಾದ ರೀಲ್ಸ್ ಗಳನ್ನು ಕರಾವಳಿ ಉತ್ಸವದ ವೇದಿಕೆಯಲ್ಲಿ ಪ್ರದರ್ಶಿಸಲಾಗುವುದು ಎಂದರು.

ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕಿ ಮಂಗಳಗೌರಿ ಭಟ್, ಜಿಲ್ಲಾ ವಾರ್ತಾಧಿಕಾರಿ ಬಿ.ಶಿವಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಜಿಲ್ಲೆಯ ವಿವಿಧ ಪ್ರವಾಸಿ ತಾಣಗಳು ಮತ್ತು ಸಂಸ್ಕೃತಿಯನ್ನು ಬಿಂಬಿಸುವ ಅತ್ಯಾಕರ್ಷಕವಾದ 50 ಕ್ಕೂ ಅಧಿಕ ಛಾಯಾಚಿತ್ರಗಳನ್ನು ಇಲ್ಲಿ ಪ್ರದರ್ಶನಕ್ಕಿಡಲಾಗಿದ್ದು, ಕರಾವಳಿ ಉತ್ಸವದ ಮುಕ್ತಾಯದವರೆಗೂ ಸಾರ್ವಜನಿಕರು ಉಚಿತವಾಗಿ ಈ ಪ್ರದರ್ಶನ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ.

# ಮಹರ್ಷಿ ಶ್ರೀ ವಾಲ್ಮೀಕಿ: ವೃತ್ತಕ್ಕೆ ಶಾಸಕ ರೆಡ್ಡಿ ಭೇಟಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, : ನಗರ ಶಾಸಕ ನಾರಾ ಭರತ್ ರೆಡ್ಡಿಯವರ ಅಧ್ಯಕ್ಷತೆಯಲ್ಲಿ ಜ.03, 2026ರಂದು ನಗರದ ವಾಲ್ಮೀಕಿ ವೃತ್ತದಲ್ಲಿ ನಡೆಯಲಿರುವ ಮಹರ್ಷಿ ಶ್ರೀ ವಾಲ್ಮೀಕಿ ಪುತ್ಥಳಿಯ ಅನಾವರಣ ಕಾರ್ಯಕ್ರಮಕ್ಕಾಗಿ ಭರದ ಸಿದ್ಧತೆಗಳು ನಡೆದಿವೆ ಎಂದು ವಾಲ್ಮೀಕಿ ನಾಯಕರ ಸಮಾಜದ ಮುಖಂಡರು ತಿಳಿಸಿದ್ದಾರೆ.

ಇದೇ ತಿಂಗಳು ಡಿ, 25ರಂದು ಬಳ್ಳಾರಿ ನಗರಕ್ಕೆ ಮಹರ್ಷಿ ಶ್ರೀ ವಾಲ್ಮೀಕಿಯವರ ಪುತ್ಥಳಿಯ ಆಗಮನ ಆಗುತ್ತಿದ್ದು, ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಕೋಟೆ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದಿಂದ ವಾಲ್ಮೀಕಿ ವೃತ್ತದವರೆಗೆ ಬೃಹತ್ ಮೆರವಣಿಗೆ ಆಯೋಜಿಸಲಾಗಿದೆ.

ವಾಲ್ಮೀಕಿ ಪುತ್ಥಳಿಯನ್ನು ಹೊತ್ತು ಬರುವ ವಾಹನವನ್ನು ಹೂಗಳಿಂದ ಸಿಂಗರಿಸಿ, ವಿವಿಧ ಕಲಾ ವಾದ್ಯ ತಂಡಗಳೊಂದಿಗೆ ಕುಂಭ–ಕಳಶ ಹೊತ್ತ 1008 ಜನ ಮಹಿಳೆಯರು ಒಳಗೊಂಡು ವಾಲ್ಮೀಕಿ ನಾಯಕರ ಸಮಾಜದ ಜನ ಹಾಗೂ ಸಾರ್ವಜನಿಕರು ಸೇರಿದಂತೆ ಅಂದಾಜು 4 ಸಾವಿರ ಜನ ಮೆರವಣಿಗೆಯಲ್ಲಿ ಭಾಗವಹಿಸುವ ನಿರೀಕ್ಷೆ ಇದೆ ಎಂದು ಮುಖಂಡರು ತಿಳಿಸಿದ್ದಾರೆ.

ಡಿ.24ರಿಂದಲೇ ವಾಲ್ಮೀಕಿ ವೃತ್ತದಲ್ಲಿ ಹೋಮ ಹವನ ನಡೆಯಲಿದ್ದು, ಡಿ.25ರಂದು ಬೆಳಿಗ್ಗೆಯಿಂದ ವಾಲ್ಮೀಕಿ ವೃತ್ತದಲ್ಲಿ ಪೂಜೆ ನಡೆಯಲಿದೆ.

ಜ.03ರಂದು ಸಂಜೆ 5 ಗಂಟೆಗೆ ಮಹರ್ಷಿ ವಾಲ್ಮೀಕಿಯವರ ಪುತ್ಥಳಿಯ ಅನಾವರಣ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದಲ್ಲಿ ಸಚಿವ ಸತೀಶ್ ಜಾರಕಿಹೊಳಿ, ಮಾಜಿ ಸಚಿವರಾದ ಕೈ.ಎನ್. ರಾಜಣ್ಣ, ಬಿ.ನಾಗೇಂದ್ರ, ಜಿಲ್ಲಾ ಉಸ್ತುವಾರಿ ಸಚಿವ ಬಿ.ಜಡ್.ಜಮೀರ್ ಅಹ್ಮದ್ ಖಾನ್, ರಾಜ್ಯಸಭಾ ಸದಸ್ಯ ಡಾ.ಸಯ್ಯದ್ ಹುಸೇನ್, ಶಾಸಕರಾದ ಜೆ.ಎನ್.ಗಣೇಶ್ ಸೇರಿದಂತೆ ಹಲವು ಶಾಸಕರು ಭಾಗಿಯಾಗಲಿದ್ದಾರೆ. ಶಾಸಕ ನಾರಾ ಭರತ್ ರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ರಾಜನಹಳ್ಳಿ ವಾಲ್ಮೀಕಿ ಪೀಠದ ಪ್ರಸನ್ನಾನಂದಪುರಿ ಸ್ವಾಮೀಜಿಯವರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ.

ವಾಲ್ಮೀಕಿ ವೃತ್ತಕ್ಕೆ ಶಾಸಕ ನಾರಾ ಭರತ್ ರೆಡ್ಡಿ ಭೇಟಿ, ಪರಿಶೀಲನೆ: ಜ.03ರ ವಾಲ್ಮೀಕಿಯವರ ಪುತ್ಥಳಿಯ ಅನಾವರಣ ಕಾರ್ಯಕ್ರಮದ ಹಿನ್ನಲೆಯಲ್ಲಿ ಶಾಸಕ ನಾರಾ ಭರತ್ ರೆಡ್ಡಿ ಮಂಗಳವಾರ ಬೆಳಿಗ್ಗೆ ಹಾಗೂ ಸಂಜೆ ವಾಲ್ಮೀಕಿ ವೃತ್ತಕ್ಕೆ ಭೇಟಿ ನೀಡಿ ವೃತ್ತ ನಿರ್ಮಾಣದ ಅಂತಿಮ ಹಂತದ ಸಿದ್ಧತೆಗಳಿಗೆ ಸಂಬಂಧಿಸಿ ಸೂಚನೆ ನೀಡಿದರು.

ಈ ಸಂದರ್ಭ ವಾಲ್ಮೀಕಿಯವರ ನಾಯಕರ ಮುಖಂಡರಾದ ಪರಶುರಾಮುಡು, ಹಾವಂಭಾವಿ ಲೋಕೇಶ್, ಹಗರಿ ಗೋವಿಂದ, ಯರಗುಡಿ ಸೋಮಣ್ಣ, ಮುದಿ ಮಲ್ಲಯ್ಯ, ಎಪಿಎಂಸಿ ರಾಮಣ್ಣ, ಮಾಜಿ ಮೇಯರ್ ಜಾನಕಮ್ಮ, ಪಿ.ಜಗನ್ನಾಥ, ದೇವಿನಗರ ಹೊನ್ನೂರಪ್ಪ, ಸಂಗನಕಲ್ಲು ವಿಜಯ್, ಭವಾನಿ ಪ್ರಸಾದ್, ಗಂಗಾಧರ, ಗಂಗಪ್ಪ, ಸುಧಾಕರ್, ರಾಜು, ನರೇಂದ್ರ, ಗೋವಿಂದರಾಜು, ಲಾಲಸ್ವಾಮಿ ಸೇರಿದಂತೆ ಹಲವರು ಹಾಜರಿದ್ದರು.

# ನಾಡಗೌಡರ ಖಡಕ್ ಎಚ್ಚರಿಕೆ ಕೆಲಸ ಮಾಡದಿದ್ದರೆ ಜಾಗ ಖಾಲಿ ಮಾಡಿ

ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:

ಸಾರ್ವಜನಿಕರ ಸಮಸ್ಯೆಗಳನ್ನು ಅರಿತು ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸರ್ಕಾರದ ಮಾರ್ಗದರ್ಶನದಂತೆ ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಕೆಲವು ಇಲಾಖೆಯ ಅಧಿಕಾರಿಗಳ ನಿರ್ಲಕ್ಷ ಕಂಡು ಬಂದಿದೆ ಅಂಥವರು ಜಾಗ ಖಾಲಿ ಮಾಡಿ ಹೋಗಬಹುದು ಎಂದು ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಶಾಸಕ ಸಿ ಎಸ್ ನಾಡಗೌಡ ಅಪ್ಪಾಜಿ ಖಡಕ್ ಎಚ್ಚರಿಕೆ ನೀಡಿದರು. ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಮಂಗಳವಾರ ಜಿಪಂ ವಿಜಯಪುರ ಹಾಗೂ ತಾಪಂ ತಾಳಿಕೋಟಿ ಇವರ ಸಹಯೋಗದಲ್ಲಿ ಹಮ್ಮಿಕೊಂಡ ತಾಲೂಕ ಮಟ್ಟದ ಅಧಿಕಾರಿಗಳ ತ್ರೈಮಾಸಿಕ ಕೆ ಡಿ ಪಿ ಸಭೆ, ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಳೆದ ಎರಡು ದಿನಗಳಿಂದ ಪಟ್ಟಣದ ವಾರ್ಡ್ ಮಟ್ಟದ ಸಭೆಗಳನ್ನು ನಡೆಸಿದ್ದು ಇಲ್ಲಿರುವ ಪ್ರಮುಖ ಮೂಲಭೂತ ಸೌಕರ್ಯಗಳ ಸಮಸ್ಯೆಗಳನ್ನು ಪರಿಹರಿಸಲು ಹಾಗೂ ಉತಾರಗಳ ದೊಡ್ಡ ಸಮಸ್ಯೆ ಇದ್ದು ಅದನ್ನು ಸರಿಪಡಿಸಬೇಕೆಂದು ಮುಖ್ಯಾಧಿಕಾರಿಗೆ ತಿಳಿಸಿದರು. ಪಟ್ಟಣದ ಸಮೀಪ ಇರುವ ಡಾಬಾಗಳಲ್ಲಿ ಹಾಗೂ ಗ್ರಾಮಗಳಲ್ಲಿ ಅಕ್ರಮವಾಗಿ ಸಾರಾಯಿ ಮಾರಾಟವಾಗುವುದನ್ನು ತಡೆಯಬೇಕು ಇದರಿಂದ



ಕುಟುಂಬಗಳು ಹಾಗೂ ಯುವಕರು ಹಾಳಾಗಿ ಹೋಗುತ್ತಿದ್ದಾರೆ ಎಂದು ತಿಳಿಸಿ ಕಟ್ಟು ನಿಟ್ಟಿನ ಕ್ರಮಕ್ಕಾಗಿ ಅಬಕಾರಿ ಇಲಾಖೆ ಸಿಬ್ಬಂದಿಗಳಿಗೆ ಆದೇಶಿಸಿದರು, ಅಬಕಾರಿ ಅಧಿಕಾರಿಗಳು ಸಭೆಯಲ್ಲಿ ಗೈರಾಗಿರುವುದಕ್ಕೆ ಸಿಡಿಮಿಡಿಕೊಂಡ ಶಾಸಕರು ಮುಂದೆ ಹೀಗಾಗದಂತೆ ನೋಡಿಕೊಳ್ಳಲು ತಿಳಿಸಿದರು. ಸಾರ್ವಜನಿಕರು ಸೇವೆಯ ದೃಷ್ಟಿಯಿಂದ ಆರೋಗ್ಯ ಇಲಾಖೆ ಪ್ರಮುಖವಾಗಿದ್ದು ಇಲ್ಲಿ ಸಾಕಷ್ಟು ಸಮಸ್ಯೆಗಳಿವೆ ವೈದ್ಯರು ಸರಿಯಾಗಿ ಕಾರ್ಯನಿರ್ವಹಿಸುವಂತೆ ನೋಡಿಕೊಳ್ಳಬೇಕು, ಸರಕಾರಿ ಆಸ್ಪತ್ರೆಗೆ ಬರುವರು ಅತಿಹೆಚ್ಚಿನ ರೋಗಿಗಳು ಬಡವರು ಅವರ ಕುರಿತು ನಿರ್ಲಕ್ಷೆ ಬೇಡ ಅವರಿಗೆ ಸರ್ಕಾರಿ ಆಸ್ಪತ್ರೆಯಿಂದಲೇ ಔಷಧಿಗಳು ಸಿಗುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿ ಡಯಾಲಿಸಿಸ್ ಘಟಕ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ನಮ್ಮ ಸರ್ಕಾರ ರೈತರ ಹಿತವನ್ನು ಕಾಪಾಡಲು ಬದ್ಧವಾಗಿದೆ ಅವರಿಗೆಲ್ಲ ರೀತಿಯ ಅನುಕೂಲ ಮಾಡಿಕೊಡುತ್ತಿದೆ ಬೆಳೆ ಹಾನಿಯನ್ನು ಈಗಾಗಲೇ ನೀಡಲಾಗಿದ್ದು ಬೆಳೆ ವಿಮೆಯನ್ನು ಕಂಪನಿಯವರು ನೀಡಲು ಸೂಕ್ತ ಕ್ರಮ ವಹಿಸಲಾಗುತ್ತಿದೆ ವಿರೋಧಪಕ್ಷದವರು ವಿನಾಕಾರಣ ಇದರಲ್ಲಿ ರಾಜಕಾರಣ ಮಾಡುತ್ತಿದ್ದಾರೆ ಅದನ್ನು ಅವರು ನಿಲ್ಲಿಸಬೇಕು, ರೈತ ನಾಯಕರು ದಾರಿ ತಪ್ಪಿಸುವ ಕೆಲಸ ಮಾಡುವಾಗ ಅಧಿಕಾರಿಗಳು ಮಾಧ್ಯಮದ ಮುಖಾಂತರ ಅದಕ್ಕೆ ಸ್ಪಷ್ಟನೆ ನೀಡಬೇಕೆಂದು ತಿಳಿಸಿದರು. ತಾಳಿಕೋಟಿ ಪಟ್ಟಣದಲ್ಲಿ ಸುಸಜ್ಜಿತವಾದ ಒಂದು ಕ್ರೀಡಾಂಗಣ ಮಾಡುವ ಉದ್ದೇಶವಿದೆ ಇದಕ್ಕೆ ನಿವೇಶನದ ಅಗತ್ಯವಿದ್ದು ಅಧಿಕಾರಗಳು ಈ ನಿಟ್ಟಿನಲ್ಲಿ ಸಲಹೆ ನೀಡಬೇಕು ಎಂದರು. ಆಹಾರ ಇಲಾಖೆಯ ಅಧಿಕಾರಿಗಳ ನಿರ್ಲಕ್ಷದ ಕುರಿತು ಬೇಸರ ವ್ಯಕ್ತಪಡಿದ ಶಾಸಕರು ಕೆಲಸ ಮಾಡಲು ಸಾಧ್ಯ ಇಲ್ಲದಿದ್ದರೆ ವರ್ಗಾವಣೆ ಮಾಡಿಕೊಂಡು ಹೋಗಿ ಎಂದರು. ಪಟ್ಟಣದಲ್ಲಿ ನಡೆಯುತ್ತಿರುವ ಅಮೃತಧಾರೆ ಯೋಜನೆಯ ಪೈಪ್ಲೈನ್ ಕರೆ ಜರುಗಿಸಬೇಕು ಇದಕ್ಕಾಗಿ ಪೀಡಿಗಳು ಹೆದರುವ ಅಗತ್ಯವಿಲ್ಲ ಎಂದರು.

ಕೃಷಿ, ತೋಟಗಾರಿಕೆ ಇಲಾಖೆಯಲ್ಲಿ ರೈತರಿಗೆ ಲಭ್ಯವಾಗುವ ಬೀಜ, ರಸಗೊಬ್ಬರ, ಔಷಧಗಳ ಸಂಗ್ರಹ ಮತ್ತು ವಿತರಣೆ ಬಗ್ಗೆ ಮಾಹಿತಿ ಪಡೆದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತ, ಮೊರಾರ್ಜಿ ದೇಸಾಯಿ ಹಾಗೂ ಸಮಾಜ ಕಲ್ಯಾಣ ಆದಷ್ಟು ಬೇಗ ಮುಗಿಸಲು ಸೂಚನೆ ನೀಡಿದರು. ಸರ್ಕಾರದ ಪಂಚ ಗ್ಯಾರಂಟಿಗಳಲ್ಲಾದ ಗೃಹ ಜ್ಯೋತಿ ಹಾಗೂ ಶಕ್ತಿ ಯೋಜನೆ ಕುರಿತು ಎರಡು ಇಲಾಖೆಯವರಿಂದ ವರದಿ ಪಡೆದು ಸಂತೋಷವನ್ನು ವ್ಯಕ್ತಪಡಿಸಿದ ಶಾಸಕರು ಇದರಿಂದ ಎಲ್ಲರಿಗೂ ಅನುಕೂಲವಾಗುತ್ತಿದೆ ಆದರೆ ಗ್ರಹಲಕ್ಷ್ಮಿ ಯೋಜನೆ ಫಲಾನುಭವಿಗಳನ್ನು ಸರಿಯಾಗಿ ಆಯ್ಕೆ ಮಾಡಲು ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮಗಳ ಅಭಿವೃದ್ಧಿಗೆ ಭದ್ರ ಬುನಾದಿ ಹಾಕಲು ಸುಧಾರಿತ ಕ್ರಮ ಕೈಗೊಳ್ಳಬೇಕು. ಆರೋಗ್ಯ, ಸ್ವಚ್ಛತೆ, ಕುಡಿಯುವ ನೀರು, ವಿದ್ಯುತ್ ಹಾಗೂ ಮೂಲಸೌಲಭ್ಯಗಳನ್ನು ನೀಡುವಲ್ಲಿ ನಿಗಧಿತ ಯೋಜನೆಗಳನ್ನು ರೂಪಿಸಬೇಕು. ಅಧಿಕಾರಿಗಳು ಸಕ್ರಿಯವಾಗಿ ಕೆಲಸ ಮಾಡಿ ಮತಕ್ಷೇತ್ರದ ಜನರಿಗೆ ಸರ್ಕಾರದ ಸೌಲಭ್ಯಗಳನ್ನು ಮುಟ್ಟಿಸಿ ಎಂದು ತಿಳಿಸಿ ಕೆಲವು ಗ್ರಾಮಗಳಲ್ಲಿ ಸರ್ಕಾರಿ ಜಾಗಗಳನ್ನು ಅತಿಕ್ರಮಣ ಮಾಡಲಾಗಿದೆ ಇದರ ಕುರಿತು ಕಟ್ಟು ನಿಟ್ಟಿನ ಕ್ರಮ ಇಲಾಖೆಗಳ ಬಗ್ಗೆ ಚರ್ಚಿಸಿದ ಮಾನ್ಯರು, ವಸತಿ ನಿಲಯಗಳ ಪ್ರವೇಶಾತಿ, ಮಕ್ಕಳ ಹಾಜರಾತಿ ಕುರಿತು ಪರಿಶೀಲಿಸಿದರು. ಮಕ್ಕಳಿಗೆ ಸಕಾಲದಲ್ಲಿ ಊಟ–ಉಪಹಾರ ವಿತರಿಸಬೇಕು. ಶೇ.100% ಫಲಿತಾಂಶ ಹೊಂದಲು ಶೈಕ್ಷಣಿಕ ಕ್ರಮ ಕೈಗೊಳ್ಳಿ. ಹೊಸ ವಸತಿ ನಿಲಯಗಳಿಗೆ ಜಾಗ ಮಂಜೂರಾತಿ ನೀಡಲು ಅಧಿಕಾರಿಗಳಿಗೆ ಸೂಚಿಸಿದರು.

# ಹಾರಕೂಡದ ಚನ್ನಬಸವ ಶಿವಯೋಗಿಗಳ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ :

ತಾಲೂಕಿನ ಸುಕ್ಷೇತ್ರ ಹಾರಕೂಡದ ಪರಮಪೂಜ್ಯಶ್ರೀ ಸದ್ಗುರು ಚನ್ನಬಸವ ಶಿವಯೋಗಿಗಳ 74ನೇ ಜಾತ್ರಾ ಮಹೋತ್ಸವದ ಶ್ರೀ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ದಿವ್ಯ ನೇತೃತ್ವದಲ್ಲಿ ಇದೇ 24, 25 ಮತ್ತು 26 ರಂದು ಮೂರು ದಿನಗಳ ಅದ್ದೂರಿಯಾಗಿ ಜರುಗಲಿದೆ.

ದಿನಾಂಕ 24 ರಂದು ಸಾಯಂಕಾಲ 6 ಗಂಟೆಗೆ ಪರಮಪೂಜ್ಯಶ್ರೀ ಸದ್ಗುರು ಚನ್ನಬಸವ ಶಿವಯೋಗಿಗಳ ರಥೋತ್ಸವ ವಿಜೃಂಭಣೆಯಿಂದ ಜರುಗಲಿದೆ. ನಂತರ ಸಾಯಂಕಾಲ 7 ಗಂಟೆಗೆ ಶಿವಾನುಭವ ಚಿಂತನ ಗೋಷ್ಠಿಯ ಕಾರ್ಯಕ್ರಮದ ಪಾವನ ಸನ್ನಿಧಾನವನ್ನು ಇಲಕಲ್ಲ. ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ ಪೂಜ್ಯ ಡಾ. ಶ್ರೀ ಮ. ನಿ. ಪ್ರ. ಗುರು ಮಹಾಂತ ಸ್ವಾಮಿಗಳು ವಹಿಸುವರು.

ನೇತೃತ್ವ ಪೀಠಾಧಿಪತಿಗಳು "ಶಿವಾಚಾರ್ಯರತ್ನ" "ಧರ್ಮ ರತ್ನ" "ಸದ್ಧರ್ಮ ಶಿಖಾಮಣಿ" "ಕರ್ನಾಟಕ ಸಾಂಸ್ಕೃತಿಕ ರತ್ನ" ಶ್ರೀ ಷ. ಬ್ರ. ಡಾ. ಚನ್ನವೀರ ಶಿವಾಚಾರ್ಯರು ಎಂ. ಎ. ಸುಕ್ಷೇತ್ರ ಹಾರಕೂಡ ವಹಿಸಲಿದ್ದಾರೆ. ಹುಲಸೂರಿನ ಶ್ರೀ ಗುರುಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಡಾ. ಶಿವಾನಂದ ಮಹಾಸ್ವಾಮಿಜಿಗಳು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ.

ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣ ಪ್ರಕಾಶ ಪಾಟೀಲ. ಪೌರಾಡಳಿತ ಮತ್ತು ಹಜ್ ಖಾತೆ ಸಚಿವರಾದ ರಹೀಮ್ ಖಾನ. ಡಾ. ಅಜಯಸಿಂಗ್ ಅಧ್ಯಕ್ಷರು, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಹಾಗೂ ಶಾಸಕರು ಜೇವರ್ಗಿ. ಶಾಸಕರಾದ ಶರಣು ಸಲಗರ. ಹುಮನಾಬಾದ ಶಾಸಕರಾದ ಡಾ. ಸಿದ್ಧಲಿಂಗಪ್ಪಾ ಪಾಟೀಲ. ಕಲಬುರ್ಗಿ ಗ್ರಾಮೀಣ ಮತಕ್ಷೇತ್ರದ ಶಾಸಕರಾದ ಬಸವರಾಜ ಮತ್ತಿಮೂಡ. ವಿಧಾನ ಪರಿಷತ್ ಸದಸ್ಯರಾದ ಎಂ. ಜಿ. ಮುಳೆ.



ಹುಮನಾಬಾದ ವಿಧಾನ ಪರಿಷತ್ ಸದಸ್ಯರಾದ ಚಂದ್ರಶೇಖರ್ ಪಾಟೀಲ್. ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಪಾಟೀಲ.

ಬೆಂಗಳೂರು ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ ನಾರಾಯಣರಾವ. ಕಾಡ ಅಧ್ಯಕ್ಷರಾದ ಬಾಬು ಹೊನ್ನಾ ನಾಯಕ ಹಾಗೂ ಧನರಾಜ ತಾಳಂಪಳ್ಳಿ ಡಾ. ಸೋಮನಾಥ್ ಪಟ್ಟೆ. ಬಸವಂತರಾವ ಶರಣಪ್ಪಾ ಡೆಂಗಿ ಚಿಮ್ಮಾ ಇದ್ಲಾಯಿ ಹಾಗೂ ರಾಜಶೇಖರ ಶಿವಶರಣಪ್ಪಾ ಮರಗೋಳ ಮಂಗಲಗಿ ಇವರನ್ನು ಹಾರಕೂಡ ಶ್ರೀಗಳು ಸತ್ಕಾರ ಮಾಡಿ ಆಶೀರ್ವದಿಸಲಿದ್ದಾರೆ. ಇಳಕಲ್ ಹಾಗೂ ಹುಲಸೂರ ಶ್ರೀಗಳಿಗೆ ಬಸವ ಭಾನು ಪ್ರಶಸ್ತಿ ಪ್ರದಾನ. ಪೂಜ್ಯ ಶ್ರೀ ಮ.ನಿ.ಪ್ರ. ಗುರುಮಹಾಂತ ಸ್ವಾಮಿಗಳು ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನಮಠ ಇಳಕಲ್ ಮತ್ತು ಪೂಜ್ಯ ಶ್ರೀ ಮ.ನಿ.ಪ್ರ. ಡಾ. ಶಿವಾನಂದ ಮಹಾಸ್ವಾಮಿಗಳು ಶ್ರೀ ಗುರುಬಸವೇಶ್ವರ ಸಂಸ್ಥಾನಮಠ, ಹುಲಸೂರ ಇವರಿಗೆ ದಿನಾಂಕ 24– ರಂದು ಸಂಜೆ 07 ಗಂಟೆಗೆ ಹಾರಕೂಡ ಸಂಸ್ಥಾನ ಹಿರೇಮಠದ ವತಿಯಿಂದ ಪೂಜ್ಯ ಡಾ. ಚನ್ನವೀರ ಶಿವಾಚಾರ್ಯರು "ಬಸವ ಭಾನು" ಪ್ರಶಸ್ತಿಯನ್ನು ನೀಡಿ ಗೌರವಿಸುವರು. ದಿನಾಂಕ : 25. ಗುರುವಾರ ಮಧ್ಯಾಹ್ನ 2.00 ಗಂಟೆಗೆ ಜಂಗಿ ಪೈಲವಾನರ ಥೇಟರ ಕುಸ್ತಿಗಳು ಜರಗುವವು. ಪೀಠಾಧಿಪತಿಗಳು ಶ್ರೀ ಷ. ಬ್ರ. ಡಾ. ಚೆನ್ನವೀರ ಶಿವಾಚಾರ್ಯರು ಎಂ.ಎ ಸಂಸ್ಥಾನ ಹಿರೇಮಠ, ಸುಕ್ಷೇತ್ರ ಹಾರಕೂಡ ನೇತೃತ್ವ ವಹಿಸುವರು.

ಶ್ರೀ ಮ.ನಿ.ಪ್ರ. ಜಯಶಾಂತಲಿಂಗ ಮಹಾಸ್ವಾಮಿಗಳು ಶಾಂತಲಿಂಗೇಶ್ವರ ಮಠ, ಹಿರೇನಾಗಾಂವಶ್ರೀ ಮ.ನಿ.ಪ್ರ. ಚರಲಿಂಗ ಮಹಾಸ್ವಾಮಿಗಳು, ಗದ್ದುಗೆ ಮಠ, ಕಲಬುರಗಿ ಹಾಗೂ ಹುಬ್ಬಳ್ಳಿ ಶ್ರೀ ಮ.ನಿ.ಪ್ರ. ಶಿವಾನಂದ ಮಹಾಸ್ವಾಮಿಗಳು ಗುರುಬಸವ ಮಠ, ಕಲಬುರಗಿ ಸಮ್ಮುಖ ವಹಿಸುವರು. ರಾಜಶೇಖರ ಪಾಟೀಲ ಮಾಜಿ ಸಚಿವರು, ಹುಮನಾಬಾದ ಅಧ್ಯಕ್ಷತೆ ವಹಿಸುವರು. ಬಿ.ಆರ್. ಪಾಟೀಲ ಶಾಸಕರು, ಅಳಂದ ಹಾಗೂ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರು, ಕರ್ನಾಟಕ ಸರಕಾರ ಥೇಟರ ಕುಸ್ತಿ ಉದ್ಘಾಟನೆ ಮಾಡುವರು. ಬಸವರಾಜ ಪಾಟೀಲ ಅಟ್ಟೂರ, ಮಾಜಿ ಸಚಿವರು, ರೇವುನಾಯಕ ಬೆಳಮಗಿ ಮಾಜಿ ಸಚಿವರು, ಸುಭಾಸ ಗುತ್ತೇದಾರ ಮಾಜಿ ಶಾಸಕರು, ಆಳಂದ. ಮಲ್ಲಿಕಾರ್ಜುನ ಖೂಬಾ ಮಾಜಿ ಶಾಸಕರು. ರಾಜಕುಮಾರ ಪಾಟೀಲ ತೆಲ್ಕೂರ ಮಾಜಿ ಶಾಸಕರು, ಸೇಡಂ. ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ. ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಅಧ್ಯಕ್ಷರಾದ ಬಸವರಾಜ ಕೊರಕೆ. ಕಲಬುರ್ಗಿ ಮನೋರೋಗ ತಜ್ಞರು ಡಾ. ಅಮೂಲ ಡಿ. ಪತಂಗೆ. ಸಿದ್ರಾಮಪ್ಪ ಗುದಗೆ ಜಿಲ್ಲಾಧ್ಯಕ್ಷರು, ಕರ್ನಾಟಕ ರಾಜ್ಯ ರೈತ ಸಂಘ, ಬೀದರ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ದಿನಾಂಕ 26.ರಂದು ಶುಕ್ರವಾರ ಪಶು ಪ್ರದರ್ಶನ ಹಾಗೂ ಉತ್ತಮ ಪಶುಗಳಿಗೆ ಯೋಗ್ಯ ಬಹುಮಾನ ಕೊಡಲಾಗುವುದು. ಹಾಗೂ ದಿನಾಂಕ 28. ರಂದು ಸಾಯಂಕಾಲ 6.30 ಗಂಟೆಗೆ ಪೂಜ್ಯಶ್ರೀ ಡಾ. ಚೆನ್ನವೀರ ಶಿವಾಚಾರ್ಯರ ದಿವ್ಯ ನೇತ್ರತ್ವದಲ್ಲಿ ಹಂದರಂಬಲಿ ಕಾರ್ಯಕ್ರಮ ಜರಗುವುದು. 50 ಸಾವಿರಕ್ಕೂ ಹೆಚ್ಚು ಭಕ್ತರು ಜಾತ್ರಾ ಮಹೋತ್ಸವದ ಸಮಾರೋಪದಲ್ಲಿ ಭಾಗವಹಿಸಿ, ಹಾರಕೂಡ ಶ್ರೀಗಳ ದರ್ಶನ ಪಡೆದು, ಪ್ರಸಾದ ಸ್ವೀಕರಿಸುವರು. 74ನೇ ಜಾತ್ರಾ ಮಹೋತ್ಸವದ ದಾಸೋಹ ಸೇವೆಯನ್ನು ಶ್ರೀ ಸಂತೋಷ ಪಾಟೀಲ ಹಾರಕೂಡ, ರಾಖಿ ಕನ್ಸಟ್ರಕ್ಷನ್ಸ್, ಕಲಬುರಗಿ ಅವರು ಮಾಡುವರು. ಸರ್ವರಿಗೂ ಆದರದ ಸ್ವಾಗತ ಕೋರುವವರು, ಜಾತ್ರಾ ಮಹೋತ್ಸವದ ವ್ಯವಸ್ಥಾಪಕರು, ಜಗನ್ನಾಥ ಪಾಟೀಲ ಮಂಠಾಳ ಹಾಗೂ ಸಮಸ್ತ ಸದ್ಭಕ್ತ ಮಂಡಳಿ ಗದಲೇಗಾಂವ (ಬಿ), ಸಿರಗಾಪೂರ, ಹಾರಕೂಡ ವತಿಯಿಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





ಬಸವಕಲ್ಯಾಣ :– ತಾಲೂಕಿನ ಹಾರಕೂಡ ಪೂಜ್ಯ ಶ್ರೀ ಸದ್ಗುರು ಚನ್ನಬಸವ ಶಿವಯೋಗಿಗಳವರ 74ನೇ ಜಾತ್ರಾ ಮಹೋತ್ಸವದ ನಿಮಿತ್ತ ವಿದ್ಯುತ್ ದೀಪಗಳಿಂದ ಝಗಮಗಿಸುತ್ತಿರುವ ಹಾರಕೂಡ ಶ್ರೀಮಠ. ಇಂದು 24. ರಂದು ಸಂಜೆ 6 ಗಂಟೆಗೆ ಪೂಜ್ಯಶ್ರೀ ಸದ್ಗುರು ಚನ್ನಬಸವ ಶಿವಯೋಗಿಗಳವರ ರಥೋತ್ಸವ ಜರಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. (ಮಲ್ಲಮ್ಮ ನುಡಿ ಚಿತ್ರ).

# ಕೃಷಿಯಲ್ಲಿ ಹೊರ ದೇಶಗಳೊಂದಿಗೆ ಪೈಪೋಟಿ ನಡೆಸಿ : ಜಾರಕಿಹೊಳಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ರೈತರು ಕೃಷಿ ಮತ್ತು ತೋಟಗಾರಿಕೆಯಲ್ಲಿ ವಿನೂತನದ ತಂತ್ರಜ್ಞಾನ ಹೊಸ ಹೊಸ ತಳಿಗಳತ್ತ ಅಣಿಯಾದಾಗಿ ಉತ್ಪಾದನೆಯತ್ತ ಗಮನಹರಿಸಿದಾಗ ಮಾತ್ರ ಬೇರೆ ದೇಶಗಳ ಜೊತೆ ಪೈಪೋಟಿ ಮಾಡಲಿಕ್ಕೆ ಸಾಧ್ಯವಾಗುತ್ತದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳೆ ಹೇಳಿದರು.

ತೋಟಗಾರಿಕೆ ವಿವಿಯ ಉದ್ಯಾಗಿರಿಯಲ್ಲಿ ಮಂಗಳವಾರ ರಾಷ್ಟ್ರೀಯ ದಿನಾಚರಣೆ, ಫಲಶ್ರೇಷ್ಠ ರೈತರಿಗೆ ಪ್ರಶಸ್ತಿ ಪ್ರಧಾನ ಹಾಗೂ ತೋಟಗಾರಿಕೆ ಮೇಳದ ಸಮಾರೋಪ ಸಮಾರಂಭದ ಮುಖ್ಯ ಅತಿಥಿಗಳಾ ಮಾತನಾಡಿದ ಅವರು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲದರಲ್ಲೂ ಸ್ಪರ್ಧೆ ಮಾಡಬೇಕಿದೆ. ಅದು ಮಾರುಕಟ್ಟೆ ಇರಬಹುದು, ಹೊಸ ತಳಿ, ಕಡಿಮೆ ಭೂಮಿಯಲ್ಲಿ ಹೆಚ್ಚು ಬೆಳೆಯುವಾಗ ನಮ್ಮ ಮುಂದಿರುವ ಸವಾಲುಗಳನ್ನು ನಾವು ಸ್ವೀಕರಿಸಬೇಕಾಗಿದೆ. ಅದಕ್ಕೆ ನಾವು ಕೂಡಾ ತಯಾರಾಗಬೇಕಾಗಿದೆ. ಇದರಿಂದ ಬೇರೆ ದೇಶಗಳ ಜೊತೆ ಸ್ಪರ್ಧೆಗೆ ಇಳಿಯಲು ಸಾಧ್ಯವಾಗುತ್ತದೆ ಎಂದರು.

ಬಾಗಲಕೋಟೆಯಲ್ಲಿ ತೋಟಗಾರಿಕೆ ಸ್ಥಾಪನೆ ಆದಮೇಲೆ ಬಹಳಷ್ಟು ಹೊಸ ಹೊಸ ತಳಿಗಳನ್ನು ಹೊರತಂದಿದ್ದು, ಆ ತಳಿಗಳ ಪರಿಚಯ ಮಾಡುವಂತಹ ಪ್ರಯತ್ನ ಮಾಡಿದೆ. ನಾವೆಲ್ಲ ಈಗಾಗಲೇ ಬಹಳಷ್ಟು ರೈತರು ಅಳವಡಿಸಿಕೊಂಡಿದ್ದೇವೆ. ನಾವು ಈ ಭಾಗದಲ್ಲಿ ಕಬ್ಬನ್ನು ಹೆಚ್ಚಿನ ಪ್ರಮಾಣದಲ್ಲಿ ಬೆಳೆಯುತ್ತಿದ್ದೇವೆ. ಇದರ ಜೊತೆಗೆ ಪರ್ಯಾಯ ಬೆಳೆಗಳ ಅವಶ್ಯಕತೆ ಬಹಳಷ್ಟಿದೆ. ಸಾಧನೆ ಮಾಡಿದಂತ ರೈತರು ನಮಗೆಲ್ಲ ಪ್ರೇರಣೆಯಾಗಿದ್ದಾರೆ. 8 ಜಿಲ್ಲೆಯ ರೈತರಿಗೆ ಪ್ರಶಸ್ತಿ ಪ್ರಧಾನ ಮಾಡಲಾಗಿದೆ. ಮುಂದಿನ ಬಾರಿ ತಾವುಗಳ ಪ್ರಶಸ್ತಿ ಪಡೆಯುವಂತ ಸಾಧನೆ ಮಾಡುವತ್ತ ಹೆಜ್ಜೆ ಹಾಕಬೇಕು ಎಂದು ತಿಳಿಸಿದರು.

ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ತೋಟಗಾರಿಕೆ ಮೇಳವನ್ನು ಮಾಡುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಆಕರ್ಷಣೆಯಾಗಲಿ, ಇಂತಹ ಮೇಳದಿಂದ ಸಾಕಷ್ಟು ತೋಟಗಾರಿಕೆಯಲ್ಲಿ ಬದಲಾವಣೆ ಬರಲಿ. ಕಾರ್ಯಕ್ರಮವನ್ನು ತೋವಿವಿಯ ಕುಲಪತಿಗಳು ಮೂರು ದಿನಗಳ ಕಾಲ ಅಚ್ಚುಕಟ್ಟಾಗಿ ಕಾರ್ಯಕ್ರಮ ಮಾಡಿದ್ದಾರೆ. ಮುಂದಿನ ಸಲ ಇನ್ನಷ್ಟು ವಿಶೇಷತೆಯಿಂದ ಕೂಡಿರಲಿ ಎಂದು ತಿಳಿಸಿದರು.

ಸಂಸದ ಪಿ.ಸಿ.ಗದ್ದಿಗೌಡರ ಮಾತನಾಡಿ ರೈತರಿಗೆ ಅವರ ಶ್ರಮಕ್ಕೆ ತಕ್ಕಂತೆ ಉತ್ಪಾದನೆ ಬಂದು ಅವರ ಆದಾಯ ಮಟ್ಟ ಹೆಚ್ಚಾಗಬೇಕಿದೆ. ವಿಶ್ವವಿದ್ಯಾಲಯ ಹೊರತಂದ ವಿನೂತನ ತಂತ್ರಜ್ಞಾನದ ಮೂಲಕ ಹೊಸ ಮಾದರಿಯ ತಳಿಗಳ ಮಾಹಿತಿಯನ್ನು ಪಡೆದುಕೊಂದು ಕೃಷಿ ಮತ್ತು ತೋಟಗಾರಿಕೆಯಲ್ಲಿ ಉತ್ತಮ ಬೆಳೆ ಬೆಳೆಯಲು ಮುಂದಾಗಬೇಕು. ಮುಖ್ಯವಾಗಿ ಯುವಕರು ಕೃಷಿಯತ್ತ ಹೆಚ್ಚಿನ ಗಮನಹರಿಸುವ ಕೆಲಸವಾಗಬೇಕು. ಕೇವಲ ಕಬ್ಬನ್ನು ಬೆಳೆಯುವದರಿಂದ ಮಣ್ಣಿನ ಫಲವತ್ತತೆ ಕಡಿಮೆಯಾಗುತ್ತದೆ. ಉತ್ತಮ ಬೆಳೆ ತೆಗೆಯುವದರ ಜೊತೆಗೆ ಮಣ್ಣಿ ಫಲವತ್ತತೆ ಕಾಪಾಡಿಕೊಳ್ಳುವತ್ತ ಗಮನಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಧಿವ್ಯಸಾನಿಧ್ಯವನ್ನು ಗದಗ ನಂದಿವೇರಿ ಸಂಸ್ಥಾನಮಠದ ಶಿವಕುಮಾರ ಶ್ರೀಗಳು ವಹಿಸಿದ್ದರು. ವಿಧಾನ ಪರಿಷತ್ ಶಾಸಕ ಹನಮಂತ ನಿರಾಣಿ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಹಾಂತೇಶ ಹಟ್ಟಿ, ಜಿ.ಪಂ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಪಿ.ಎಲ್.ಪಾಟೀಲ, ಶಿವಮೊಗ್ಗದ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ಡಾ.ಆರ್.ಸಿ.ಜಗದೀಶ, ಬಾಗಲಕೋಟೆ ನಬಾರ್ಡನ ಜಿಲ್ಲಾ ವ್ಯವಸ್ಥಾಪಕ ಡಾ.ಮಂಜುನಾಥ ರೆಡ್ಡಿ, ತೋವಿವಿಯ ಕುಲಪತಿ ಡಾ .ವಿಷ್ಣುವರ್ಧನ ಸೇರಿದಂತೆ ತೋವಿವಿಯ ಆಡಳಿತ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.

**8 ಜಿಲ್ಲೆಯ ಫಲಶ್ರೇಷ್ಠ ರೈತರಿಗೆ ಪ್ರಶಸ್ತಿ ಪ್ರಧಾನ**

**ಬೆಂಗಳೂರು ಗ್ರಾಮಾಂತರ ಜಿಲ್ಲೆಯ ರಮೇಶ ಎಚ್, ಬೆಂಗಳೂರು ನಗರ ಜಿಲ್ಲೆಯ ಮುನಿರಾಜು ಬಿ.ಎನ್, ರಾಮನಗರ ಜಿಲ್ಲೆಯ ದೇವರಾಜು ಜಿ, ತುಮಕೂರಿನ ಚನ್ನಕೇಶವ ಸ್ವಾಮಿ, ಕೊಪ್ಪಳ ಜಿಲ್ಲೆಯ ಸುದೇಶಕುಮಾರ ಪಟ್ಟಣಶೆಟ್ಟಿ, ರಾಯಚೂರು ಜಿಲ್ಲೆಯ ಪದ್ಮಾವತಿ ಬಾಗೋಡಿ, ಬಳ್ಳಾರಿ ಜಿಲ್ಲೆಯ ಕೆ.ಬಸಪ್ಪ ಚನ್ನಬಸಪ್ಪ ಹಾಗೂ ವಿಜಯನಗರ ಜಿಲ್ಲೆಯ ಪರಮ ಪೂಜ್ಯ ಡಾ.ಶ್ರೀ ಮಹೇಶ್ವರ ಸ್ವಾಮಿಗಳಿಗೆ ಪ್ರಶಸ್ತಿ ಪ್ರಧಾನ ಮಾಡಲಾಯಿತು.**

# ನಿರಂತರ ಜ್ಯೋತಿ ತಡೆ ಜೆಸ್ಕಾಂ
## ಸಿಬ್ಬಂದಿ ವಿರುದ್ಧ ನಮ್ಮ ಕರವೇ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಜಿಲ್ಲೆಯ ಗುರುಮಠಕಲ್ ತಾಲೂಕಿನ ಯಲಸತ್ತಿ ಗ್ರಾಮದ ರೈತನೊಬ್ಬನಿಗೆ ನೀಡಲಾಗುತ್ತಿದ್ದ ನಿರಂತರ ಜ್ಯೋತಿ (24ಥ7) ವಿದ್ಯುತ್ ಪೂರೈಕೆಯನ್ನು ಯಾವುದೇ ಮುಂಚಿತ ಸೂಚನೆ ಇಲ್ಲದೆ ಏಕಪಕ್ಷೀಯವಾಗಿ ತಡೆಹಿಡಿದಿರುವ ಜೆಸ್ಕಾಂ ಸಿಬ್ಬಂದಿಗಳ ವಿರುದ್ಧ ನಮ್ಮ ಕರುನಾಡ ರಕ್ಷಣಾ ವೇದಿಕೆ (ನಮ್ಮ ಕರವೇ) ಆರೋಪಿಸಿದೆ.

ಮಂಗಳವಾರ ಇಲ್ಲಿನ ಜೆಸ್ಕಾಂ ಕಚೇರಿಯ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್‌ರಿಗೆ ಮನವಿ ಸಲ್ಲಿಸಿ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ರವಿ ಕೆ. ಮುದ್ನಾಳ್, ಯಲಸತ್ತಿ ಗ್ರಾಮದ ರೈತ ಬುಗಪ್ಪ ತಂದೆ ಸಣ್ಣ ಬುಡ್ಡಪ್ಪ ಅವರ ಹೊಲಕ್ಕೆ ಈ ಹಿಂದೆ ನಿರಂತರ ವಿದ್ಯುತ್ ಪೂರೈಕೆ ಇತ್ತಾದರೂ, ಇತ್ತೀಚಿನ ದಿನಗಳಲ್ಲಿ ಯಾವುದೇ ಮುನ್ಸೂಚನೆ ನೀಡದೆ ವಿದ್ಯುತ್ ಸ್ಥಗಿತಗೊಳಿಸಲಾಗಿದೆ ಎಂದು ದೂರಿದರು.

ಈ ಕುರಿತು ರೈತ ಬುಗಪ್ಪ ಜೆಸ್ಕಾಂ ಸಿಬ್ಬಂದಿಗಳಾದ ಜೆಇ ದೇವರಾಜ್ ಹಾಗೂ ಲೈನ್‌ಮ್ಯಾನ್ ಯಂಕಪ್ಪ ನಂದೆಪಲ್ಲಿ ಅವರಿಗೆ ಪ್ರಶ್ನಿಸಿದಾಗ "ಲೋಡ್ ಬೀಳುತ್ತದೆ, ಬೇಕಾದರೆ ಬೇರೆಯವರ ಹೊಲದ ವಿದ್ಯುತ್ ಕಟ್ ಮಾಡಿದರೆ ನಿನಗೆ ಕೊಡುತ್ತೇನೆ" ಎಂದು ಅಸಭ್ಯವಾಗಿ ವರ್ತಿಸಿದ್ದು, "ಬೇಕಾದರೆ ಯಾರಿಗೆ ಬೇಕಾದರೂ ಕಂಪ್ಲೇಂಟ್ ಕೊಡು" ಎಂದು ಸವಾಲಿನ ಉತ್ತರ ನೀಡಿದ್ದಾರೆ ಎಂದು ಆರೋಪಿಸಿದರು.

ಒಂದೇ ಫೀಡರ್‌ನಲ್ಲಿದ್ದರೂ ಕೆಲ ಹೊಲಗಳಿಗೆ ಹಣದಾಸೆಗಾಗಿ ನಿಯಮ ಮೀರಿ ನಿರಂತರ ವಿದ್ಯುತ್ ಪೂರೈಕೆ ಮಾಡಲಾಗುತ್ತಿದ್ದು, ಈ ರೈತನಿಗೆ ಮಾತ್ರ ವಿದ್ಯುತ್ ನಿರಾಕರಿಸಿರುವುದು ಸ್ಪಷ್ಟ ಅಸಮಾನತೆ ಹಾಗೂ ಭ್ರಷ್ಟಾಚಾರದ ಶಂಕೆಗೆ ಕಾರಣವಾಗಿದೆ ಎಂದು ತಿಳಿಸಿದರು.

ನಿರಂತರ ವಿದ್ಯುತ್ ಪೂರೈಕೆ ಇಲ್ಲದ ಕಾರಣ ರೈತನ ಹೊಲದಲ್ಲಿ ಬೆಳೆದಿದ್ದ ಚೆಂಡು ಹೂ, ಬದನೆಕಾಯಿ, ಟೊಮೇಟೋ, ಅಂಬ್ರೆಕಾಯಿ ಸೇರಿದಂತೆ ಹಲವು ತರಕಾರಿ ಬೆಳೆಗಳು ನೀರಿಲ್ಲದೆ ಸಂಪೂರ್ಣವಾಗಿ ನಾಶವಾಗಿವೆ. ಇದರಿಂದ ರೈತ ಹಾಗೂ ಅವರ ಕುಟುಂಬ ಜೀವನೋಪಾಯ ಸಂಕಷ್ಟಕ್ಕೆ ಒಳಗಾಗಿದೆ ಎಂದು ಹೇಳಿದರು.

ಕೂಡಲೇ ರೈತನ ಹೊಲಕ್ಕೆ ನಿರಂತರ ಜ್ಯೋತಿ ಪುನಃ ಒದಗಿಸಬೇಕು, ಅಕ್ರಮವಾಗಿ ವಿದ್ಯುತ್ ಪೂರೈಕೆ ನೀಡುತ್ತಿರುವ ಕುರಿತು ತನಿಖೆ ನಡೆಸಬೇಕು ಹಾಗೂ ರೈತನೊಂದಿಗೆ ಅಸಭ್ಯವಾಗಿ ವರ್ತಿಸಿದ ಸಿಬ್ಬಂದಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಬೇಕು ಎಂದು ಕರವೇ ಆಗ್ರಹಿಸಿದೆ. ಬೇಡಿಕೆಗಳು ಈಡೇರದಿದ್ದರೆ ಜೆಸ್ಕಾಂ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದೆ.

ಮನವಿ ಸ್ವೀಕರಿಸಿ ಮಾತನಾಡಿದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ಎಇಇ), ರೈತನ ಸಮಸ್ಯೆಯನ್ನು ಆದಷ್ಟು ಬೇಗ ಪರಿಶೀಲಿಸಿ ಪರಿಹಾರ ಒದಗಿಸಿ ರೈತನಿಗೆ ತೊಂದರೆ ನೀಡಿದ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರೈತ ಬುಗಪ್ಪ ಕರವೇ ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ಲೀಲಾ ಚೌವಣ್, ಜಿಲ್ಲಾ ಉಪಾಧ್ಯಕ್ಷ ಶಂಕರ್‌ಗೌಡ ಯಲಸತ್ತಿ, ಜಿಲ್ಲಾ ಕಾರ್ಯಾಧ್ಯಕ್ಷ ವಿಶ್ವನಾಥ್ ಎಸ್. ತಂಗಡಗಿ, ತಾಲ್ಲೂಕು ಅಧ್ಯಕ್ಷ ಸಿದ್ದು ಸಾಹುಕಾರ್ ಮಾದ್ವಾರ್, ತಾಲ್ಲೂಕು ಮಹಿಳಾ ಘಟಕ ಅಧ್ಯಕ್ಷೆ ಹೆಚ್. ಆರ್. ಸುನೀತಾ, ನಗರ ಅಧ್ಯಕ್ಷ ವಸಂತ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿಜ್ರಂಭಣೆಯಿಂದ ಶ್ರೀ ಅಯ್ಯಪ್ಪ ಸ್ವಾಮಿ ಮಂಡಲ ವಿಳಕ್ಕು ಮಹಾಪೂಜೆ




ರಾಯಚೂರು: ಶ್ರೀ ಶೇಖರ ಗುರುಸ್ವಾಮಿ ಅವರ ನೇತ್ರತ್ವದಲ್ಲಿ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನದ 35ನೇ ವರ್ಷದ ಮಂಡಲ ವಿಳಕ್ಕು ಮಹಾಪೂಜೆ ಕಾರ್ಯಕ್ರಮ ಪ್ರತಿವರ್ಷದಂತೆ ಈ ವರ್ಷವೂ ದಿ.25 ರಂದು ಗುರುವಾರ ಅತಿ ವಿಜ್ರಂಭಣೆಯಿಂದ ನೆರವೇರಿಸಲಾಗುವುದೆಂದು ಸ್ವಾಮಿ ಡಿ.ವಿರೇಶ ಹೇಳಿದರು.

ಅವರಿಂದು ನಗರದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲೆ ಹಾಗೂ ವಿವಿಧ ತಾಲೂಕುಗಳ ಸಕಲ ಸದ್ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಶ್ರೀ ಅಯ್ಯಪ್ಪ ಸ್ವಾಮಿಯ ಜಿಲ್ಲೆಯ ಎಲ್ಲ ಅಶ್ರಮ ಪೀಠದ ಗುರುಸ್ವಾಮಿಗಳು ಮತ್ತು ಅಯ್ಯಪ್ಪ ಸ್ವಾಮಿ ಮಾಲೆ ಧರಿಸಿದ ಧೀಕ್ಷಾರ್ಥಿಗಳು ಹಾಗೂ ಭಕ್ತರು ಭಾಗವಹಿಸಿ ಅಯ್ಯಪ್ಪ ಸ್ವಾಮಿ ಕ್ರಪೆಗೆ ಪಾತ್ರರಾಗಬೇಕೆಂದರು.

ದಿ. 25–ರಂದು ಬೆಳಿಗ್ಗೆ 6.10 ನಿರ್ಮಲ್ಯ ದರ್ಶನ, ಬೆಳ್ಳಿಗೆ 7 ಗಂಟೆಗೆ ಗಣಪತಿ ಹೋಮ, ನವಗ್ರಹ ಹೋಮ, ಬೆಳಿಗ್ಗೆ 10.00 ಗಂ. ಅಭಿಷೇಕ, ಬೆಳಿಗ್ಗೆ 11.30 ಗಂ. ಲಕ್ಷರ್ಚನೆ ಮಧ್ಯಾಹ್ನ 12.30 ಗಂ. ವಾದ್ಯದೊಂದಿಗೆ ಪಡಿಪೂಜೆ ಭಜನೆ ಮತ್ತು ಮಹಾ ಮಂಗಳಾರತಿ, ಮಧ್ಯಾಹ್ನ 1.00 ಗಂ. ಮಹಾಪ್ರಸಾದ, ಸಂಜೆ 5.00 ಗಂ. ಶ್ರೀ ಅಯ್ಯಪ್ಪ ಸ್ವಾಮಿ ಮೆರವಣಿಗೆ ಶ್ರೀ ರಾಘವೇಂದ್ರ ಸ್ವಾಮಿ ದೇವಸ್ತಾನ ದಿಂದಜವಾಹರ ನಗರದಿಂದ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ತಾನವರಿಗೆ ನಡೆಯಲಿದೆ. ರಾತ್ರಿ 9.00 ಗಂ. ಪಡಿಪೂಜೆ ಮಹಾ ಮಂಗಳಾರತಿ ಮತ್ತು ಅಲ್ಪಾಹಾರ ಸೇವೆ ನಡೆಯಲಿದೆ ಎಂದರು.

ಈ ಸಂದರ್ಭದಲ್ಲಿ ಪಿ.ಯಲ್ಲಪ್ಪ, ಕೇಶವರೆಡ್ಡಿ, ಪುಂಡ್ಲ ರಾಜೇಂದ್ರ ರೆಡ್ಡಿ, ಸೂರ್ಯನಾರಸಯಣ ಪೆಪ್ಸಿ, ಪಪ್ಪ ಶ್ರೀನಿವಾಸರೆಡ್ಡಿ, ಭಗವಂತ ರೆಡ್ಡಿ, ಕರುಣಾಕರ್ ರೆಡ್ಡಿ, ಎಸ್ಬಿಐ ಶೇಖರ್, ಶರಣಪ್ಪ ಸ್ವಾಮಿ, ವಿಶಾಲ್ ಸ್ವಾಮಿ, ಮಹೇಶ ಸ್ಬಾಮಿ, ಉದಯ ಸ್ವಾಮಿ, ರಾಹುಲ್ ಸ್ವಾಮಿ, ಶರಣ್ಮ ಸ್ವಾಮಿ, ಸುರೇಶ ಗಂಜಳ್ಳಿ ಉಪಸ್ಥಿತರಿದ್ದರು.

# ಬಡೇಸಾಬ್ ಉರುಸ್: ನಿಜಾಮುದ್ದೀನ್




**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಇದೇ ತಿಂಗಳ 28ರಂದು ಯರಗೇರಾ ಬಡೇಸಾಬ್ 127ನೇ ಉರುಸ್ ನಡೆಯಲಿದೆ ಎಂದು ಕಮಿಟಿ ಪ್ರಧಾನ ಕಾರ್ಯದರ್ಶಿ ಮಹ್ಮದ್ ನಿಜಾಮುದ್ದೀನ್ ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ದಿ.27ರಂದು ಶನಿವಾರ ರಾತ್ರಿ

10:39 ಗಂಟೆಗೆ ಸಂದಲ್ (ಗಂಧದ) ಮೆರವಣಿಗೆ ಗುರುಗಳಾದ ಸಜ್ಜಾದೆ ಸೈಯದ್ ಹಫೀಜು ಉಲ್ ಖಾದ್ರಿ ಅವರ ಮನೆಯಿಂದ ಹೊರಟು

ದಿ.28 ರವಿವಾರದಂದು ಬೆಳಿಗಿನ ಜಾವ 5 ಗಂಟೆಗೆ ದರ್ಗಾಕ್ಕೆ ತಲುಪುತ್ತದೆ. ಪ್ರಾರ್ಥನೆ ನಂತರ ಸಂದಲ್ ಕಾರ್ಯಕ್ರಮ ನಡೆಯುತ್ತದೆ. ನಂತರ ಉರುಸ್‌ಗೆ ಚಾಲನೆ ನೀಡಲಾಗುತ್ತದೆ. ದಿ.29ರಂದು ಜಿಯಾರತ್ ನಡೆಯಲಿದೆ.

ಉರುಸ್‌ಗೆ ರಾಜ್ಯ ಹೊರ ರಾಜ್ಯಗಳಿಂದಲು ಭಕ್ತರು ಆಗಮಿಸಲಿದ್ದು, ಸ್ವಚ್ವತೆ, ಕುಡಿಯುವ ನೀರು ಸೇರಿದಂತೆ ಎಲ್ಲಾ ಸೌಲತ್ತುಗಳನ್ನು ಒದಗಿಸಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಸಮಿತಿ ಅಧ್ಯಕ್ಷರಾದ ಮಹೆಬೂಬು ಪಟೇಲ್, ಬಂಡಾರಿ ಫಖರುದ್ದೀನ್, ಮಹ್ಮದ್ ರಫೀ ಉಪಸ್ಥಿತರಿದ್ದರು.

# ವಿಶೇಷ ವರ್ಗದ ಜನರಿಗೆ ನಿವೇಶನ ಮಂಜೂರಿಗೆ ಆಗ್ರಹಿಸಿ ಪ್ರತಿಭಟನೆ



**ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ವಿಶೇಷ ವರ್ಗದಲ್ಲಿ ಬರುವ ನಿವೇಶನಕ್ಕೆ ಅರ್ಜಿ ಸಲ್ಲಿಸಿದ ಮನೆಗೆಲಸ ಮಹಿಳೆಯರು, ವಿಧವೆಯರು, ಬೀದಿ ವ್ಯಾಪಾರಿಗಳು, ಅಂಗವಿಕಲರು, ವಿಧುರರು, ಅಲೆಮಾರಿ, ಇನ್ನಿತರ ವರ್ಗಗಳಿಗೆ ಸೇರಿದ ಫಲಾನುಭವಿಗಳ ಅರ್ಜಿಗಳನ್ನು ಸಮಗ್ರವಾಗಿ ಪರಿಶೀಲನೆ ಮಾಡಿ ಶೀಘ್ರದಲ್ಲಿ ಸರಕಾರದ ಆದೇಶದಂತೆ ನಿವೇಶನ ಮಂಜೂರು ಮಾಡುವಂತೆ ಆಗ್ರಹಿಸಿ ಸ್ಲಂ ನಿವಾಸಿಗಳ ಕ್ರಿಯಾ ವೇದಿಕೆ ಮುಖಂಡರು ನಗರದ ಜಿಲ್ಲಾಧಿಕಾರಿ ಕಚೇರಿ ಮುಂದೆ ಇಂದು ಪ್ರತಿಭಟನೆ ನಡೆಸಿದರು. ನಗರದಲ್ಲಿ ಸರಿ ಸುಮಾರು ಹತ್ತು ಸಾವಿರಕ್ಕೂ ಮೇಲ್ಪಟ್ಟು ಸ್ವಂತ ನಿವೇಶನವಿಲ್ಲದೆ ಬಾಡಿಗೆ ಮನೆಗಳಲ್ಲಿ ಮತ್ತು ಜೀದಿಯಲ್ಲಿ ವಾಸವಾಗಿದ್ದಾರೆ. ಸರಕಾರ ವೀಶೇಷ ವರ್ಗದವರ ಸ್ಥಿತಿ ಅರ್ಥ ಮಾಡಿಕೊಂಡು ನಿವೇಶನ ರಹಿತ ವಿಶೇಷ ವರ್ಗದವರನ್ನು ಗುರುತಿಸಿ ಸರಕಾರ ಅಥವಾ ಖಾಸಗಿ ಜಮೀನನ್ನು ಖರೀದಿಸಿ ನಿವೇಶನ ಮಂಜೂರಿ ಮಾಡಲು ಆದೇಶಿಸಿದೆ. ಈಗಾಗಲೇ ಮಹಾನಗರ ಪಾಲಿಕೆಗೆ ವಿಶೇಷ ವರ್ಗದವರಾದ ಮನೆಗೆಲಸ ಮಹಿಳೆಯರು, ತರಕಾರಿ ಬೀದಿ ವ್ಯಾಪಾರಿಗಳು, ವಿಧವೆಯರು, ಅಂಗವಿಕಲರು, ಅಲೆಮಾರಿಗಳು, ಪೌರಕಾರ್ಮಿಕರು,

ಸಫಾಯಿ ಕರ್ಮಚಾರಿಗಳು ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿದ ಪ್ರಕಾರ ಅರ್ಜಿ ನಿರ್ಲಕ್ಷ್ಯ ಮಾಡದೆ ಸಮಗ್ರವಾಗಿ ಪರಿಶೀಲಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಅದೇಶಿಸಬೇಕು. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ದೇವರಾಜು ಅರಸು ವಿಶೇಷ ವರ್ಗದವರ ಯೋಜನೆಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ಜೊತೆ ಸಭೆ ನಡೆಸಿ ವಿಶೇಷ ವರ್ಗದಲ್ಲಿ ಬರುವ ನಿವೇಶನ ರಹಿತರಿಗೆ ನಿವೇಶನಕ್ಕಾಗಿ ಭೂಮಿ ಮಂಜೂರಿ ಮಾಡಬೇಕು. ದೇವರಾಜು ಅರಸು ವಿಶೇಷ ವರ್ಗದಡಿಯಲ್ಲಿ ನಿವೇಶನ ರಹಿತರ ಪಟ್ಟಿಯನ್ನು ಶೀಘ್ರದಲ್ಲಿ ಮಹಾನಗರ ಪಾಲಿಕೆಯಿಂದ ಜಿಲ್ಲಾಡಳಿತಕ್ಕೆ ಕಳುಹಿಸಲು ಅದಿಕಾರಿಗಳಿಗೆ ಸೂಚಿಸಬೇಕು ಮತ್ತು ಈಗಾಗಲೇ ವಿಳಂಬ ಮಾಡಿದ ಸಂಬಂಧಪಟ್ಟ ಅ ಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ಸರಕಾರದ ಆದೇಶದ ಪ್ರಕಾರ ವಿಶೇಷ ವರ್ಗದವರಿಗೆ ನಿವೇಶನ ಮಂಜೂರಿಗಾಗಿ ಶೀಘ್ರದಲ್ಲಿ ಸರಕಾರಿ ಅಥವಾ ಖಾಸಗಿ ಜಮೀನನ್ನು ಖರೀದಿಸಿ ನಿವೇಶನರಹಿತ ಬಡಕುಟುಂಬಗಳಿಗೆ ನಿವೇಶನಕ್ಕಾಗಿ ಭೂಮಿ ಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸಬೇಕು. ಈ ಸಂದರ್ಭದಲ್ಲಿ ಜನಾರ್ಧನ ಹಳ್ಳಿಬೆಂಚಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನದಾಫ್, ಪಿಂಚಾರ ಸಮಾಜದ ನಿಗಮಕ್ಕಾಗಿ ಧ್ವನಿ ಎತ್ತಿ ಸರಕಾರದ ಗಮನ ಸಳೆದ ಲಕ್ಷ್ಮಣ ಸವದಿಗೆ ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು: ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ನದಾಫ್, ಪಿಂಚಾರ ಸಮಾಜದ ನಿಗಮಕ್ಕಾಗಿ ಧ್ವನಿ ಎತ್ತಿ ಸರಕಾರದ ಸಮನಕ್ಕೆ ತಂದ ಲಕ್ಷ್ಮಣ ಸವದಿ ಶಾಸಕರು, ಮಾಜಿ ಉಪಮುಖ್ಯ ಮಂತ್ರಿಗಳಿಗೆ ಪಿಂಜಾರ ಸಮಾಜದ ಪರವಾಗಿ ದೇವದುರ್ಗದ ಸಾಮಸಜಿಕ ಕಾರ್ಯಕರ್ತ ಖಾಸಿಂಸಾಬ್ ಎಳ್ಳೆಮನಿ ಅಭಿನಂದನೆ ಸಲ್ಲಿಸಿದರು.

ಅವರಿಂದು ನಗರದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ,

ಇಸ್ಲಾಂ ಧರ್ಮದಲ್ಲಿ ಒಂದಾದ ಪಿಂಜಾರ/ನದಾಫ್ ಮನ್ಸೂರಿ, ಜನಾಂಗ ಅತ್ಯಂತ ಹಿಂದುಳಿದ ಸಮುದಾಯಗಳಾಗಿದ್ದು, ಈ ಜನಾಂಗದ ವೃತ್ತಿ ಹತ್ತಿ ಹರಳಿಯಿಂದ ಗಾದಿ, ದಿಂಬು ಮತ್ತು ರೈತರ ಜಾನುವಾರಗಳಿಗೆ ಸಂಬಂದಿಸಿದ ಸಲಕರಣೆಗಳಾದ ಹಗ್ಗ, ಕಣ್ಣಿ, ಮುಗುದಾರ, ಅಂದಿನ ಕಾಲದಲ್ಲಿ ಪುಂಡೆ ನಾರಿನಿಂದ ಹಾಗೂ ಪಾಪಸ್ ಕಳ್ಳಿನಾರಿನಿಂದ ತಯ್ಯಾರಿಸಿ ಸಿದ್ದಪಡಿಸುತ್ತಿದ್ದರು. ಊರಿನಿಂದ ಊರುಗಳಿಗೆ ಅಲೆಮಾರಿಗಳಾಗಿ ಹಳ್ಳಿ ಮತ್ತು ಪಟ್ಟಣ್ಣಗಳಲ್ಲಿ ಮಾರಾಟ ಮಾಡುತ್ತ ತಮ್ಮ ಬದನು ಕಟ್ಟಿಕೊಳ್ಳತಿದ್ದರು. ಇಂತಹ ಹಿಂದುಳಿದ ಜನಾಗದವರಾದ ಹೆಚ್.ಇಬ್ರಾಹಿಂಸಾಹೇಬರು 1993ರಲ್ಲಿ ಸಮುದಾಯಕ್ಕೆ ಧ್ವಿನಿಯಾಗಿ ಒಂದು ಸಂಘಟನೆಯನ್ನು ಕಟ್ಟುತ್ತಾರೆ ಅದೇ ಕರ್ನಾಟಕ ಪಿಂಜಾರ/ನದಾಫ್ ಸಂಘ ಈ ಸಂಘದ ಸರ್ವ ಸದಸ್ಯರು ಅಂದು 1994ರಲ್ಲಿ ಜನತಾದಳದ ಮುಖ್ಯಮಂತ್ರಿಗಳಾದ ಹೆಚ್.ಡಿ.ದೇವೆಗೌಡ ಅವರಿಗೆ ಭೇಟಿ ಮಾಡಿ ವಾಗ ಮುಖ್ಯಮಂತ್ರಿಗಳು ಶೈಕ್ಷಣಿಕವಾಗಿ ಮತ್ತು ಉದ್ಯೋಗಕ್ಕಾಗಿ ಪ್ರವರ್ಗ(1)ಒಂದರಲ್ಲಿ ಸೇರಿಸಿರುತ್ತಾರೆ ಪ್ರವರ್ಗ(1)ಒಂದರಲ್ಲಿ ಸೇರಿಸಿದ ಮೇಲೆ ಈ ಸಮುದಾಯಕ್ಕೆ ಶಿಕ್ಷಣಕ್ಕಾಗಿ ನೊಂದೊಣಿ ಶುಲ್ಕ ರೀಯಾಯಿತಿಯಲ್ಲಿ ಮತ್ತು ವಸತಿಶಾಲೆಗಳಲ್ಲಿ ಸೌಲಭ್ಯಗಳು ಹಾಗೂ ಉದ್ಯೋಗದಲ್ಲಿ ಮೀಸಲಾತಿ ನೀಡಿ ಸಮುದಾಯದಕ್ಕೆ ಅನುಕುಲವಾಗಿತ್ತಾದರೂ ಬದಲಾದ ಸರಕಾರಗಳು ಈ ಸಮುದಾಯಕ್ಕೆ ಸಿಗುವ ಸೌಲಭ್ಯಗಳನ್ನು ಒಂದೊಂದಾಗಿ ಕಡಿತಗೊಳಿಸುತ್ತಾ ಬಂದವು.

ಈ ಸಂದರ್ಭದಲ್ಲಿ ರಾಘವೇಂದ್ರ ನಾಯಕ ಕೆಂಗಲ ಅಂಜಳ ಭೀಮಾಶಂಕರ ಯರಮಸಾಳ ಖಾಸಿಂಸಾಬ ಚಿಕ್ಕ ಹೊನ್ನಕುಣಿ, ಅಲ್ಲಿಸಾಬ ಕರಿಗುಡ್ಡಲಿಯಾಖತ್ ಅಲಿ ಹಿರೇಬೂದುರ ಉಪಸ್ಥಿತರಿದ್ದರು.

# ರಾಷ್ಟ್ರೀಯ ಗ್ರಾಹಕರ ದಿನಾಚರಣೆ

ರಾಯಚೂರು : ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ, ನಾಗರಿಕ ಸರಬರಾಜು ಹಾಘೂ ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಗ್ರಾಹಕರ ದಿನಾಚರಣೆ–2025ರ ಕಾರ್ಯಕ್ರಮವನ್ನು ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಡಿಸೆಂಬರ್ 24ರ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಕೆ.ವಿ.ಸುರೇಂದ್ರ ಕುಮಾರ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಪ್ರಭುದೇವ್, ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ, ವಕೀಲರಾದ ಗೌರೀಶ್ ಸೇರಿದಂತೆ ಇತರರು ಭಾಗಿಯಾಗಲಿದ್ದಾರೆ ಎಂದು ಹೇಳಿದರು.



ಬಳ್ಳಾರಿ . ರೈತರ ದಿನಾಚರಣೆಯ ಅಂಗವಾಗಿ ಬಳ್ಳಾರಿ ತಾಲ್ಲೂಕು ಸಂಗನಕಲ್ಲು ಗ್ರಾಮದಲ್ಲಿ ರೈತ ಬಾಂಧವರಿಗೆ ಸನ್ಮಾನ ಮಾಡಿ ಸಿಹಿ ಹಂಚಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಸದಸ್ಯರು ತುಳಸಪ್ಪ, ಮಾಜಿ ಗ್ರಾಮ ಪಂಚಾಯಿತಿ ಸದಸ್ಯರು ಯು ವೀರೇಶ್, ಟಿ ನಾಗರಾಜ್, ಎಂ ಶಿವು, ಶಿವಶಂಕರ್, ಪ್ರಸಾದ್, ಹಾಗೂ ರೈತ ಬಾಂಧವರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಮಹರ್ಷಿ ವಾಲ್ಮೀಕಿ ಮೂರ್ತಿ ಪ್ರತಿಷ್ಠಾಪನೆಗೆ ಒತ್ತಾಯ




**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿ ಮೂರ್ತಿ ಪ್ರತಿಷ್ಠಾಪನೆ ಮಾಡಿ ಶಿಕ್ಷಣವನ್ನು ಹೆಚ್ಚಿಸಬೇಕು ಎಂದು ಅಖಿಲಾಂದ ಮಹರ್ಷಿ ವಾಲ್ಮೀಕಿ ನಾಯಕ ಸಮಿತಿ ಜಿಲ್ಲಾಧ್ಯಕ್ಷ ವೆಂಕಟೇಶ ನಾಯಕ ಅಸ್ಕಿಹಾಳ ಒತ್ತಾಯಿಸಿದರು. ಅವರಿಂದು

ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಶ್ರೀ ಆದಿ ಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯು ಸುಮಾರು 250 ಎಕರೆ ಭೂಮಿಯನ್ನು ಹೊಂದಿದ್ದು, ಸದರಿ ವಿಶ್ವವಿದ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿರವರ ಮೂರ್ತಿ ಪ್ರತಿಷ್ಠಾಪನೆ ಹಾಗೂ ವಾಲ್ಮೀಕಿರವರ ಜೀವನ ಚರಿತೆಯನ್ನು ಒಳಗೊಂಡಂತೆ ಒಂದು ಮ್ಯೂಸಿಯಂ (ಜ್ಞಾನ ಮಂದಿರ) ನಿರ್ಮಾಣ ಮಾಡಿದರೆ ಮಹರ್ಷಿ ವಾಲ್ಮೀಕಿರವರ ಜೀವನ ಕುರಿತು ಅಧ್ಯಯನ ಮಾಡಲು ವಿದ್ಯಾರ್ಥಿಗಳಿಗೆ ಪುಸ್ತಕಗಳ ಅನುಕೂಲವಾಗುತ್ತದೆ ಹಾಗೂ ಅಲ್ಲದೇ ವಾಲ್ಮೀಕಿರವರು ರಚಿಸಿದ ಕಾಂಡಗಳಾದ ಬಾಲ ಕಾಂಡ, ಆಯೋಧ್ಯ ಕಾಂಡ, ಅರಣ್ಯ ಕಾಂಡ, ಕಿಕ್ಕಿಂದಾ ಕಾಂಡ, ಸುಂದರ ಕಾಂಡ ಹಾಗೂ ಉತ್ತರ ಕಾಂಡಗಳನ್ನು ಒಳಗೊಂಡಂತಹ ಪುಸ್ತಕಗಳ ಅನೂಕೂಲ ಮಾಡಿಕೊಡಬೇಕು ಹಾಗೂ ಕಲ್ಯಾಣ ಕರ್ನಾಟಕದಲ್ಲಿ ವಾಲ್ಮೀಕಿ ಸಮಾಜವು ಬಹುಸಂಖ್ಯಾತರಾಗಿರುವುದ್ದರಿಂದ ಉಚಿತ ಶಿಕ್ಷಣ ವ್ಯವಸ್ಥೆಯನ್ನು ಕಲ್ಪಿಸಿಕೊಡಬೇಕೆಂದರು.

ಉನ್ನತ ವ್ಯಾಸಂಗ ಮಾಡಿರುವಂತಹ ವ್ಯಕ್ತಿಗಳನ್ನು 7% ಮೀಸಲಾತಿ ಪ್ರಕಾರ ನೇಮಕಾತಿ ಮಾಡಬೇಕು. ದಿನಗೂಲಿ ನೌಕರರನ್ನು ಕೂಡಲೇ ನೇಮಕ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂಧರ್ಭದಲ್ಲಿ ರಾಘವೇಂದ್ರನಾಯಕ, ಸಿದ್ದಲಿಂಗಪ್ಪ, ನರಸಿಂಹಲು, ನಾಗೇಂದ್ರ, ವೀರೇಂದ್ರ ನಾಯಕ, ಕಾಶಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪತ್ತಿನ ಸೌಹಾರ್ದ ಸಹಕಾರಿ ಸಂಘದ ನೂತನ ಕ್ಯಾಲೆಂಡರ್ ಬಿಡುಗಡೆ

**ಮಲ್ಮನ ನುಡಿ ವಾರ್ತೆ ಮಸ್ಕಿ:**

ಪಟ್ಟಣದ ದೇವನಾಂಪ್ರಿಯ ಪತ್ತಿನ ಸೌಹಾರ್ದ ಸಹಕಾರಿ ಸಂಘದ ಆವರಣದಲ್ಲಿ 2026 ನೇ ಸಾಲಿನ ನೂತನ ವರ್ಷದ ಕ್ಯಾಲೆಂಡರನ್ನು ಸಹಕಾರಿಯ ಅಧ್ಯಕ್ಷರಾದ ಮಲ್ಲಿಕಾರ್ಜುನಗೌಡ ಸುಂಕನೂರ ರವರು ಬಿಡುಗಡೆಗೊಳಿಸಿದರು. ಈ ವೇಳೆ ಮಾತನಾಡಿದ ಅವರು ನಮ್ಮ ಸಹಕಾರಿಯು ಸದಸ್ಯರ ಅನುಕೂಲಕ್ಕಾಗಿ ಮುಂದಿನ ದಿನಗಳಲ್ಲಿ ಮುದಗಲ್‌ನಲ್ಲಿ ಕೂಡ ಒಂದು ಶಾಖೆಯನ್ನು ಪ್ರಾರಂಭಿಸುತ್ತೇವೆ ಎಂದು ಹೇಳಿದರು.

ಈ ವೇಳೆ, ಸಹಕಾರಿಯ ಉಪಾಧ್ಯಕ್ಷರಾದ ಕರಿಯಪ್ಪ ಹಾಲಾಪೂರು, ಚಿದಾನಂದಯ್ಯ



ಗುರುವಿನ, ಸಹಕಾರಿಯ ನಿರ್ದೇಶಕರಾದ ನಿಂಗಣ್ಣ ತಾತನವರು, ಮಳ್ಳಪ್ಪ ಪೂಜಾರಿ, ಮಲ್ಲರೇಡ್ಡೆಪ್ಪ ಜಕ್ಕೇರಮಡುಗು, ರಾಮಣ್ಣಗಡಗಿ, ಲಿಂಗಪ್ಪ ಕಾನಿಹಾಳ, ಮಲ್ಲಯ್ಯ ಹಾಲದವರು, ಹನುಮಂತ ಡೋಣಮರಡಿ, ಭೀಮಣ್ಣ ಕಾಸ್ಲಿ, ಶಿವರಾಜ ಕುರಿ, ಬಸವರಾಜ ಗೋನಾಳ, ರಾಮಣ್ಣ ಬೌತ್ರು ಹಾಗೂ ಮುಖ್ಯಕಾರ್ಯನಿರ್ವಾಹಕರಾದ ಮಲ್ಲಪ್ಪ ಕೋಸಗಿ ಸೇರಿದಂತೆ ಸಿಬ್ಬಂದಿ ವರ್ಗದವರು, ಪಿಗ್ಮಿ ಸಂಗ್ರಹಗಾರರು ಉಪಸ್ಥಿತರು ಇದ್ದರು.

# ಸರ್ಕಾರಿ ಬಾಲಮಂದಿರ, ದತ್ತು ಸ್ವೀಕಾರ ಕೇಂದ್ರ ವಿವಿಧೆಡೆ ಜಿಲ್ಲಾಧಿಕಾರಿಗಳಿಂದ ದಿಢೀರ್ ಭೇಟಿ ಪರಿಶೀಲನೆ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:** ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಡಿಸೆಂಬರ್ 22ರಂದು ನಗರದ ಸರ್ಕಾರಿ ದತ್ತು ಸ್ವೀಕಾರ ಕೇಂದ್ರ, ಸರ್ಕಾರಿ ವೀಕ್ಷಣಾಲಯ, ಸರ್ಕಾರಿ ಬಾಲಕಿಯರ ಬಾಲಮಂದಿರ ಹಾಗೂ ಬಾಲಕರ ಬಾಲ ಮಂದಿರ ಸೇರಿದಂತೆ ವಿವಿಧೆಡೆ ದಿಢೀರ್ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯನ್ನು ಖುದ್ದು ಪರಿಶೀಲಿಸಿದರು.

ಮೊದಲಿಗೆ ನಗರದ ಸರ್ಕಾರಿ ದತ್ತು ಸ್ವೀಕಾರ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಸಂಸ್ಥೆಯಲ್ಲಿನ ಮಕ್ಕಳ ಸುರಕ್ಷತೆ, ಆರೋಗ್ಯ ಮತ್ತು ಮೂಲಭೂತ ಸೌಲಭ್ಯಗಳ ಕುರಿತು ಪರಿಶೀಲಿಸಿದರು. ಸಂಸ್ಥೆಯಲ್ಲಿನ ಮಕ್ಕಳಿಗೆ ಕಾಲಕಾಲಕ್ಕೆ ಲಸಿಕೆ ಹಾಕಿಸಬೇಕು. ಗುಣಮಟ್ಟದ ಆಹಾರ ವಿತರಣೆ ಮಾಡಬೇಕು. ಮಕ್ಕಳ ಸುರಕ್ಷತೆ ಬಗ್ಗೆ ಜಾಗೃತೆ ವಹಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ನಂತರ ಸರ್ಕಾರಿ ವೀಕ್ಷಣಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಅಡುಗೆ ಮನೆ, ಮಕ್ಕಳ ವಾಸದ ಕೋಣೆ, ಶೌಚಗೃಹಗಳನ್ನು ವೀಕ್ಷಿಸಿ ಶುಚಿತ್ವ ಮತ್ತು ಮೂಲಭೂತ ಸೌಕರ್ಯದ ಬಗ್ಗೆ ಗಮನ ಹರಿಸಲು ಸೂಚನೆಗಳನ್ನು ನೀಡಿದರು. ಇದೆ ವೇಳೆ, ಜಿಲ್ಲಾಧಿಕಾರಿಗಳು, ಕಾನೂನು ಸಂಘರ್ಷಕ್ಕೆ ಒಳಗಾದ ಬಾಲಕರೊಂದಿಗೆ ಆಪ್ತವಾಗಿ ಮಾತನಾಡಿದರು. ಇಲ್ಲಿಂದ ಬಿಡುಗಡೆ ಆದ ಮೇಲೆ ಉತ್ತಮ ಜೀವನ ರೂಪಿಸಿಕೊಳ್ಳಬೇಕು. ಮುಂದೆ ಯಾವತ್ತೂ ತಪ್ಪು ಮಾಡಬಾರದು ಎಂದು ಸಲಹೆ ಮಾಡಿದರು. ನಂತರ ಬಾಲಕಿಯರ ಬಾಲ ಮಂದಿರ ಮತ್ತು ಬಾಲಕರ ಬಾಲ ಮಂದಿರಗಳಿಗೆ ಭೇಟಿ ನೀಡಿ, ಅಲ್ಲಿನ ಮಕ್ಕಳೊಂದಿಗೆ ಸಮಾಲೋಚನೆ ನಡೆಸಿದರು. ಅಲ್ಲಿನ ಆಹಾರ ಸಾಮಗ್ರಿಗಳ ಗುಣಮಟ್ಟದ ಬಗ್ಗೆ ಪರಿಶೀಲನೆ ಮಾಡಿದರು. ಮಕ್ಕಳ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಸಂಸ್ಥೆಯ



ಸಿಬ್ಬಂದಿಯಿಂದ ಮಾಹಿತಿ ಪಡೆದುಕೊಂಡರು. ನಂತರ, ಶಿಶುಕೇಂದ್ರಿತ ಯೋಜನೆಯಡಿ ಅನುದಾನ ಸಂಹಿತೆಗೆ ಒಳಪಟ್ಟ ವಿಶ್ವಧರ್ಮ ಮಹಿಳಾ ಮತ್ತು ಮಕ್ಕಳ ಶಿಕ್ಷಣ ಸೇವಾ ಸಮಿತಿ ಇವರಿಂದ ನಿರ್ವಹಣೆ ಮಾಡ ಲಾಗುತ್ತಿರುವ ನಗರದ ನಿಜಲಿಂಗಪ್ಪ ಕಾಲೋನಿಯಲ್ಲಿನ ವಿಶ್ವಧರ್ಮ ಬುದ್ದಿಮಾಂದ್ಯ ಮಕ್ಕಳ ವಿಶೇಷ ಶಾಲೆಗೆ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗಕರಿಕರ ಸಬಲೀಕರಣ ಇಲಾಖೆಯ ಸಹಯೋಗದಲ್ಲಿ ಆಶಾದೀಪ ಟ್ರಸ್ಟ್ ನಿರ್ವಹಣೆ ಮಾಡುತ್ತಿರುವ ಪಬ್ಲಿಕ್ ಗಾರ್ಡನ್ ಹತ್ತಿರದಲ್ಲಿನ ಆಶಾದೀಪ ವಿಶೇಷ ಮಕ್ಕಳ ಶಾಲೆಗೆ ಭೇಟಿ ನೀಡಿ ಪರಿಶೀಲಿಸಿದರು. ಅಲ್ಲಿನ ಮೂಲಭೂತ ಸೌಕರ್ಯಗಳ ಬೇಡಿಕೆಗಳ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ನಿರೂಪಣಾಧಿಕಾರಿ ಕುಮಾರ್, ಜಿಲ್ಲಾ ವಿಕಲಚೇತನರ ಕಲ್ಯಾಣ ಅಧಿಕಾರಿ ಶ್ರೀದೇವಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಕಿರಿಲಿಂಗಪ್ಪ, ರಮೇಶ ಹಾಗೂ ಸಂಸ್ಥೆಯ ಅಧೀಕ್ಷಕರು ಇದ್ದರು.

# ಶೋಷಿತರ ಪರವಾದ ಗ್ಯಾರಂಟಿ ಯೋಜನೆಗಳು: ಕೆ.ಇ.ಚಿದಾನಂದಪ್ಪ



**ಅಮರಾಪುರ ಗ್ರಾಮದಲ್ಲಿ 'ಗ್ಯಾರಂಟಿ ನಡೆ ಗ್ರಾಪಂ ಕಡೆ'**

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರವು ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳು ರಾಜ್ಯದಲ್ಲಿನ ಬಡತನ ರೇಖೆಗಿಂತ ಕೆಳಗಿನ, ಬಡವರ, ಶೋಷಿತರ ಪರವಾಗಿವೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಬಳ್ಳಾರಿ ತಾಲ್ಲೂಕು ಆಡಳಿತ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ ತಾಲ್ಲೂಕಿನ ಅಮರಾಪುರ ಗ್ರಾಪಂ ಆವರಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ 'ಗ್ಯಾರಂಟಿ ನಡೆ ಗ್ರಾಮ ಪಂಚಾಯತ್ ಕಡೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗ್ಯಾರಂಟಿಗಳಿಂದ ಜನರ ಜೀವನಮಟ್ಟ ಬಹಳಷ್ಟು ಸುಧಾರಣೆಯಾಗಿದೆ. ಗ್ರಾಮದಲ್ಲಿ ಇರುವ ಪ್ರತಿಯೊಬ್ಬ ಅರ್ಹ ಫಲಾನುಭವಿಗಳು ರಾಜ್ಯ ಸರ್ಕಾರದ ಮಹತ್ವಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಯ ಉಪಯೋಗಗಳನ್ನು ಸಮರ್ಪಕವಾಗಿ ಪಡೆದುಕೊಳ್ಳಬೇಕು. ಯಾರು ವಂಚಿತರಾಗಬಾರದು ಎಂದು ಹೇಳಿದರು.ಗ್ಯಾರಂಟಿ ಯೋಜನೆಗಳ ಸೌಲಭ್ಯ ಪಡೆಯುವಲ್ಲಿ ವಿಳಂಬ, ತೊಂದರೆಯಾಗಿದ್ದಲ್ಲಿ, ಮನೆ ಬಾಗಿಲಿಗೆ ಬಂದು ಜನರ ಸಮಸ್ಯೆಗಳನ್ನು ಆಲಿಸಿ ಪರಿಹರಿಸುವ ಕಾರ್ಯಕ್ರಮ 'ಗ್ಯಾರಂಟಿ ನಡೆ-ಗ್ರಾಮ ಪಂಚಾಯತ್ ಕಡೆ' ಇದಾಗಿದೆ ಎಂದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿಗಳನ್ನು ಸೂಕ್ತವಾಗಿ ಜನರಿಗೆ ತಲುಪಿಸಲಾಗುತ್ತಿದೆ. ಪಂಚ ಗ್ಯಾರಂಟಿಗಳಿಂದ ಜನರ ಜೀವನಮಟ್ಟ ಸುಧಾರಣೆ ಹಾಗೂ ಮಹಿಳಾ ಸಬಲೀಕರಣಕ್ಕೆ ದಾರಿಯಾಗಿದೆ. ಗ್ಯಾರಂಟಿ ಯೋಜನೆಗಳ ಬಗ್ಗೆ ಅಧಿಕಾರಿಗಳು ನಿಷ್ಕಾಳಜಿ ತೋರಿಸದೇ, ಸಾಮಾನ್ಯ ಜನರಿಗೆ ಯಾವುದೇ ತೊಂದರೆಯಾಗದಂತೆ ತಲುಪಿಸಬೇಕು ಎಂದರು.ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಗೋನಾಳ್ ನಾಗಭೂಷಣ ಗೌಡ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಕಾಂಗ್ರೆಸ್ ಸರ್ಕಾರ ಅಧಿಕಾರದ ಚುಕ್ಕಾಣಿ ಹಿಡಿಯುವ ಮೊದಲು ಕೊಟ್ಟ ಮಾತಿನಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ, ನುಡಿದಂತೆ ನಡೆದ ಏಕೈಕ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರವಾಗಿದೆ ಎಂದು ನುಡಿದರು.

ಬಳ್ಳಾರಿ ನಗರದ 11 ವಾರ್ಡ್ ಒಳಗೊಂಡಂತೆ ಕೆಳ, ಮಧ್ಯಮ, ಮೇಲ್ವರ್ಗ ಸೇರಿದಂತೆ ಯಾವುದೇ ಮತೀಯ ಭೇದವಿಲ್ಲದೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ, ತಲುಪಿಸಲಾಗಿದೆ ಎಂದು ತಿಳಿಸಿದರು.ಬಳ್ಳಾರಿ ತಾಪಂ ಬಳ್ಳಾರಿ ತಾಲ್ಲೂಕಿನ 61 ಗ್ರಾಮ, 3 ಕ್ಯಾಂಪ್ ಮತ್ತು ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಐ ಬಾರಿಕಾರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯ ಸರ್ಕಾರವು ಮಹಿಳೆಯರನ್ನು ಸಶಕ್ತರನ್ನಾಗಿಸಲು ಅವರನ್ನು ಕೇಂದ್ರೀಕರಿಸಿ, ಅವರಿಗಾಗಿಯೇ ಪಂಚ ಗ್ಯಾರಂಟಿ ಯೋಜನೆಗಳನ್ನು ರೂಪಿಸಲಾಗಿದೆ ಎಂದರು.

ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ದೇಶದಲ್ಲಿಯೇ ಕರ್ನಾಟಕ ರಾಜ್ಯವೇ ಮೊದಲು. ಅದರಲ್ಲಿ ಮಹಿಳೆಯರನ್ನು ಸ್ವಾವಲಂಬಿಗಳಾಗಿಸಲು ಯೋಜನೆಗಳನ್ನು ಅನುಷ್ಠಾನಗೊಳಿಸಿದೆ. ಈವರೆಗೆ ಬಳ್ಳಾರಿ ತಾಲ್ಲೂಕು ವ್ಯಾಪ್ತಿಯಲ್ಲಿ ಯೋಜನೆಗಳ ಲಾಭ ಪಡೆಯದಿರುವರು ಇದ್ದಲ್ಲಿ ಗಮನಕ್ಕೆ ತಂದರೆ ಇತ್ಯರ್ಥ ಪಡಿಸಿ ಸೌಲಭ್ಯ ತಲುಪಿಸಲಾಗುವುದು ಎಂದರು.ಕಾರ್ಯಕ್ರಮದಲ್ಲಿ ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದಂತೆ ಅಹವಾಲು ಸ್ವೀಕರಿಸಲಾಯಿತು. ಬಳಿಕ ಮಹಿಳೆಯರೊಂದಿಗೆ ಸಂವಾದ ನಡೆಸಲಾಯಿತು.ಈ ಸಂದರ್ಭದಲ್ಲಿ ಅಮರಾಪುರ ಗ್ರಾಪಂ ಅಧ್ಯಕ್ಷೆ ಭಾರತಿ ಗುರುಸ್ವಾಮಿ, ಉಪಾಧ್ಯಕ್ಷ ಜಿ.ಗಾದಿಲಿಂಗಪ್ಪ, ಅಮರಾಪುರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮಂಜುನಾಥ್ ಸೇರಿದಂತೆ ಗ್ರಾಪಂ ಸದಸ್ಯರು, ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರು, ಪಕ್ಷದ ಮುಖಂಡರು, ಗ್ರಾಮದ ಮುಖಂಡರು, ಮಹಿಳೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಬಾಲಕಾರ್ಮಿಕ ಪದ್ಧತಿ ಅಪರಾಧ: ನ್ಯಾ.ಹೊಸಮನೆ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಪದ್ಧತಿ ಯೋಜನೆ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ (ನಿಷೇಧ ಮತ್ತು ನಿಯಂತ್ರಣ) ಕಾಯಿದೆ 1986 ಮತ್ತು ತಿದ್ದುಪಡಿ ಕಾಯ್ದೆ 2016ರ ಕುರಿತು ಎಸ್‌ಸಿ/ಎಸ್‌ಟಿ ಜನಾಂಗದವರು ವಾಸಿಸುವ ಕಾಲೋನಿಗಳಲ್ಲಿ ಅರಿವು ಮೂಡಿಸುವ ಜನಜಾಗೃತಿ ಆಟೋ ಪ್ರಚಾರ ಕಾರ್ಯಕ್ರಮಕ್ಕೆ ಸೋಮವಾರ ಚಾಲನೆ ನೀಡಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ ಮತ್ತು ಅಪರ ಜಿಲ್ಲಾಧಿಕಾರಿ ಮಹಮ್ಮದ್. ಎನ್ ಝುಬೇರ್ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಇದೇ ವೇಳೆ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ಬಾಲಕಾರ್ಮಿಕ ಪದ್ಧತಿಯು ಅಪರಾಧವಾಗಿದ್ದು, ಮಕ್ಕಳ ಭವಿಷ್ಯವನ್ನು ರೂಪಿಸುವಲ್ಲಿ ಶಿಕ್ಷಣವು ಎಷ್ಟು ಮುಖ್ಯವೋ, ಅಷ್ಟೇ ಮುಖ್ಯವಾಗಿ ಅವರನ್ನು ಶೋಷಣೆಯಿಂದ ರಕ್ಷಿಸುವುದು ಕೂಡ ಸರ್ಕಾರದ ಮತ್ತು ನಾಗರಿಕ ಸಮಾಜದ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಆಧುನಿಕ ಕಾಲಘಟ್ಟದಲ್ಲೂ ಬಡತನ ಮತ್ತು ಅರಿವಿನ ಕೊರತೆಯಿಂದಾಗಿ ಅನೇಕ ಮಕ್ಕಳು ಶಾಲೆಯ ಮೆಟ್ಟಿಲು ಹತ್ತುವ ಬದಲು ಕಾರ್ಖಾನೆ ಅಥವಾ ಹೋಟೆಲ್‌ಗಳ ಮೆಟ್ಟಿಲು ಹತ್ತುತ್ತಿರುವುದು ವಿಷಾದನೀಯ ಸಂಗತಿಯಾಗಿದೆ ಎಂದರು.ಅಪರ ಜಿಲ್ಲಾಧಿಕಾರಿ ಮಹಮ್ಮದ್.ಎನ್ ಝುಬೇರ್ ಅವರು ಮಾತನಾಡಿ, ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಅಗತ್ಯವಾಗಿದ್ದು, ಅವರನ್ನು ಕೆಲಸಕ್ಕೆ ದೂಡದೇ ಶಿಕ್ಷಣ ನೀಡಿ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಕರೆ ನೀಡಿದರು.ಸಮಾಜದ ಅತ್ಯಂತ ದುರ್ಬಲ ವರ್ಗಗಳಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರು ವಾಸಿಸುವ ಕಾಲೋನಿಗಳಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ (ನಿಷೇಧ ಮತ್ತು ನಿಯಂತ್ರಣ) ಕಾಯಿದೆಯ ಬಗ್ಗೆ ಆಟೋ ಪ್ರಚಾರದ ಮೂಲಕ ಜನಜಾಗೃತಿ ಮೂಡಿಸುವುದು ಅತ್ಯಂತ ಶ್ಲಾಘನೀಯ ಮತ್ತು ತುರ್ತು ಅಗತ್ಯವಿರುವ ಕಾರ್ಯಕ್ರಮವಾಗಿದೆ ಎಂದರು.ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ತ್ರಿವೇಣಿ ಪತ್ತಾರ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರ್, ಕಾರ್ಮಿಕ ನಿರೀಕ್ಷಕರಾದ ರಮೇಶ್, ಪರಶುರಾಮ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ.ಮೌನೇಶ್, ಮಕ್ಕಳ ಸಹಾಯವಾಣಿ ಸಿಬ್ಬಂದಿ, ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇತರರು ಹಾಜರಿದ್ದರು.

# ಅಲ್ಲೀಪುರ ಗ್ರಾಮ ದೇವತೆ ಶ್ರೀ ಸುಂಕಲಮ್ಮ ದೇವಿಗೆ ವಿಶೇಷ ಪೂಜೆ



**ಮಲ್ಲಮ್ಮ ನುಡಿ ವಾರ್ತೆ**

**ಬಳ್ಳಾರಿ.** ಬಳ್ಳಾರಿ ನಗರದ ಹೊಸಪೇಟೆ ರಸ್ತೆಯಲ್ಲಿರುವ ಅಲ್ಲೀ ಪುರದಲ್ಲಿ ಗ್ರಾಮ ದೇವತೆ ಶ್ರೀ ಸುಂಕಲಮ್ಮ ದೇವಿಗೆ ಪ್ರೈವೇಟ್ ಶಾಲೆಗಳ ಸಂಘದ ಉಪಾಧ್ಯಕ್ಷರು ಹಾಗೂ ಬೆಸ್ಟ್ ಶಾಲೆಯ ಪ್ರಧಾನ ಕಾರ್ಯದರ್ಶಿ ಎಂ. ಶ್ರೀನಿವಾಸಲು ದಂಪತಿಗಳು ವಿಶೇಷ ಪೂಜೆ ಸಲ್ಲಿಸಿ ಕುಂಭ ಹರಿಕೆಯನ್ನು ನೆರವೇರಿಸಿದ್ದಾರೆ. ಈ ಸಂದರ್ಭವಾಗಿ ಅವರು ಮಾತನಾಡುತ್ತಾ ಅಲ್ಲೀಪುರ ಗ್ರಾಮದಲ್ಲಿ ಶ್ರೀ ಸಂಕಲಮ್ಮ ದೇವಿಯ ದೇವಸ್ಥಾನ ಪುರಾತನವಾದದ್ದು, ಈ ದೇವಿಯ ಹರಕೆಯನ್ನು ನೀಡಿದ್ದ ಪ್ರತಿ ಭಕ್ತಾದಿಗಳಿಗೆ ಪರಿಹಾರ ಸಿಗುತ್ತದೆ ಎಂದರು, ಮುಖ್ಯವಾಗಿ ಶ್ರೀ ಸುಂಕಲಮ್ಮ ದೇವಿಗೆ ವಿಶೇಷ ಪೂಜಾ ಇಲ್ಲಿನ ಸ್ಥಳೀಯ ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗಲಾರದಂತೆ ಅವರ ಕುಟುಂಬ ಜೀವನ ಸುಖ ಸಂತೋಷದಿಂದ ವಿರಲೆಂದು ಸ್ಥಳೀಯ ಸಾರ್ವಜನಿಕರ ಮಕ್ಕಳು ವಿದ್ಯಾ, ಬುದ್ಧಿದಿಂದ ಉತ್ತಮವಾಗಿ ಬೆಳೆಲೆಂದು ಆ

ಗ್ರಾಮ ದೇವತೆ ಶ್ರೀ ಸಂಕಲಮ್ಮ ದೇವಿಯ ಕೃಪಾ ಆಶೀರ್ವಾದ ಇರಲೆಂದು ವಿಶೇಷ ಪೂಜೆಯನ್ನು ಸಲ್ಲಿಸಿದ್ದೇನೆ ಎಂದರು. ಈ ಕಾರ್ಯಕ್ರಮದಲ್ಲಿ ಕೊಟ್ರೇಶ್,

ತೊರುಪು ರಾಮಿರೆಡ್ಡಿ, ಹೊನ್ನೂರಪ್ಪ ,ಬಸಪ್ಪ ,ಸಿದ್ದಲಿಂಗಪ್ಪ , ಪಾಲ್ತೂರು ಶಿನ, ರವಿ, ನಾಗರೆಡ್ಡಿ ,ರೇಕಪ್ಪ ,ಮಂಜು ,ಈರೇಶ್ ,ದಾನಂದ್, ಮುಂತಾದವರು ಪಾಲ್ಗೊಂಡರು.

# ಕಾರಾಗೃಹದಲ್ಲಿ ಅನಿರೀಕ್ಷಿತ ತಪಾಸಣೆ: ನಿಷೇಧಿತ ವಸ್ತು ಜಪ್ತಿ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಬಳ್ಳಾರಿ ಕೇಂದ್ರ ಕಾರಾಗೃಹದಲ್ಲಿ ಶನಿವಾರ ಅನಿರೀಕ್ಷಿತವಾಗಿ ತಪಾಸಣೆ ಕೈಗೊಂಡಾಗ ನಿಷೇಧಿತ ವಸ್ತುಗಳು ದೊರೆತಿದ್ದು, ಅವುಗಳನ್ನು ಜಪ್ತಿ ಮಾಡಲಾಗಿದೆ ಎಂದು ಕೇಂದ್ರ ಕಾರಾಗೃಹದ ಅಧೀಕ್ಷಕರು ತಿಳಿಸಿದ್ದಾರೆ.

ರಾಜ್ಯ ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಇಲಾಖೆಯ ಪೊಲೀಸ್ ಮಹಾನಿರ್ದೇಶಕ ಅಲೋಕ ಕುಮಾರ್ ಅವರ ನಿರ್ದೇಶನದ ಮೇರೆಗೆ 'ಕಾರಾಗೃಹ ಸುಧಾರಣಾ ಸಂಕಲ್ಪ' ಅಭಿಯಾನದಡಿ ಡಿ.20ರ ರಾತ್ರಿ 10 ರಿಂದ 12.10 ರವರೆಗೆ ಕಾರಾಗೃಹದ ಅಧೀಕ್ಷಕರ ನೇತೃತ್ವದಲ್ಲಿ ಜೈಲರ್, ಸಹಾಯಕ ಜೈಲರ್ ಹಾಗೂ ಹಗಲು,

ರಾತ್ರಿ ಪಹರೆಯ ಸಿಬ್ಬಂದಿ ಒಳಗೊಂಡ ತಂಡವು ಕಾರಾಗೃಹದ ಒಳ ಆವರಣದಲ್ಲಿ ಅನಿರೀಕ್ಷಿತ ತಪಾಸಣೆ ಕೈಗೊಂಡಾಗ ನಿಷೇಧಿತ ವಸ್ತುಗಳಾದ 6 ಕೀ-ಪ್ಯಾಡ್ ಮೊಬೈಲ್ ಮತ್ತು 2 ಚಾರ್ಜರ್ ಪತ್ತೆಯಾಗಿವೆ ಎಂದು ತಿಳಿಸಿದ್ದಾರೆ.

ನಿಷೇಧಿತ ವಸ್ತುಗಳನ್ನು ಜೈಲಿನೊಳಗೆ ಸಾಗಿಸಿದವರು, ಇದಕ್ಕೆ ಸಹಕರಿಸಿದವರು ಹಾಗೂ ನಿಷೇಧಿತ ವಸ್ತುಗಳನ್ನು ಉಪಯೋಗಿಸಿದವರ ವಿರುದ್ಧ ಕರ್ನಾಟಕ ಕಾರಾಗೃಹ (ತಿದ್ದುಪಡಿ) ಅಧಿನಿಯಮ 2022ರ ಕಲಂ 42ರನ್ವಯ ಹಾಗೂ ಇತರೆ ಕಲಂಗಳಡಿ ಕ್ರಮ ಕೈಗೊಳ್ಳಲು ಬಳ್ಳಾರಿಯ ಬ್ರೂಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ (ಸಂಖ್ಯೆ: 233/2025) ದಾಖಲಿಸಲಾಗಿದೆ.

ಸಿಬ್ಬಂದಿಗೆ ಬಹುಮಾನ:

ತಪಾಸಣೆಯಲ್ಲಿ ಭಾಗಿಯಾದ ಅಧಿಕಾರಿ ಮತ್ತು ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿರುವ ಡಿಜಿಪಿ ಅಲೋಕ ಕುಮಾರ್ ಅವರು, ತಂಡಕ್ಕೆ ರೂ.10,000 ನಗದು ಬಹುಮಾನ ಹಾಗೂ ಪ್ರಶಂಸನಾ ಪತ್ರ ನೀಡಿ ಗೌರವಿಸಿದ್ದಾರೆ ಎಂದು ಕೇಂದ್ರ ಕಾರಾಗೃಹ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿರೂರಿನಲ್ಲಿ ಗುರುವಂದನೆ ಕಾರ್ಯಕ್ರಮ ಸಾಧನೆಗೆ ಗುರುವಿನ ಮಾರ್ಗದರ್ಶನ ಅಗತ್ಯ



**ಮಲ್ಲಮ್ಮ ನುಡಿ ಬಾಗಲಕೋಟೆ:**

ವ್ಯಕ್ತಿಯ ಸಾಧನೆಗೆ ಗುರುವಿನ ಕರುಣೆ, ಮಾರ್ಗದರ್ಶನ ಪ್ರಾಮುಖ್ಯವಾಗಿರುತ್ತದೆ ಎಂದು ಶಿವಯೋಗಾಶ್ರಮದ ಅಭಿನವ. ಸಿದ್ಧಲಿಂಗ ಸ್ವಾಮೀಜಿ ಹೇಳಿದರು. ಸ್ಥಳೀಯ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ 1993-94 ನೆಯ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಓದಿದ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಗುರುವಂದನಾ, ಸ್ನೇಹ ಸಮ್ಮಿಲನ ಕಾರ್ಯಕ್ರಮದ ಸಾನಿಧ್ಯವಹಿಸಿ ಶ್ರೀಗಳು ಮಾತನಾಡಿದರು. ವಿದ್ಯಾರ್ಥಿಗಳು ವಿದ್ಯೆಯ ಜೊತೆ ವಿನಯತೆ, ಸಂಸ್ಕಾರ ಬೆಳೆಸಿಕೊಳ್ಳಬೇಕು. ಇಂದು ಮಕ್ಕಳಿಗೆ ಸಂಸ್ಕಾರದ ಶಿಕ್ಷಣ ಬೇಕಿದ್ದು, ಅಂತಹ ಗುಣವಂತ ಮಕ್ಕಳನ್ನು ರೂಪಿಸುವುದು ಗುರುವಿನ ದೊಡ್ಡ ಜವಾಬ್ದಾರಿ ಎಂದರು. ನಿವೃತ್ತ ಮುಖ್ಯಗುರು ಸಿ.ಎಸ್. ಕೊಟ್ಟಲಗಿ ಮಾತನಾಡಿ, ಶಿಕ್ಷಣ ನೀಡಿ ಬದುಕಿಗೆ ಬೆಳಕಾಗುವ ಗುರುಗಳನ್ನು ಸ್ಮರಿಸುವ ಕಾರ್ಯ ಅಭಿನಂದನಾರ್ಹ ಎಂದು ಹೇಳಿ, ಇಂದು ಪಾಲಕರು ಮಕ್ಕಳಿಗೆ ಆಸ್ತಿ ಮಾಡಬೇಕಿಲ್ಲ.

ಅವರನ್ನು ಸಂಸ್ಕಾರವಂತರನ್ನಾಗಿ ಮಾಡುವ ಅಗತ್ಯತೆಯಿದೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಶಿಕ್ಷಕ ಎ.ಸಿ.ಚೌಕಿಮಠ, ಪ್ರತಿ ವ್ಯಕ್ತಿಯ ಜೀವನಕ್ಕೆ ವಿದ್ಯಾ ಸಂಪತ್ತು ಶ್ರೇಷ್ಠವಾಗಿದ್ದು, ವಿದ್ಯೆ ನೀಡಿದ ಗುರುವನ್ನು ಸ್ಮರಿಸಿ ಗೌರವಿಸುವ ಕಾರ್ಯ ಹಿಂದಿನ ದಿನಗಳ ಗುರು-ಶಿಷ್ಯ ಪರಂಪರೆಯನ್ನು ನೆನಪಿಸುತ್ತದೆ ಎಂದರು. ನಿವೃತ್ತ ಮು ಖ್ಯ ಗುರು ಎಸ್.ಎಸ್.ಯಡವಳ್ಳಿ ಕಾರ್ಯಕ್ರಮ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಬಿ.ವೈ.ಗೂಳನ್ನವರ, ಕೆ.ಸಿ.ಹೈದ್ರಾಬಾದಮಠ, ಎಲ್.ಟಿ.ಪೂಜಾರ, ಲಕ್ಷ್ಮೀಬಾಯಿ ರಡ್ಡೆರ, ಉಮಾದೇವಿ ನಾವಲಗಿ ಹಾಗೂ ಶ್ರೀಮತಿ ಪುರಾಣಿಕ ಮತ್ತು ಹಾಲಿ ಹಾಗೂ ಮಾಜಿ ಸೈನಿ ಕರನ್ನು ಸನ್ಮಾನಿಸಲಾಯಿತು. ಅನ್ನಪೂರ್ಣ ರಡ್ಡೆರ ಸ್ವಾಗತಿಸಿದರು. ಸಿದ್ದನಗೌಡ ಪಾಟೀಲ ಪ್ರಾಸ್ತಾವಿಕ ಮಾತನಾಡಿದರು. ಸುಭಾಸ ಹುಲ್ಯಾಳ ನಿರೂಪಿಸಿದರು. ಸಂಗಮೇಶ ಪಟ್ಟಣಶೆಟ್ಟಿ ವಂದಿಸಿದರು.

# ಕಾಣೆಯಾದ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಿ: ನ್ಯಾ.ರಾಜೇಶ್ ಎನ್.ಹೊಸಮನೆ



**ಕಾಣೆಯಾದ ಮಕ್ಕಳ ಪತ್ತೆಗೆ ವಿಶೇಷ ಕಾರ್ಯಪಡೆ ಸಮಿತಿಯ ತ್ರೈಮಾಸಿಕ ಸಭೆಯಲ್ಲಿ ನ್ಯಾ.ರಾಜೇಶ್ ಎನ್. ಹೊಸಮನೆ ಸೂಚನೆ**

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲೆಯಲ್ಲಿ ಹಲವೆಡೆ ಮಕ್ಕಳು ಕಾಣೆಯಾದ ಪ್ರಕರಣಗಳು ದಾಖಲಾಗಿದ್ದು, ಹಲವು ಪ್ರಕರಣಗಳಲ್ಲಿ ಪತ್ತೆ ಮಾಡಲು ಸಾಧ್ಯವಾಗಿಲ್ಲ. ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸುವ ಮೂಲಕ ಇತ್ಯರ್ಥಪಡಿಸಲು ಕ್ರಮವಹಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಹೇಳಿದರು.

ಮಂಗಳವಾರ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಮಕ್ಕಳ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂಸೇವಾ ಸಂಸ್ಥೆಗಳ ಮುಖ್ಯಸ್ಥರು, ಪ್ಯಾರಾಲೀಗಲ್ ವಾಲಂಟರ್ಸ್‌ಗಳೊಂದಿಗೆ ಏರ್ಪಡಿಸಿದ್ದ 'ಕಾಣೆಯಾದ ಮಕ್ಕಳ ಪತ್ತೆಗೆ ವಿಶೇಷ ಕಾರ್ಯಪಡೆ ಸಮಿತಿಯ ತ್ರೈಮಾಸಿಕ ಸಭೆ'ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಅಪಹರಣ, ಕಾಣೆಯಾದ ಮಕ್ಕಳ ಬಗ್ಗೆ ವಿವಿಧ ಇಲಾಖೆಗಳೊಂದಿಗೆ ಪರಿಶೀಲನೆ ನಡೆಸಲಾಗುತ್ತಿದ್ದು, ಇತ್ಯರ್ಥವಾಗದೇ ಬಾಕಿ ಇರುವ ಪ್ರಕರಣಗಳ ಮಾಹಿತಿಯನ್ನು ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರಕ್ಕೆ ಪ್ರತಿ ಮಾಹೆ ಮಾಹಿತಿ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ಕಾರ್ಯಪಡೆ ರಚಿಸಲಾಗಿದೆ. ಕಾಣೆಯಾದ, ಪತ್ತೆಯಾಗದ ಮಕ್ಕಳ ಪಟ್ಟಿ ಸಿದ್ಧಪಡಿಸಿಕೊಂಡು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ವರದಿ ನೀಡಬೇಕು ಎಂದರು.

ಹಲವಾರು ವರ್ಷಗಳಿಂದ ಬಗೆಹರಿಯದೆ ಉಳಿದಿರುವ ಪ್ರಕರಣಗಳನ್ನು ಪರಿಹರಿಸಲು ವಿವಿಧ ಇಲಾಖೆಗಳೊಂದಿಗೆ ಸಮನ್ವಯದೊಂದಿಗೆ, ಜಿಲ್ಲಾ ಮಟ್ಟದ ವಿಶೇಷ ಅಭಿಯಾನಗಳನ್ನು ಪ್ರಾರಂಭಿಸಬೇಕು ಮತ್ತು ಮೇಲ್ವಿಚಾರಣೆ ಮಾಡಬೇಕು ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿ ಕಾಣೆಯಾದ ಮಕ್ಕಳ ಮನೆ ಭೇಟಿ ನೀಡಿ ಪ್ರಸ್ತುತ ವಸ್ತುಸ್ಥಿತಿಗಳ ಕುರಿತು ಮಾಹಿತಿ ಪಡೆಯಬೇಕು. ಜಿಲ್ಲೆಯಲ್ಲಿ ಸರ್ಕಾರಿ ಮತ್ತು ಸರ್ಕಾರೇತರ ಶಾಲಾ-ಕಾಲೇಜು, ವಸತಿ ನಿಲಯಗಳಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಕಾವಲು ಸಭೆ ಹಮ್ಮಿಕೊಂಡು ಆ ಸಭೆಯಲ್ಲಿ ಕಾಣೆಯಾದ ಮಕ್ಕಳ ಕುರಿತು ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಪಿ ರವಿಕುಮಾರ್ ಅವರು ಮಾತನಾಡಿ, ಎಲ್ಲಾ ಠಾಣೆಯ ಪೊಲೀಸ್ ಅಧಿಕಾರಿಗಳು ಹೆಚ್ಚಿನ ನಿಗಾವಹಿಸಿ ಕಾಣೆಯಾದ ಮಕ್ಕಳ ಕುರಿತು ಪತ್ತೆ ಹಚ್ಚಲು ಕ್ರಮವಹಿಸ ಬೇಕು. ಪೋಕ್ಸೋ ಘಟನೆ ಕಂಡುಬಂದಲ್ಲಿ ಯಾವುದೇ ವಿಳಂಬ ಇಲ್ಲದೇ ಕೂಡಲೇ ಎಫ್‌ಐಆರ್ ದಾಖಲಿಸಲು ಮುತುವರ್ಜಿ ವಹಿಸಬೇಕು ಎಂದು ಹೇಳಿದರು.

ಪೊಲೀಸ್ ಇಲಾಖೆ ವತಿಯಿಂದ ತೆರೆದ ಮನೆ ಕಾರ್ಯಕ್ರಮವನ್ನು ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಹಮ್ಮಿಕೊಂಡು ಜಾಗೃತಿ ಮೂಡಿಸಬೇಕು. ಜಿಲ್ಲೆಯಲ್ಲಿ ಮಕ್ಕಳು ಕಾಣೆಯಾದ ಸಂದರ್ಭದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ 1098 ಅಥವಾ 112 ಕರೆ ಮಾಡಬೇಕು ಎಂದು ತಿಳಿಸಿದರು.

18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳ ಎಲ್ಲಾ ನಾಪತ್ತೆ ಪ್ರಕರಣಗಳನ್ನು ಅಪಹರಣ ಪ್ರಕರಣಗಳಾಗಿ ದಾಖಲಿಸಲಾಗುತ್ತದೆ ಮತ್ತು 18 ಮೇಲ್ಪಟ್ಟ ವಯಸ್ಸಿನ ನಾಪತ್ತೆ ಪ್ರಕರಣಗಳನ್ನು ಕಾಣೆಯಾಗಿರುವುದು ಎಂದು ಪರಿಗಣಿಸಲಾಗುತ್ತದೆ ಎಂದು ಮಹಿಳಾ ಪೊಲೀಸ್ ಠಾಣೆಯ ಸಿಪಿಐ ರಮೇಶ್ ಕುಲಕರ್ಣಿ ಅವರು ಸಭೆಗೆ ತಿಳಿಸಿದರು.

ಇದೇ ವೇಳೆ ಬಾಲ್ಯವಿವಾಹ ನಿಷೇಧ ಕುರಿತ ಭಿತ್ತಿಪತ್ರ ಬಿಡುಗಡೆಗೊಳಿಸಿದರು.

ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾನೂನು ಪರಿವೀಕ್ಷಣಾಧಿಕಾರಿ ಈಶ್ವರ್ ರಾವ್, ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿ ಕೃಷ್ಣಪ್ಪ, ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯೆ ಗೌಸಿಯಾ, ಮಕ್ಕಳ ವಿಶೇಷ ಪೊಲೀಸ್ ಘಟಕದ ಅಧಿಕಾರಿಗಳಾದ ರೇಷ್ಮಾ, ಮಾರುತಿ, ರೀಡ್ಸ್ ಸಂಸ್ಥೆಯ ತಿಪ್ಪೇಸ್ವಾಮಿ, ರೀಚ್ ಸಂಸ್ಥೆಯ ಹನುಮಂತಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ಹೊನ್ನುರಪ್ಪ, ಮೋಹನ್ ರೆಡ್ಡಿ, ಮಂಜುನಾಥ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಬಳ್ಳಾರಿ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪಿಯುಸಿ ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ನೀಡಲಾಗುತ್ತಿರುವ ಮೆಟ್ರಿಕ್ ನಂತರದ

ವಿದ್ಯಾರ್ಥಿ ವೇತನ, ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಮತ್ತು ಶುಲ್ಕ ಮರುಪಾವತಿ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಜ.31 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗವಿಮಠ ಶ್ರೀಗಳ ಪದವಿ ಗೆಳೆಯರಿಂದ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಪ್ರಸಾದ



**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ: ಶ್ರೀ ಗವಿಸಿದ್ಧೇಶ್ವರ ಮಹಾವಿದ್ಯಾಯದಲ್ಲಿ 1997-98 ನೇ ಸಾಲಿನಲ್ಲಿ ಪದವಿ ಅಭ್ಯಾಸ ಮಾಡಿರುವ ಶ್ರೀ ಗವಿಸಿದ್ಧೇಶ್ವರ ಮಹಾಸ್ವಾಮಿಜಿಗಳ ಪದವಿ ಗೆಳೆಯರ ಬಳಗದ ವತಿಯಿಂದ ಶ್ರೀ ಗವಿಸಿದ್ಧೇಶ್ವರ

ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಪ್ರಸಾದ ವ್ಯವಸ್ಥೆ ಮತ್ತು ಸುರಭಿ ವೃದ್ಧಾಶ್ರಮದಲ್ಲಿ ವೃದ್ಧರಿಗೆ ಊಟದ ವ್ಯವಸ್ಥೆಯನ್ನು ಮಾಡಲಾಯಿತು.

ಪ್ರತಿ ವರ್ಷ ಡಿಸೆಂಬರ್ ತಿಂಗಳಲ್ಲಿ

1997-98 ನೇ ಸಾಲಿನಲ್ಲಿ ಅಭ್ಯಾಸ ಮಾಡಿದ ಪದವಿ ಗೆಳೆಯರು ಎಲ್ಲರೂ ಸೇರಿ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಒಂದು ದಿನದ ಪ್ರಸಾದ ವ್ಯವಸ್ಥೆ ಮಾಡುವ

ಸಂಕಲ್ಪವನ್ನು ಮಾಡಲಾಗಿದ್ದು, ಅದರಂತೆ ಕಳೆದೆರಡು ವರ್ಷಗಳಿಂದ ಮಾಡಿಕೊಂಡು ಬರಲಾಗುತ್ತದೆ. ಬೆಳಗ್ಗೆಯೇ ವಿವಿಧೆಡೆಯಿಂದ ಬಂದಿದ್ದ ಪದವಿ

ಗೆಳೆಯರು ಎಲ್ಲರೂ ಸೇರಿ ಮೊದಲು ಸುರಭಿ ವೃದ್ಧಾಶ್ರಮದಲ್ಲಿರುವ ಹಿರಿಯರೊಂದಿಗೆ ಮಾತುಕತೆ ನಡೆಸಲಾಗುತ್ತದೆ. ಅವರೊಂದಿಗೆ ಹರಟೆ ಹೊಡೆದು,

ಅವರನ್ನು ಸಂತಸಗೊಳಿಸಲಾಯಿತು. ಅದಾದ ಮೇಲೆ ಅವರಿಗೂ ಅಚ್ಚುಕಟ್ಟಾದ ಊಟದ ವ್ಯವಸ್ಥೆಯನ್ನು ಮಾಡಲಾಯಿತು. ಅದಾದ ಮೇಲೆ

ಶ್ರೀ ಗವಿಸಿದ್ಧೇಶ್ವರ ಹಾಸ್ಟೆಲ್‌ನಲ್ಲಿ ಎಲ್ಲ ಮಕ್ಕಳಿಗೂ ಗೋಧಿ ಹುಗ್ಗಿ, ಫಲಾವ್, ಅನ್ನ, ಸಾಂಬರ್,

ಬದನೇಕಾಯಿ ಫಲ್ಯವನ್ನೊಳಗೊಂಡ ಪ್ರಸಾದ ವ್ಯವಸ್ಥೆಯನ್ನು ಮಾಡಲಾಯಿತು.

22ಕೆಪಿಎಲ್21 ಸುರಭಿ ವೃದ್ಧಾಶ್ರಮದಲ್ಲಿ

ಶ್ರೀ ಗವಿಸಿದ್ಧೇಶ್ವರ ಮಹಾಸ್ವಾಮೀಜಿಗಳ ಪದವಿ ಗೆಳೆಯರು.

# ರಾಷ್ಟ್ರೀಯಗಣಿತ ದಿನಾಚರಣೆಕಾರ್ಯಕ್ರಮ




**ಮಲ್ಲಮ್ಮ ನುಡಿ ವಾರ್ತೆ**

**ಬಾಗಲಕೋಟ :** ಸಂಸ್ಥೆಯಲ್ಲಿ ರಾಷ್ಟ್ರೀಯ ಗಣಿತ ದಿನಾಚರಣೆ 2025 ರಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯರಾದ ಶ್ರೀ ಎಸ್. ಎಸ್. ಹುಬ್ಬಳ್ಳಿಯವರು ವಹಿಸಿಕೊಂಡಿದ್ದರು, ವಿಜ್ಞಾನ ವಿಭಾಗದ ಮುಖ್ಯಸ್ಥೆ ಶ್ರೀಮತಿ ಜಯಶ್ರೀ ಗದ್ದಿಯವರು ಪ್ರಾಸ್ತಾವಿಕವಾಗಿ ಮಾತನಾಡಿ ಜಗತ್ಪ್ರಸಿದ್ಧ ಶ್ರೇಷ್ಠ ಗಣಿತಜ್ಞಡಾ॥ಶ್ರೀನಿವಾಸ್ ರಾಮಾನುಜನರ ಜನ್ಮ ದಿನಾಚರಣೆಯ ನಿಮಿತ್ಯವಾಗಿ ದೇಶಾದ್ಯಂತ 'ಗಣಿತ ದಿನ' ವನ್ನು ಆಚರಿಸಲಾಗುತ್ತಿದ್ದು ರಾಮಾನುಜನರ ಸಾಧನೆಗಳು ಇಂದಿನ ವಿದ್ಯಾರ್ಥಿಗಳಿಗೆ ದಾರಿದೀಪಗಳಾಗಿವೆ ಎಂದು ತಿಳಿಸಿದರು. ಪ್ರಾಚಾರ್ಯರಾದ ಶ್ರೀ ಎಸ್. ಎಸ್. ಹುಬ್ಬಳ್ಳಿಯವರು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ವೃದ್ಧಿಸಿಲು ಇಂತಹ ಮಹಾನುಭಾವರ ದಿನಾಚರಣೆಯನ್ನು ಹಮ್ಮಿಕೊಂಡು ಅವರ ಸಾಧನೆಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಬೇಕೆಂದು ಸಲಹೆ ನೀಡಿದರು ಕಾರ್ಯಕ್ರಮದಲ್ಲಿ ರಾಮಾನುಜನರಜೀವನ ಸಾಧನೆಗಳ ಕುರಿತು ವೀಡಿಯೋ ಪ್ರದರ್ಶನ ಮಾಡಲಾಯಿತು

ಕಾರ್ಯಕ್ರಮವನ್ನು ಶ್ರೀಮತಿ ಸ್ಮಿತಾ ಪೂಜಾರ ನಿರೂಪಿಸಿದರು ಹಾಗೂ ಕೊನೆಯಲ್ಲಿ ಶ್ರೀ ಎಂ.ಕೆ. ಚವಡಿಯವರು ವಂದಿಸಿದರು ಈ ಕಾರ್ಯಕ್ರಮದಲ್ಲಿ ಗಣಿತ ವಿಷಯದ ಮೇಲೆ ವಿದ್ಯಾರ್ಥಿಗಳಿಗಾಗಿ ರಸ ಪ್ರಶ್ನೆ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಮುಖ್ಯಸ್ಥರುಗಳು ಹಾಗೂ ಸಿಬ್ಬಂದಿವರ್ಗದವರು ಪಾಲ್ಗೊಂಡಿದ್ದರು.

# ತುಳಸಿಗೇರಿ ಮಾರುತೇಶ್ವರ ಹುಂಡಿ ಎಣಿಕೆ: 6 ಲಕ್ಷ ಸಂಗ್ರಹ



**ಮಲ್ಲಮ್ಮ ನುಡಿ ಬಾಗಲಕೋಟೆ:**

ತಾಲ್ಲೂಕಿನ ಕಲಾದಗಿ ಸಮೀಪದ ತುಳಸಿಗೇರಿ ಮಾರುತೇಶ್ವರ ದೇವಸ್ಥಾನದ ಕಾಣಿಕೆ ಹುಂಡಿಯನ್ನು ಸೋಮವಾರ ತೆರೆಯಲಾಯಿತು.ಬಾಗಲಕೊಟೆ ತಹಶೀಲ್ದಾರ್ ವಾಸುದೇವ.ವಿ. ಸ್ವಾಮಿ ನೇತೃತ್ವದಲ್ಲಿ ನಾಲ್ಕು ಹುಂಡಿಗಳ ಹಣ ಎಣಿಕೆ ಮಾಡಲಾಗಿದ್ದು ಒಟ್ಟು 6,52,753 ಸಂಗ್ರಹವಾಗಿದೆ.ಶಿರಸ್ತೇದಾರ್ ನಾಗರಾಜ ಕುಲಕರ್ಣಿ ,ಉಪತಹಶೀಲ್ದಾರ್ ಆರ್.ಆರ್.ಕುಲಕರ್ಣಿ , ಕಂದಾಯ ವೃತ್ತನಿರೀಕ್ಷಕ ಎಮ್.ಕೆ.ಮಲಕ್ಕನವರ ,ಗ್ರಾಮ ಆಡಳಿತ ಅಧಿಕಾರಿಗಳಾದ ಎ. ವಿ. ಸೂರ್ಯವಂಶಿ, ರವಿ ಕುಳ್ಳೊಳ್ಳಿ, ಶ್ರೀಕಾಂತ ಪಾಟೀಲ, ವಿಜಯಲಕ್ಷ್ಮಿ ನಾಯ್ಕರ, ಎಸ್.ಬಿ.ಪಾಟೀಲ ಹಾಗೂ ತುಳಸಿಗೇರಿ ಕರ್ನಾಟಕ ವಿಕಾಸ ಬ್ಯಾಂಕ್, ಕಂದಾಯ ಇಲಾಖೆ ಹಾಗೂ ಪೊಲೀಸ್ ಸಿಬ್ಬಂದಿ ಇದ್ದರು.

# ಗವಿಸಿದ್ಧೇಶ್ವರ ಜಾತ್ರೆಯಲ್ಲಿ ಸ್ವಯಂ ಸೇವಕರಾಗಿ ಸೇವೆ ಸಲ್ಲಿಸಲು ಅವಕಾಶ




**ಮಲ್ಲಮ್ಮ ನುಡಿ ವಾರ್ತೆ**

**ವಿಜಯನಗರ(ಹೊಸಪೇಟೆ) :** ದಕ್ಷಿಣ ಭಾರತದ ಕುಂಭಮೇಳವೆಂದು ಪ್ರಸಿದ್ದವಾಗಿರುವ ಕೊಪ್ಪಳದ ಶ್ರೀಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವದ ಧಾರ್ಮಿಕ ವಿಧಿವಿಧಾನಗಳು ಜನವರಿ 2 ರಿಂದ ಪ್ರಾರಂಭವಾಗಂಲಿದ್ದು, ಜಾತ್ರೆಯಲ್ಲಿ ಸ್ವಇಚ್ಛೆಯಿಂದ ಸ್ವಯಂಸೇವಕರಾಗಿ ಸೇವೆ ಸಲ್ಲಿಸ ಬಯಸುವ ಆಸಕ್ತರು ಹೆಸರು ನೊಂದಾಯಿಸಲು ಅವಕಾಶ ಕಲ್ಪಿಸಲಾಗಿದೆ.

ಸೇವೆ ಸಲ್ಲಿಸುವ ವಿಭಾಗಗಳು

ಸ್ವಚ್ಛತಾ ಸೇವೆ: ಮಹಾರಥೋತ್ಸವದ ಮೈದಾನ, ಶ್ರೀಗವಿ ಮಠದ ರಸ್ತೆ, ಮಹಾದಾಸೋಹದ ರಸ್ತೆ, ಮಠದ ಆವರಣ, ಮಹಾದಾಸೋಹ ಆವರಣ, ಕೈಲಾಸ ಮಂಟಪ, ಪ್ರಸಾದ ತಯಾರಿಸುವ ಸ್ಥಳ ಮತ್ತು ಜಾತ್ರಾ ಅಂಗಡಿ ಸ್ಥಳಗಳನ್ನು ಸ್ವಚ್ಛಗೊಳಿಸುವ ಸೇವೆ ಇರುತ್ತದೆ.

ಮಹಾದಾಸೋಹ ಸೇವೆ: ತರಕಾರಿ ಹೆಚ್ಚುವುದು, ಪ್ರಸಾದ ತಯಾರಿಸುವುದು, ಪ್ರಸಾದ ಬಡಿಸುವುದು, ಅಡುಗೆ ಸಾಮಾನು ತೊಳೆಯುವುದು, ರೊಟ್ಟಿ ಸಂಗ್ರಹಿಸುವುದು, ಕಟ್ಟಿಗೆ ಹೊರುವುದು(ಪ್ರಸಾದ ತಯಾರಿಸುವ ಸ್ಥಳಕ್ಕೆ ತರುವುದು) ಮತ್ತು ಕಟ್ಟಿಗೆ ಒಡೆಯುವ ಸೇವೆ ಇರುತ್ತದೆ.

ಶಿಸ್ತು ಕರ್ತವ್ಯ ಸೇವೆ : ಜಾತ್ರಾ ಆವರಣದಲ್ಲಿ ಶಿಸ್ತು ಕಾಪಾಡುವುದು, ಮಹಾದಾಸೋಹದಲ್ಲಿ ಶಿಸ್ತು ಕಾಪಾಡುವುದು, ವಾಹನಗಳ ನಿಲುಗಡೆ, ಯಾತ್ರಿಗಳಿಗೆ ಸಣ್ಣಪುಟ್ಟ ಅಂಗಡಿಗಳಿಂದ ತೊಂದರೆಯಾಗದಂತೆ ನೋಡುವುದು, ಜಾತ್ರಾ ಅಂಗಡಿಗಳ ಶಿಸ್ತು ಕಾಪಾಡುವುದು ಸೇರಿದಂತೆ ದವಸಧಾನ್ಯ ಸಂಗ್ರಹಿಸುವಲ್ಲಿ ಸಹಾಯ ಮಾಡುವುದಾಗಲಿ ಹಾಗೂ ಶ್ರೀಗವಿ ಮಠವು ಒಪ್ಪಿಸುವ ಇತರೆ ಯಾವುದೇ ಸೇವೆಯನ್ನು ಮಾಡಲು ಸಿದ್ಧರಿರಬೇಕಿದೆ.

ಸೇವೆ ಸಲ್ಲಿಸ ಬಯಸುವ ಅಸ್ತಕರು ತಮ್ಮ ಊರು, ಸಂಘ–ಸಂಸ್ಥೆ ಮತ್ತು ಇಲಾಖೆ ಸಂಪೂರ್ಣ ವಿವರ ಹಾಗೂ ಭಕ್ತಾಧಿಗಳ ಸಂಖ್ಯೆಯನ್ನು ಮತ್ತು ಸೇವೆ ಸಲ್ಲಿಸುವ ವಿಭಾಗದ ಹೆಸರು ನೊಂದಾಯಿಸುವ ಜತೆಗೆ, ಸೇವೆ ಸಲ್ಲಿಸುವ ದಿನಗಳನ್ನು ತಿಳಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮತ್ತು ನೊಂದಾಣಿಗಾಗಿ ಮೊ.9844634990 ಸಂಖ್ಯೆಗೆ ಕರೆ ಮಾಡಬಹುದು ಎಂದು ಶ್ರೀಗವಿಮಠ ಸಂಸ್ಥಾನದ ಆಡಳಿತಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಂಪಿ ಮೃಗಾಲಯ : ವರ್ಷಾಂತ್ಯದವರೆಗೆ ಪ್ರವಾಸಿಗರ ವೀಕ್ಷಣೆಗೆ ರಜಾಮುಕ್ತ ಅವಕಾಶ

**ಮಲ್ಲಮ್ಮ ನುಡಿ ವಾರ್ತೆ**

**ವಿಜಯನಗರ (ಹೊಸಪೇಟೆ):** ಹಂಪಿಯ ಮೃಗಾಲಯ ಶ್ರೀಅಟಲ್ ಬಿಹಾರಿ ವಾಜಪೇಯಿ ಜೂಲಾಜಿಕಲ್ ಪಾರ್ಕ್ ಡಿಸೆಂಬರ್.23 ಮತ್ತು ಡಿ.30 ರ ಮಂಗಳವಾರ ಸೇರಿದಂತೆ ಪ್ರವಾಸಿಗರ ವೀಕ್ಷಣೆಗೆ ರಜಾ ಮುಕ್ತಗೊಳಿಸಲಾಗಿದೆ ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ, ಕಾರ್ಯನಿರ್ವಾಹಕ ನಿರ್ದೇಶಕರಾದ ಡಾ.ರಾಜೇಶ್ ನಾಯ್ಕ ತಿಳಿಸಿದ್ದಾರೆ.

ಕ್ರಿಸ್‌ಮಸ್ ಹಬ್ಬ ಪ್ರಯುಕ್ತ ಶಾಲಾ ಮಕ್ಕಳಿಗೆ ಶೈಕ್ಷಣಿಕ ಪ್ರವಾಸ ಹಮ್ಮಿಕೊಂಡಿರುವುದರಿಂದ ಶಾಲಾ ಮಕ್ಕಳು, ಪ್ರವಾಸಿಗರು, ಜನಸಾಮಾನ್ಯರು ಹಾಗೂ ಸ್ಥಳೀಯರು ಮೃಗಾಲಯವನ್ನು ವೀಕ್ಷಿಸಲು ಅನುಕೂಲವಾಗುವಂತೆ ರಜಾ ಮುಕ್ತಗೊಳಿಸಿ ನಿತ್ಯದಂತೆ ಸೇವೆ ನೀಡಲಾಗುವುದು. ಕುಟುಂಬದೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಮೃಗಾಲಯ ವೀಕ್ಷಣೆಗೆ ಆಗಮಿಸಿ ಪ್ರಾಣಿಗಳ ವೀಕ್ಷಣೆ ಮಾಡಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿ ನೋಂದಣಿ ಪ್ರಕ್ರಿಯೆ ಚಾಲನೆ

## ರೈತರ ಅನುಕೂಲಕ್ಕಾಗಿ ರಫ್ತು ಮಾಹಿತಿ ಕೇಂದ್ರ ತೆರೆಯಲು ತಿಮ್ಮಾಪೂರ ಸಲಹೆ

**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ರೈತರಿಗೆ ತಾವು ಬೆಳೆದ ಬೆಳೆಗಳ ರಫ್ತು ಕುರಿತಂತೆ ಸೂಕ್ತ ಮಾಹಿತಿ ಒದಗಿಸಲು ಕೃಷಿ ಮಾರಾಟ ಇಲಾಖೆ ಪ್ರಾಂಗಣದಲ್ಲಿ ರಫ್ತು ಮಾಹಿತಿ ಕೇಂದ್ರ ತೆರೆಯುವಂತೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ ಸಲಹೆ ನೀಡಿದರು.



ನವನಗರದ ಕೃಷಿ ಉತ್ಪನ್ನ ಮಾರಾಟ ಇಲಾಖೆಯ ಪ್ರಾಂಗಣದಲ್ಲಿ ಆರಂಭಿಸಲಾದ ತೊಗರಿ ಖರೀದಿ ಹಾಗೂ ನೊಂದಣ ಪ್ರಕ್ರಿಯೆಗೆ ಚಾಲನೆ ನೀಡಿ ಮಾತನಾಡಿದ ಅವರು, ರೈತರಿಗೆ ತಾವು ಬೆಳೆದ ಬೆಳೆಗಳಿಗೆ ಯಾವ ಯಾವ ರಾಜ್ಯ ಮತ್ತು ದೇಶಗಳಲ್ಲಿ ಎಷ್ಟರ ಮಟ್ಟಿಗೆ ಬೇಡಿಕೆ ಇದೆ, ಅಲ್ಲಿನ ದರ, ಬೇಡಿಕೆ ಮತ್ತು ಪೂರೈಕೆ ಕುರಿತಂತೆ ಮಾಹಿತಿ ನೀಡಲು ರಫ್ತು ಮಾಹಿತಿ ಕೇಂದ್ರ ಅವಶ್ಯಕತೆ ಇದೆ. ಇದರಿಂದ ರೈತರಿಗೆ ತಮ್ಮ ಬೆಳೆಗಳನ್ನು ಎಲ್ಲಿ, ಹೇಗೆ ಮತ್ತು ಯಾವಾಗ ಮಾರಾಟ ಮಾಡಬೇಕೆಂಬುದರ ಕುರಿತು ಸರಿಯಾದ ಮಾರ್ಗದರ್ಶನ ನೀಡಿದಂತಾಗುತ್ತದೆ ಎಂದರು.

ರೈತರ ಅನುಕೂಲಕ್ಕಾಗಿ ಜಿಲ್ಲೆಯಲ್ಲಿ ಒಟ್ಟು 24 ತೊಗರಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ.ಬೆಂಬಲಬೆಲೆಯೋಜನೆಯಡಿ ಪ್ರತಿ ಕ್ವಿಂಟಲ್‌ಗೆ 8 ಸಾವಿರ ರೂ.ಗಳಂತೆ ಖರೀದಿ ಮಾಡಿಕೊಳ್ಳಲಾಗುತ್ತಿದೆ.ಜಿಲ್ಲೆಯಲ್ಲಿ 53262 ಹೆಕ್ಟೆರ್ ಪ್ರದೇಶದಲ್ಲಿ ತೊಗರಿ ಬಿತ್ತನೆಯಾಗಿದ್ದು, 66578 ಮೆಟ್ರಿಕ್ ಟನ್ ಉತ್ಪಾದನೆ ನೀರಿಕ್ಷಿಸಲಾಗಿದೆ. ಪ್ರತಿ ಎಕರೆಗೆ 4 ಕ್ವಿಂಟಲ್‌ನಂತೆ ಖರೀದಿಸಲಾಗುತ್ತಿದೆ. ನೋಂದಣಿ ಪ್ರಕ್ರಿಯೆಗೆ ಬಾಗಲಕೋಟೆ ತಾಲೂಕಿನಲ್ಲಿ ಚಾಲನೆ ನೀಡಲಾಗಿದೆ. ಹುನಗುಂದಲ್ಲಿ ಈಗಾಗಲೇ 30 ಜನ ರೈತರು ನೋಂದಣಿ ಮಾಡಿಕೊಂಡಿದ್ದಾರೆ. ಖರೀದಿ ಕೇಂದ್ರಕ್ಕೆ ಬರಲು ಆಗದ ವೃದ್ದ ರೈತರ ಮನೆಗೆ ತೆರಳಿ ಬಯೋಮ್ಯಾಟ್ರಿಕ್ ಪಡೆದುಕೊಳ್ಳಲಿದ್ದಾರೆ ಎಂದು ತಿಳಿಸಿದರು.

ಈಗಾಗಲೇ ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಿ ಮೆಕ್ಕೆಜೋಳಗ ಖರೀದಿ ಪ್ರಕ್ರಿಯೆ ನಡೆದಿದೆ. ಜಿಲ್ಲೆಯಲ್ಲಿ 47450 ಕ್ವಿಂಟಲ್ ಮೆಕ್ಕೆಜೋಳ ಖರೀದಿ ಪ್ರಕ್ರಿಯೆ ಚಾಲ್ತಿಯಲ್ಲಿರುವಾಗಿ ತಿಳಿಸಿದರು. ಖರೀದಿ ಕೇಂದ್ರದಲ್ಲಿ ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳುವಂತೆ ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು. ರೈತರ ಸಮಸ್ಯೆಗೆ ಸ್ಪಂದಿಸುವ ಕೆಲಸ ಸರಕಾರ ಮಾಡುತ್ತಿದೆ. ಬೆಳೆ ಹಾನಿ ಪರಿಹಾರವಾಗಿ 139 ಕೋಟಿ ನೀಡಲಾಗಿದ್ದು, ಹೆಚ್ಚುವರಿಯಾಗಿ 55 ಕೋಟಿ ರೂ. ಪರಿಹಾರ ಸಹ ಜಮೆ ಮಾಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಅಪರ ಜಿಲ್ಲಾಧಿಕಾರಿ ಅಶೋಕ್ ತೇಲಿ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ತಹಶೀಲ್ದಾರ ವಾಸುದೇವಸ್ವಾಮಿ, ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕ ವಿ.ಡಿ.ಪಾಟೀಲ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿಯ ಜಿಲ್ಲಾ ವ್ಯವಸ್ಥಾಪಕಿ ಸುಪ್ರೀಯಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶ್ರೀದೇವಿ ಸುನಗದ ರಾಜ್ಯಮಟ್ಟಕ್ಕೆ ಆಯ್ಕೆ

**ಮಲ್ಲಮ್ಮ ನುಡಿ ಬಾಗಲಕೋಟೆ:**



ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಬಾಗಲಕೋಟೆಯಲ್ಲಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗಾಗಿ ನಡೆದ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ಬಾಗಲಕೋಟೆ ತಾಲ್ಲೂಕಿನ ಮುಗಳೊಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಶ್ರೀದೇವಿ ಸುರೇಶ ಸುನಗದ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. 'ವಿದ್ಯುನ್ಮಾನ ಮತಯಂತ್ರ ಹಾಗೂ ವಿವಿ ಪ್ಯಾಟ್ ಗಳು ಭಾರತ ಚುನಾವಣಾ ಆಯೋಗದ ಮೇಲೆ ಮತದಾರರ ವಿಶ್ವಾಸಾರ್ಹತೆಯನ್ನು ಹೇಗೆ ಹೆಚ್ಚಿಸುತ್ತವೆ ' ಎಂಬ ವಿಷಯದ ಮೇಲೆ ಪ್ರಬಂಧ ಮಂಡಿಸಿ ಪ್ರಥಮ ಸ್ಥಾನ ಗಳಿಸಿ ಶ್ರೀದೇವಿ ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾಳೆ ಎಂದು ಕಾಲೇಜಿನ ಪ್ರಾಚಾರ್ಯ ಎಸ್.ಎಸ್.ಬಿರಾದಾರ ಹಾಗೂ ಮಾರ್ಗದರ್ಶನ ನೀಡಿದ ಪ್ರೊ.ಜಿ. ಎಚ್.ಬಡಿಗೇರ ತಿಳಿಸಿದ್ದಾರೆ.

# ಪಿಂಚಣಿದಾರರ ಕುಂದು ಕೊರತೆ ಸಭೆ

**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ :** ಭವಿಷ್ಯ ನಿಧಿ/ಪಿಂಚಣಿ ಇತ್ಯಾದಿಗಳಿಗೆ ಸಂಬಂಧಿಸಿದ ಕುಂದು ಕೊರತೆಗಳ ಸಭೆಯನ್ನು ಡಿಸೆಂಬರ್ 29 ರಂದು ಮುಧೋಳ ತಾಲ್ಲೂಕಿನ ಗೋದಾವರಿ ಬಯೋಫೈನರೀಸ್ ಲಿಮಿಟೆಡ್, ಫ್ಯಾಕ್ಟರಿ ವಿಭಾಗ, ಸಮೀರವಾಡಿಯಲ್ಲಿ ಬೆಳಿಗ್ಗೆ 9.30 ರಿಂದ ಸಂಜೆ 04 ಗಂಟೆಯವರೆಗೆ ನಡೆಸಲಾಗುತ್ತಿದ್ದು, ಪಿಂಚಣಿದಾರರು, ಇಪಿಎಫ್ ಚಂದಾದಾರರು ಮತ್ತು ಉದ್ಯೋಗದಾತರು ಈ ಅವಕಾಶವನ್ನು ಬಳಸಿಕೊಂಡು ಸಭೆಯಲ್ಲಿ ಭಾಗವಹಿಸಿ ತಮ್ಮ ಕುಂದು ಕೊರತೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ sro.raichur@epfindia.gov.in ಮತ್ತು do.bagalkot@epfindia.gov.in ಇ–ಮೇಲ್ ಗೆ ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ಪ್ರಾದೇಶಿಕ ಕಛೇರಿ ಪಿ.ಎಫ್ ಕಮೀಷನರ್ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಮಕ್ಕಳ ಹಕ್ಕುಗಳ ರಕ್ಷಣೆ ಎಲ್ಲರ ಜವಾಬ್ದಾರಿ : ರಾಮತ್ನಾಳ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಮಕ್ಕಳಹಕ್ಕುಗಳರಕ್ಷಣೆಕೇವಲಒಂದೇ ಇಲಾಖೆಯ ಜವಾಬ್ದಾರಿಯಾಗದೆ, ಸಮಾಜದ ಪ್ರತಿಯೊಬ್ಬ ವ್ಯಕ್ತಿಯ ಕರ್ತವ್ಯವಾಗಿದೆ. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಯುವ ನಿಟ್ಟಿನಲ್ಲಿ ಪುನರ್ವಸತಿ ಕಾರ್ಯಕರ್ತರು ಇನ್ನಷ್ಟು ಚುರುಕಾಗಿ ಕಾರ್ಯನಿರ್ವಹಿಸಬೇಕೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ರಾಮತ್ನಾಳ ಅಭಿಪ್ರಾಯಪಟ್ಟರು.

ಜಿಲ್ಲಾ ಆಡಳಿತದ ಆಡಿಟೋರಿಯಂ ಹಾಲ್‌ನಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದಲ್ಲಿ ಜಿಲ್ಲೆಯ ಎಂ.ಆರ್. ಡಬ್ಲ್ಯೂ, ಯು.ಆರ್.ಡಬ್ಲ್ಯೂ. ಮತ್ತು ವಿ.ಆರ್.ಡಬ್ಲ್ಯೂ ಕಾರ್ಯಕರ್ತರಿಗಾಗಿ ಆಯೋಜಿಸಲಾಗಿದ್ದ ಮಕ್ಕಳ ಹಕ್ಕುಗಳು ಮತ್ತು ಕಾನೂನುಗಳ ಕುರಿತ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳ ಹಕ್ಕುಗಳ ಉಲ್ಲಂಘನೆ ಅಥವಾ ದೌರ್ಜನ್ಯ ಸಂಭವಿಸಿದಾಗ ಗ್ರಾಮೀಣ ಮಟ್ಟದ ಕಾರ್ಯಕರ್ತರು ಮೊದಲ ಪ್ರತಿಸ್ಪಂದಕರಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಬಾಲ್ಯವಿವಾಹ ಹಾಗೂ ಬಾಲಕಾರ್ಮಿಕ ಪದ್ಧತಿ ಎಂಬ ಸಾಮಾಜಿಕ ಪಿಡುಗುಗಳನ್ನು ನಿರ್ಮೂಲನೆಗೊಳಿಸಲು ಗ್ರಾಮ ಪಂಚಾಯತ್ ಮಟ್ಟದಲ್ಲಿ ಸಮಿತಿಗಳನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಮತ್ತು ವಿಕಲಚೇತನ ಮಕ್ಕಳಿಗೆ ಮೀಸಲಾದ ಶೇ.5ರಷ್ಟು ಅನುದಾನದ ಸಮರ್ಪಕ ಬಳಕೆಯ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸುವಂತೆ ಸೂಚಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲೆಯಲ್ಲಿ ಸುಮಾರು 25 ಸಾವಿರ ವಿಕಲಚೇತನರು ಇದ್ದು, ಅವರಲ್ಲಿ ಮಕ್ಕಳ ಸಂಖ್ಯೆಯನ್ನು ನಿಖರವಾಗಿ ಗುರುತಿಸುವ ಅಗತ್ಯವಿದೆ ಎಂದು ತಿಳಿಸಿದರು. ಅಂತಹ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಹೊಣೆಗಾರಿಕೆಯಾಗಿದೆ. ಅಂಥ ಮಕ್ಕಳಿಗೆ ಬ್ರೈಲ್ ಶಿಕ್ಷಣ ವ್ಯವಸ್ಥೆ, ದೈಹಿಕ ದೋಷವಿರುವ ಮಕ್ಕಳಿಗೆ ಜನನದ 48 ಗಂಟೆಯೊಳಗೆ ಶಸ್ತ್ರಚಿಕಿತ್ಸೆ ಸೇರಿದಂತೆ ಅಗತ್ಯ ವೈದ್ಯಕೀಯ ಸೌಲಭ್ಯಗಳನ್ನು ತಲುಪಿಸಲು ವಿವಿಧ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಜಿಲ್ಲಾಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ್ ಗೋಯಲ್ ಮಾತನಾಡಿ, ಮಕ್ಕಳ ವಿರುದ್ಧದ ಅಪರಾಧಗಳನ್ನು ತಡೆಗಟ್ಟಲು ಕೇವಲ ಶಿಕ್ಷೆಯಷ್ಟೇ ಸಾಕಾಗುವುದಿಲ್ಲ; ಅಪರಾಧಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ ಎಂದರು. ಪೋಕ್ಸೋ ಕಾಯ್ದೆಯ ಕುರಿತು ಸಮಾಜದಲ್ಲಿ ಇನ್ನಷ್ಟು ಜಾಗೃತಿ ಮೂಡಿಸುವ ಅಗತ್ಯವಿದ್ದು, ಈ ಉದ್ದೇಶದಿಂದ ಜಿಲ್ಲೆಯಲ್ಲಿ 800ಕ್ಕೂ ಹೆಚ್ಚು ಶಾಲೆ ಹಾಗೂ ಕಾಲೇಜುಗಳಲ್ಲಿ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಪೋಷಕರು ತಮ್ಮ ಮಕ್ಕಳನ್ನು ಇತರರೊಂದಿಗೆ ಹೋಲಿಸದೆ, ಅವರಲ್ಲಿ ಆತ್ಮವಿಶ್ವಾಸ ಬೆಳೆಸುವತ್ತ ಗಮನ ಹರಿಸಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ., ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಹನುಮಂತಗೌಡ ಪಾಟೀಲ್ ಹಾಗೂ ವಿಕಲಚೇತನ ಮತ್ತು ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಗಿರಿಜಾ ಪಾಟೀಲ್ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ನೂರಾರು ತಾಲೂಕು, ನಗರ ಹಾಗೂ ಗ್ರಾಮ ಪುನರ್ವಸತಿ ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಿರಿದಾನ್ಯಗಳ ಜಾಗೃತಿ ಮ್ಯಾರಥಾನ್‌ಗೆ ಜೆ.ಟಿ.ಪಾಟೀಲ ಚಾಲನೆ

**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ :**

ಅಂತರರಾಷ್ಟ್ರೀಯ ವಾಣಿಜ್ಯ ಮೇಳ–2025ರ ಅಂಗವಾಗಿ ಹಮ್ಮಿಕೊಂಡ ಸಿರಿಧಾನ್ಯಗಳ ಜಾಗೃತಿ ಮ್ಯಾರಥಾನ್ (ನಡಿಗೆ) ಗೆ ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಬಲೂನ್ ಹಾರಿಸುವ ಮೂಲಕ ಚಾಲನೆ ನೀಡಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಇಲಾಖೆ, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿಕ ಸಮಾಜ ಹಾಗೂ ಕೃಷಿ ಸಂಬಂದಿತ ಇಲಾಖೆ, ಸರಕಾರಿ ನೌಕರರ ಸಂಘದ ಸಹಯೋಗದಲ್ಲಿ ಹಮ್ಮಿಕೊಂಡ ಜಾಗೃತಿ ಮ್ಯಾರಥಾನ್‌ಗೆ ಚಾಲನೆ ನೀಡಿ ಮಾತನಾಡಿದ ಅವರು ಮೂಲ ಕೃಷಿಯತ್ತ ಎಲ್ಲ ರೈತರು ವಾಲಬೇಕಿದೆ. ಆರೋಗ್ಯಕ್ಕೆ ಉತ್ತಮವಾದ ಸಿರಿದಾನ್ಯಗಳ ಬಳಕೆ ಮಾಡುಬೇಕು. ಇವುಗಳ ಬಳಕೆಯಿಂದ ಉತ್ತಮ ಆರೋಗ್ಯ ಪಡೆದಯುಕೊಳ್ಳಬಹುದಾಗಿದೆ ಎಂದರು.

ಒಂದು ಕಾಲದಲ್ಲಿ ಸಿರಿಧಾನ್ಯ ಬಡವರ ಆಹಾರವಾಗಿತ್ತು. ಇಂದು ಶ್ರೀಮಂತರ ಆಹಾರವಾಗಿ ಪರಿಣಮಿಸಿದೆ. ವೈದ್ಯರ ಸಲಹೆ ಮೂಲಕ ಸ್ವತಃ ನಾನೇ 40 ದಿನಗಳ ಕಾಲ ಸಿರಿದಾನ್ಯ ಬಳಕೆ ಮಾಡುವ ಮೂಲಕ ಸಕ್ಕರೆ ಹಾಗೂ ರಕ್ತದ ಒತ್ತಡ ನಾರ್ಮಲ್‌ಗೆ ಬಂದಿವೆ. ಇದರ ಜೊತೆಗೆ 5 ಕೆ.ಜಿ ಕೂಡಾ ಕಡಿಮೆ ಆಗಿದೆ. ಸಿರಿಧಾನ್ಯಗಳ ಜಾಗೃತಿ ಮೂಡಿಸುವ ಪರಿಸ್ಥಿತಿ ಒದಗಿ ಬಂದಿದೆ. ಸಿರಿಧಾನ್ಯ ಬೆಳೆಯುವುದು ಸಿರಿಧಾನ್ಯ ತಿನ್ನುವುದು ಆಗಬೇಕು ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ರೈತರು ಸಾವಯುವ ಕೃಷಿಯತ್ತ ಬರಬೇಕಿದೆ. ಇದ–ರಿಂದ ಆರೋಗ್ಯಯುತ ಬೆಳೆಯನ್ನು ಬೆಳೆದು, ಉತ್ತಮ ಆರೋಗ್ಯದಿಂದಿರಲು ಸಾಧ್ಯವಾಗುತ್ತದೆ ಎಂದರು. ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ರೈತರ ದಿನಾಚರಣೆ ಶುಭಾಶಯಗಳನ್ನು ಹೇಳುವ ಮೂಲಕ ಸಿರಿಧಾನ್ಯಗಳ ಬಗ್ಗೆ ಹೆಚ್ಚಿನ ಅರಿವು ಕಾರ್ಯಕ್ರಮಗಳು ಆಗಬೇಕು. ಅದಕ್ಕೆ ಅಧಿಕಾರಿಗಳು ರೈತರಿಗೆ ಸಿರಿಧಾನ್ಯ ಬೆಳೆಗಳನ್ನು ಬೆಳೆಯುವಂತೆ ಮಾಡಬೇಕು. ಸಿರಿಧಾನ್ಯಗಳನ್ನು ಬೇರೆ ದೇಶಕ್ಕೆ ರಫ್ತು ಮಾಡಲಾಗುತ್ತಿದೆ. ಆದರೆ ಇಲ್ಲಿಯೇ ಬಳಕೆಯಾಗುವಂತೆ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಹಾಂತೇಶ ಹಟ್ಟಿ, ಜಂಟಿ ಕೃಷಿ ನಿರ್ದೇಶಕ ರುದ್ರೇಶ ಟಿ.ಎಸ್, ತೋಟಗಾರಿಕೆ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ ಸೇರಿದಂತೆ ಕೃಷಿ ಇಲಾಖೆಯ ಜಿಲ್ಲಾ ಹಾಗೂ ತಾಲೂಕಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

ಜಾಗೃತಿ ಮ್ಯಾರಥಾನ್ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನವನಗರದ ಬಸ್ ನಿಲ್ದಾಣ, ಎಲ್.ಐ.ಸಿ ವೃತ್ತ, ಎಸ್.ಬಿ.ಐ ಬ್ಯಾಂಕ್, ಜಿಲ್ಲಾ ಆಸ್ಪತ್ರೆ, ಕಾಳಿದಾಸ ವೃತ್ತದ ಮಾರ್ಗವಾಗಿ ವಿದ್ಯಾಗಿರಿ ಇಂಜಿನೀಯರಿಂಗ್ ಕಾಲೇಜಿಗೆ ಮುಕ್ತಾಯಗೊಂಡಿತು. ಮ್ಯಾರಥಾನ್‌ದಲ್ಲಿ ಸಿರಿಧಾನ್ಯಗಳ ಮಹತ್ವವನ್ನು ಸಾರುವ ವಿವಿಧ ಘೋಷಣಾ ಫಲಕಗಳನ್ನು ಪ್ರದರ್ಶನ ಮಾಡಲಾಯಿತು. ಜಾಥಾದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಸೇರಿ ಪ್ಯಾರಾ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳು ಕ್ರೀಡಾಪಟುಗಳು ಪಾಲ್ಗೊಂಡಿದ್ದರು.ಥ



ಹುಣಸೂರು ತಾಲೂಕಿನ ಮಾಜಿ ಶಾಸಕ ಹಾಗೂಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ವಿಶೇಷ ವಿಮಾನದಲ್ಲಿ ಮೈಸೂರಿನಿಂದ ಬೆಂಗಳೂರಿಗೆ ತೆರಳಿದರು. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರೊಂದಿಗೆ ಈ ವೇಳೆ ವಿಮಾನದಲ್ಲಿ ಪ್ರಸ್ತುತ ದಿನಗಳ ರಾಜಕೀಯ ವಿದ್ಯಮಾನಗಳ ಬಗ್ಗೆ ಹಾಗೂ ಹುಣಸೂರು ತಾಲೂಕಿನ ಕಾಡಂಚಿನ ಗ್ರಾಮಗಳಲ್ಲಿ ಆಗಾಗ್ಗೆ ನಡೆಯುತ್ತಿರುವ ವನ್ಯಜೀವಿ ಹಾಗೂ ಮಾನವ ಸಂಘರ್ಷ ತಡೆ ಮತ್ತು ವನ್ಯಜೀವಿಗಳು ಕಾಡಿನಿಂದ ಹೊರ ಬಾರದಂತೆ ವೈಜ್ಞಾನಿಕ ತಂತ್ರಗಾರಿಕೆ ಬಳಕೆಗೆ ಅರಣ್ಯ ಇಲಾಖೆಗೆ ಸೂಚನೆ ನೀಡುವ ಬಗ್ಗೆ ಚರ್ಚಿಸಿದರು.



ಕೂಡ್ಲಿಗಿ ತಾಲೂಕು ಯುವ ಕಾಂಗ್ರೆಸ್ ಕಾನೂನು ಘಟಕದ ತಾಲೂಕು ಅಧ್ಯಕ್ಷ ರಾಗಿ ತಿಪ್ಪೇಸ್ವಾಮಿ ವಕೀಲರು ಹಾರಕಭಾವಿ ರನ್ನು ಆಯ್ಕೆ ಮಾಡಿಆದೇಶವರಡಿಸಿರುತ್ತಾರೆ .ವಿಜಯನಗರಜಿಲ್ಲೆಯಯುವ ಕಾಂಗ್ರೆಸ್ ಕಾನೂನು ಘಟಕದ ಜಿಲ್ಲಾಧ್ಯಕ್ಷರಾದ ಅಜಾದ್ ವಕೀಲರು ಮತ್ತು ಜಿಲ್ಲಾ ಉಪಾಧ್ಯಕ್ಷರಾದ ಶಶಿಧರ್ ಕೆ. ಎಂ. ವಕೀಲರು ಮೀನಕೇರೆ. ರವರು ಅಭಿನಂದನೆ ಸಲ್ಲಿಸಿದ್ದಾರೆ.

# ಮಕ್ಕಳ ಅಂಗವೈಕಲ್ಯ ತಡೆಯಲು ಪಲ್ಸ್ ಪೋಲಿಯೊ ಕಡ್ಡಾಯ



**ಗಂಗಾವತಿ:** ಮಕ್ಕಳಲ್ಲಿನ ಅಂಗವೈಕಲ್ಯತೆ ತಡೆಯಲು ಪ್ರತಿಯೊಬ್ಬ ನಾಗರಿಕರು ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ್ ಪೋಲಿಯೋ ಹಾಕಿಸಬೇಕು ಎಂದು ಅಂಗನವಾಡಿ ಶಿಕ್ಷಕಿ ಮೆಹಮೂದಾ ಬೇಗಂ ಹೇಳಿದರು. ಅವರು 26 ನೇ ವರ್ಡ ಕೊಟ್ಟುರೇಶ್ವರ ಕ್ಯಾಂಪ ನಗರದ ಎರಡನೇ ಅಂಗನವಾಡಿ ಕೇಂದ್ರದಲ್ಲಿ ಮಗುವಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿ ಸಾಮಾನ್ಯವಾಗಿ ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆಯನ್ನು ಉಂಟು ಮಾಡುವ ಮೆಲಟೈಸ್ ಎಂಬ ಸೂಕ್ಷ್ಮಾಣುವಿನಿಂದ ಉಂಟಾಗುವ ಪೋಲಿಯೋ ರೋಗದ ನಿಯಂತ್ರಣಕ್ಕಾಗಿ 1995ರಿಂದ ನಿರಂತರವಾಗಿ ಹುಟ್ಟಿನಿಂದ ಐದು ರ್ಷದೊಳಗಿನ ಮಕ್ಕಳಿಗೆ ರಾಷ್ಟ್ರದಾದ್ಯಂತ ಪಲ್ಸ್ ಪೋಲಿಯೋ ಲಸಿಕೆ ಕರ್ಯಕ್ರಮವನ್ನು ಹಮ್ಮಿಕೊಳಲಾಗುತ್ತಿದ್ದು ಇದರ ಸದುಪಯೋಗವನ್ನು ಪ್ರತಿಯೊಬ್ಬ ನಾಗರಿಕರು ತಮ್ಮ ಮಕ್ಕಳಿಗೆ ಪಡೆಯುವ ಮೂಲಕ ಆರೋಗ್ಯ ಪರ್ಣ ಮಕ್ಕಳನ್ನಾಗಿ ಮಾಡಬೇಕು ಎಂದು ಕರೆ ನೀಡಿದರು. ಪ್ರಸ್ತುತ ಈ ರ್ಷದ ಪಲ್ಸ್ ಪೋಲಿಯೋ ಲಸಿಕೆ ಕರ್ಯಕ್ರಮ ಡಿ. 21ರಂದು ಪ್ರಾರಂಭಗೊಂಡಿದೆ. 1998ರಲ್ಲಿ 71 ಪ್ರಕರಣಗಳಿದ್ದು ರ್ನಾಟಕದಲ್ಲಿ ಪಲ್ಸ್ ಪೋಲಿಯೋ ಕರ್ಯಕ್ರಮದ ಮೂಲಕ ಪೋಲಿಯೋ ನರ್ಮೂಲನೆಗೆ ಪಣ ತೊಡಲಾಯಿತು.

2007ರಲ್ಲಿ ರ್ನಾಟಕದಲ್ಲಿ ಕೊನೆಯ ಪೋಲಿಯೋ ಪ್ರಕರಣ ವರದಿಯಾಗಿದೆ ಎಂದರು. ಡಿ. 22 ರಿಂದ 24ರವರೆಗೆ ಆರೋಗ್ಯ ಕರ್ಯರ್ತರು ಮನೆಗೆ ಬಂದು ಲಸಿಕೆ ಪಡೆದ ಬಗ್ಗೆ ಮಕ್ಕಳ ಪರಿಶೀಲನೆ ಮಡುವಾಗ ಸಹಕರಿಸಬೇಕು ಲಸಿಕೆ ಪಡೆದ ನಂತರ ಮಗುವಿನ ಎಡಗೈ ಕಿರು ಬೆರಳಿಗೆ ಅಳಿಸಲಾಗದ ಶಾಯಿಯಿಂದ ಗುರುತು ಹಾಕಲಾಗುತ್ತದೆ ಎಂದು ಹೇಳಿದರು. ಈ ಸಂರ್ಭದಲ್ಲಿ ಅಂಗನವಾಡಿ ಕರ್ಯರ್ತೆಯರಾದ ರಾಜುಮಾ,ರಾಜೇಶ್ವರಿ, ಆಶಾ ಕರ್ಯರ್ತೆ ಸಂಘದ ಅಧ್ಯಕ್ಷರಾದ ವಿಜಯಲಕ್ಷ್ಮಿ ಆಚರ್ಯ, ಸರಸ್ವತಿ ಸೆರಿದಂತೆ ಪಾಲಕರು ಮಕ್ಕಳು ಇದ್ದರು.

# ಪಿಯು ಫಲಿತಾಂಶ ಬಲವರ್ಧನೆ, ವೃತ್ತಿ ಮಾರ್ಗದರ್ಶನ ಕುರಿತು ಕಾರ್ಯಾಗಾರ



**ಸಿರವಾರ:** ತಾಲೂಕ ಪಂಚಾಯತ ಸಿರವಾರ ಇವರ ಸಂಯುಕ್ತಾಶ್ರಯದಲ್ಲಿ ತಾಲೂಕಿನ ಬಾಗಲವಾಡ ಗ್ರಾಮದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪಿಯು ಫಲಿತಾಂಶ ಬಲವರ್ಧನೆ ಹಾಗೂ ವೃತ್ತಿ ಮಾರ್ಗದರ್ಶನ ಕುರಿತು ಕಾರ್ಯಾಗಾರ ಹಮ್ಮಿಕೊಳ್ಳಲಾಯಿತು. ಎ.ಬಿ.ಎಫ್ ತಾಲೂಕ ಸಂಯೋಜಕರಾದ ಡಾ.ಜ್ಞಾನಸುಂದರಿ ಮಾತನಾಡಿ, ನೀತಿ ಆಯೋಗದ ಮಹತ್ವಾಕಾಂಕ್ಷೀ ಜಿಲ್ಲಾ ಮತ್ತು ತಾಲ್ಲೂಕ ಅಭಿವೃದ್ಧಿ ಕಾರ್ಯಕ್ರಮದ ಅಡಿಯಲ್ಲಿ ಗ್ರಾಮೀಣ ಭಾಗದಲ್ಲಿ ಪಿಯು ಫಲಿತಾಂಶ ಹೆಚ್ಚಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಯಲ್ಲಿ ಶೇ60 ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆಯುವ ಸೂಚಾಂಕಗಳ ಬಲವರ್ಧನೆಗಾಗಿ ಒತ್ತು ನೀಡಲು ಈ ಕಾರ್ಯಾಗಾರ ಆಯೋಜಿಸಲಾಗಿದೆ ಎಂದರು. ಎನ್. ಅರ್.ಎಲ್.ಎಂ ತಾಲೂಕ ವ್ಯವಸ್ಥಾಪಕ ಡಾ. ಶಿವರಾಜ್ ಮಾತನಾಡಿ, ಪಿಯು ನಂತರ ಲಭ್ಯವಿರುವ ಉತ್ತಮ ಕೋರ್ಸ್ಗಳ ಆಯ್ಕೆ, ಅವಧಿ, ಪ್ರತಿಯೊಬ್ಬರ ಜೀವನದಲ್ಲಿ ಶಿಕ್ಷಣದ ಪ್ರಾಮುಖ್ಯತೆ, ಗ್ರಾಮೀಣ ಭಾಗದಲ್ಲಿನ ವಿದ್ಯಾರ್ಥಿಗಳಿಗೆ ವೃತ್ತಿ ಜೀವನ ಕೌಶಲ್ಯ ಅಗತ್ಯತೆ, ಜೀವನದಲ್ಲಿ ಉತ್ತಮ ಉದ್ದೇಶ ಹಾಗೂ ಮಾನವೀಯತೆ ಮೈಗೂಡಿಸಿಕೊಳ್ಳುವ ಕೋರ್ಸುಗಳ ವೆಚ್ಚ ಫಲಿತಾಂಶ ಕೊರತೆಯ ವಿದ್ಯಾರ್ಥಿಗಳಿಗ ಜೀವನ ವೃದ್ಧಿಗಾಗಿ ಲಭ್ಯವಿರುವ ಕೌಶಲ್ಯಾಧಾರೀತ ತರಬೇತಿಗಳ ಮಾಹಿತಿ ಕುರಿತು ತಿಳಿಸಿದರು. ಕಾಲೇಜಿನ ಪ್ರಾಂಶುಪಾಲ ಕಸ್ತೂರೆಪ್ಪ ಶೆಟ್ಟಿ ಮಾತನಾಡಿ, ಮಕ್ಕಳಲ್ಲಿ ಶಿಕ್ಷಣ ಸಂವೃದ್ಧಿಯಲ್ಲಿ ಏಕಾಗ್ರತೆ, ಧೃಡನಿರ್ಧಾರ, ಸತತ ಪ್ರಯತ್ನ, ನಿರಂತರ ಅಭ್ಯಾಸ ಎಲ್ಲವೂ ಪ್ರಮುಖ ಮೆಟ್ಟಿಲುಗಳು ಎಂದರು. ಈ ಸಂದರ್ಭದಲ್ಲಿ ಗಂಗಮ್ಮ, ಪಂಪಮ್ಮ ಹಾಗೂ ಉಪನ್ಯಾಸಕ ಗುರುಬಸವ, ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪಟ್ಟದ್ದೇವರ ಬದುಕು ಬಸವತತ್ವ ಪ್ರಚಾರಕ್ಕೆ ಮುಡಿಪು

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**



ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ಅಪ್ಪಟ ಬಸವಣ್ಣನವರ ಅನುಯಾಯಿ ಆಗಿದ್ದರು. ತಮ್ಮ ಇಡೀ ಬದುಕು ಬಸವತತ್ವ ಪ್ರಚಾರ ಪ್ರಸಾರಕ್ಕೆ ಮುಡಿಪಾಗಿಟ್ಟಿದ್ದರು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು. ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಸೋಮವಾರ ಆಯೋಜಿಸಿದ್ದ ಡಾ.ಚನ್ನಬಸವ ಪಟ್ಟದ್ದೇವರ 136ನೆಯ ಜಯಂತ್ಯುತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪೂಜ್ಯರು ಅಪಾರ ದೂರದೃಷ್ಟಿ ಉಳ್ಳುವರಾಗಿದ್ದರು. ಗಡಿಭಾಗದ ಸಮಗ್ರ ಅಭಿವೃದ್ಧಿಗೆ ಶಿಕ್ಷಣ ಪ್ರಮುಖ ಅಸ್ತ್ರವೆಂದ ಅರಿತು 1936ರಲ್ಲಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಆರಂಭಿಸಿ ಈ ಭಾಗದ ಅಭಿವೃದ್ಧಿಗೆ ನಾಂದಿ ಹಾಡಿದ್ದರು. ಪೂಜ್ಯರ ಸೇವೆ ಕೇವಲ ಬಸವತತ್ವ ಪ್ರಚಾರ ಪ್ರಸಾರಕ್ಕೆ ಸೀಮಿತ ಆಗಿರದೇ ಗಡಿಭಾಗವನ್ನು ಕನ್ನಡ ನೆಲದಲ್ಲಿ ಉಳಿಸಲು ಹೋರಾಟ ನಡೆಸಿದರು.

ಅವರ ನಡೆ–ನುಡಿ ಒಂದೆ ಆಗಿತ್ತು. ಮಾತಿನ ಸದ್ದು ದೂರ ಕೇಳಿಸುತ್ತದೆ, ಕೆಲಸದ ಸದ್ದು ಅದಕ್ಕಿಂತಲೂ ದೂರ ಕೇಳಿಸುತ್ತದೆ. ಹಾಗಾಗಿ ಪೂಜ್ಯರು ಮಾತಿನ ಸ್ವಾಮೀಜಿ ಆಗಿರದೇ ಕೆಲಸದ ಸ್ವಾಮೀಜಿ ಆಗಿದ್ದರು. ಅಂತಹ ಪೂಜ್ಯರು ನಮಗೆ ಸಿಕ್ಕಿರುವುದು ನಮ್ಮೆಲ್ಲರ ಸೌಭಾಗ್ಯ ಅವರ ವಿಚಾರಧಾರೆ ಎಲ್ಲರೂ ಅನುಸರಿಸಿ ಭವ್ಯ, ಸುಂದರ ಬದುಕು ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಮಾಜಿ ಶಾಸಕ ಪ್ರಕಾಶ ಖಂಡ್ರೆ ಮಾತನಾಡಿ, ಡಾ.ಚನ್ನಬಸವ ಪಟ್ಟದ್ದೇವರು ಬದುಕು ನಮ್ಮೆಲ್ಲರಿಗೂ ಆದರ್ಶಪ್ರಾಯವಾಗಿದೆ. ಪೂಜ್ಯರು ಧಾರ್ಮಿಕ, ಶೈಕ್ಷಣಿಕ, ಸಾಮಾಜಿಕ ಕ್ಷೇತ್ರಗಳಲ್ಲಿ ಸಲ್ಲಿಸಿದ ಸೇವೆ ಅನುಪಮವಾಗಿದೆ ಎಂದು ತಿಳಿಸಿದರು. ಭಾರತೀಯ ಬಸವ ಬಳಗದ ರಾಜ್ಯಾಧ್ಯಕ್ಷ ಬಾಬು ವಾಲಿ ಬಸವ ಗುರುವಿನ ಪೂಜೆ ನೆರವೇರಿಸಿದರು.

ನೇತೃತ್ವ ವಹಿಸಿದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿದರು. ಬಸವಲಿಂಗ ಸ್ವಾಮೀಜಿ, ಶಿವಯೋಗೀಶ್ವರ ಸ್ವಾಮೀಜಿ, ಚನ್ನವೀರ ಸ್ವಾಮೀಜಿ, ಶಿವಪ್ರಸಾದ ಸ್ವಾಮೀಜಿ ನೇತೃತ್ವ ವಹಿಸಿದ್ದರು. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸಾನ್ನಿಧ್ಯ ವಹಿಸಿದ್ದರು. ಶರಣಬಸವ ಸ್ವಾಮೀಜಿ ಅನುಭಾವ ನೀಡಿದರು. ಈ ಸಂದರ್ಭದಲ್ಲಿ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ ಮಾಜಿ ಅಧ್ಯಕ್ಷ ಡಿ.ಕೆ.ಸಿದ್ರಾಮ, ಹಿರಿಯ ನ್ಯಾಯವಾದಿ ರಾಜಶೇಖರ ಅಷ್ಟೂರೆ, ಬೀದರ್ ಲೋಕೋಪಯೋಗಿ ಇಲಾಖೆಯ ಇಇ ಶಿವಶಂಕರ ಕಾಮಶೆಟ್ಟಿ, ಕರ್ನಾಟಕ ರಾಜ್ಯ ಮಹಿಳಾ ಮಂಡಳದ ಅಧ್ಯಕ್ಷೆ ಶಕುಂತಲಾ ಬೆಲ್ದಾಳೆ, ನೀಲಮ್ಮ ವಿಕೆ ಪಾಟೀಲ್, ಯುವ ಮುಖಂಡರಾದ ರವಿ ಮೀಸೆ, ಪ್ರಕಾಶ ಟೊಣ್ಣೆ, ಬಂಡೆಪ್ಪ ಕಂಟೆ, ಪ್ರಕಾಶ ಘೂಳೆ, ಭಾರತೀಯ ಬಸವ ಬಳಗದ ಜಿಲ್ಲಾಧ್ಯಕ್ಷ ಡಾ.ಸಂಜುಕುಮಾರ ಜುಮ್ಮಾ ಸೇರಿದಂತೆ ಹಲವರು ಇದ್ದರು. ಹಾಸ್ಯ ಕಲಾವಿದ ನವಲಿಂಗ ಪಾಟೀಲ್ ನಿರೂಪಿಸಿ, ವಂದಿಸಿದರು.

**ಗ್ರಂಥ ಲೋಕಾರ್ಪಣೆ :–** ಸಾಹಿತಿ ಸುನಿತಾ ದಾಡಗೆ(ಗೌಡರ) ಬರೆದ ಕನ್ನಡದ ನಂದಾದೀಪ, ಚನ್ನಬಸವೇಶ್ವರ ಗುರುಕುಲ ಸಮುಚ್ಛಯದ ಅಧೀಕ್ಷಕ, ಸಾಹಿತಿ ಗಣಪತಿ ಭೂರೆ ಅವರು ಬರೆದ ಅಕ್ಷರಲೋಕದ ನಕ್ಷತ್ರಗ್ರಂಥ ಬಿಡುಗಡೆಗೊಂಡವು. ಜತೆಗೆ ಗುರುಪ್ರಸಾದ ಚಂದ್ರಶೇಖರ ನಿರ್ದೇಶನದಲ್ಲಿ ಹೊರತಂದ ದೇವರ ಹೆಸರಿನಲ್ಲಿ ಪ್ರಮಾಣ ಮಾಡುತ್ತೇನೆ ಎಂಬ ಕಿರುಚಿತ್ರ ಬಿಡುಗಡೆಗೊಂಡಿತು. ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆ ಮಾಜಿ ಅಧ್ಯಕ್ಷ ಡಿ.ಕೆ.ಸಿದ್ರಾಮ ಪುಸ್ತಕ ಬಿಡುಗಡೆಗೊಳಿಸಿದರು.

**ವಿಶೇಷಸನ್ಮಾನ:–** ಕಲಬುರಗಿ ಲೋಕೋಪಯೋಗಿ ಇಲಾಖೆಯ ಮುಖ್ಯ ಅಭಿಯಂತರ ಶರಣಪ್ಪ ಸುಲಗುಂಟೆ, ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷ ಶರಣಪ್ಪ ಸಲಾದಪುರ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ, ವಿದ್ಯುತ್ ಮಂಡಳ ಎಂಜನಿಯರ್‌ಗಳ ಸಂಘದ ಶಾಶ್ವತ ನಿರ್ದೇಶಿತ ಸದಸ್ಯ ವೀರಭದ್ರಪ್ಪ, ವಿದ್ಯುತ್ ಮಂಡಳ ಎಂಜನಿಯರ್‌ಗಳ ಸಂಘದ ಉಪಾಧ್ಯಕ್ಷ ಸಚಿನ ಜಿ.ಹೆಚ್, ಕೇಂದ್ರ ಸಮಿತಿ ಸದಸ್ಯ ರಮೇಶ ಪಾಟೀಲ್, ವಿದ್ಯುತ್ ಪ್ರಸರಣ ನಿಗಮ ನೌಕರರ ಸಂಘದ ಸದಸ್ಯ ಮಹೇಶ ಘಾಳೆ ಮತ್ತು ಗುರುಪ್ರಸಾದ ಚಂದ್ರಶೇಖರ ಅವರನ್ನು ಶ್ರೀಮಠದ ಪರವಾಗಿ ವಿಶೇಷವಾಗಿ ಸನ್ಮಾನಿಸಲಾಯಿತು.

## ಕಾಯಕ ಪ್ರಶಸ್ತಿ ಪ್ರದಾನ

ಬಸವಕಲ್ಯಾಣ ವಿಶ್ವಬಸವಧರ್ಮ ಟ್ರಸ್ಟ್ ಅನುಭವ ಮಂಟಪದ ಕಾರ್ಯದರ್ಶಿ ಡಾ.ಎಸ್.ಬಿ.ದುರ್ಗೆ ಅವರಿಗೆ 2025ನೇ ಸಾಲಿನ ಡಾ.ಚನ್ನಬಸವ ಪಟ್ಟದ್ದೇವರು ಕಾಯಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಪ್ರಶಸ್ತಿ ದಾಸೋಹಿ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ ಮಾಜಿ ಅಧ್ಯಕ್ಷ ಡಿ.ಕೆ.ಸಿದ್ರಾಮ ಪ್ರಶಸ್ತಿ ಪ್ರದಾನ ಮಾಡಿದರು.

# ಬಹಳ ವಿಜೃಂಭಣೆಯ ರಜತ ಮಹೋತ್ಸವ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**



ರಾಜರಾಜೇಶ್ವರಿ ನಗರದಲ್ಲಿರುವ ಶ್ರೀ ಜ್ಞಾನಾಕ್ಷಿ ವಿದ್ಯಾನಿಕೇತನ ಶಾಲೆಯು ದಿನಾಂಕ 21 ಡಿಸೆಂಬರ್ 2025ರಂದು ರಜತ ಮಹೋತ್ಸವವನ್ನು ಬಹಳ ವಿಜೃಂಭಣೆಯಿಂದ ಆಚರಿಸಿತು. ಪರಮ ಪೂಜ್ಯ ಶ್ರೀ ಶ್ರೀ ಶ್ರೀ ತಿರುಚಿ ಮಹಾಸ್ವಾಮೀಜಿಯವರ ಪರಮಾನು ಗ್ರಹದಿಂದ ಪ್ರಾರಂಭವಾದ ಈ ಶಾಲೆಯು ಭಾರತೀಯ ಸಂಸ್ಕೃತಿ ಮತ್ತು ಸನಾತನ ಧರ್ಮದ ಮೌಲ್ಯಧಾರಿತ ಶಿಕ್ಷಣವನ್ನು ಯಾವುದೇ ರೀತಿಯ ಭೇದಭಾವವಿಲ್ಲದೆ ಸರ್ವರಿಗೂ ಶಿಕ್ಷಣ ಎಂಬ ಧ್ಯೇಯದೊಂದಿಗೆ ನೀಡುತ್ತಾ ಬಂದಿದೆ. ರಜತ ಮಹೋತ್ಸವದ ಅಂಗವಾಗಿ ಆಯೋಜಿಸಲಾದ ಭವ್ಯ ಸಮಾರಂಭದ ವೇದಿಕೆಯನ್ನು ಅಲಂಕರಿಸಿದ

ಎಲ್ಲಾಗಣ್ಯರು ಸಂವಾದ ಕಾರ್ಯಕ್ರಮದ ಮೂಲಕ ಮಕ್ಕಳ ಪ್ರಶ್ನೆಗಳಿಗೆ ಬಹಳ ಅರ್ಥಪೂರ್ಣವಾಗಿ ಉತ್ತರಿಸಿದರು. ಕರ್ನಾಟಕ ರಾಜ್ಯದ ಮಹಿಳಾ ಅಯೋಗ್ಯದ ಅಧ್ಯಕ್ಷೆಯಾದ ಡಾ. ನಾಗಲಕ್ಷ್ಮಿ ಚೌದರಿಯವರು ಮಕ್ಕಳು ತಾವು ಅಂದುಕೊಂಡಿದ್ದನ್ನು ಸಾಧಿಸಲು ಶ್ರದ್ಧೆ ಮತ್ತು ಶ್ರಮ ವಹಿಸಬೇಕು. ಹೆಣ್ಣು ಮಕ್ಕಳು ರಾಜಕೀಯಕ್ಕೆ ಬರಬೇಕು ಇಲ್ಲದಿದ್ದರೂ ರಾಜಕೀಯವನ್ನು ಚೆನ್ನಾಗಿ ಅರಿಯಬೇಕು ಎಂದು ಹೇಳಿದರು. ಇಸ್ರೋ ಡೆಪ್ಯೂಟಿ ಡೈರೆಕ್ಟರ್ ಡಾ. ಎಸ್ ವೆಂಕಟೇಶ್ವರ ಶರ್ಮ ರವರು ವಿಜ್ಞಾನ ಮತ್ತು ಆಧ್ಯಾತ್ಮ ಎರಡು ಜೊತೆ ಜೊತೆಯಲ್ಲಿ ಸಾಗಬೇಕು ವಿದ್ಯಾರ್ಥಿಗಳ ಕೈಯಲ್ಲಿ ಒಂದು ಮಿನಿ ಸ್ಯಾಟಲೈಟ್ ಮಾಡಿಸುವಲ್ಲಿ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

# ವಿಜಯಲಕ್ಷ್ಮಿ ನಿವಾಸದ ಲೋಕಾ ದಾಳಿ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**



ಭ್ರಷ್ಟ ಅಧಿಕಾರಿಗಳ ಮನೆಯ ಮೇಲೆ ಲೋಕಾಯುಕ್ತ ಮಂಗಳವಾರ ಬೆಳ್ಳಂ ಬೆಳಿಗ್ಗೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಏಕಕಾಲಕ್ಕೆ ಮಿಂಚಿನ ದಾಳಿ ನಡೆಸಿದೆ.

ಜಿಲ್ಲೆಯ ಸಿಂಧನೂರು ಉಪ ವಿಭಾಗದ ಗ್ರಾಮೀಣ ಕುಡಿಯುವ ಸರಬರಾಜು ಇಲಾಖೆಯ ಎಇಇಡಿ.ವಿಜಯಲಕ್ಷ್ಮಿ ಮನೆ ಸೇರಿದಂತೆ ಐದು ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಆದಾಯಕ್ಕಿಂತ ಅಧಿಕ ಆಸ್ತಿ ಸಂಪಾದನೆ ದೂರಿನ ಮೇರೆಗೆ ದಾಳಿ ಮಾಡಲಾಗಿದೆ. ನಗರದ ಐಡಿಎಸ್‌ಂಟಿ ಲೇಔಟ್ ನ ನಾಲ್ಕಂತಸ್ತಿನ ಮನೆ ಮತ್ತು ಪಕ್ಕದಲ್ಲೆ ಇರುವ ಇನ್ನೊಂದು ಮನೆಯಲ್ಲಿ ದಾಖಲೆಗಳ ಶೋಧ ಕರ್ಯ ನಡೆಸಲಾಗುತ್ತಿದೆ. ಅದರ ಜತೆಗೆ ಸಿಂಧನೂರು ಕಚೇರಿ, ಯಾದಗಿರಿ ತೋಟದ ಮನೆ, ಜೋಳದಡಗಿತೆಯಲ್ಲಿರುವ ಅವರ ತಂಗಿ ಮನೆ ಮೇಲೆಯೂ ದಾಳಿ ನಡೆಸಲಾಗಿದೆ. ಯಾದಗಿರಿಯಲ್ಲಿ 30 ಎಕರೆ ಜಮೀನು, ಯಾದಗಿರಿಯಲ್ಲಿ ಲೆಔಟ್ ಗಳು, ಚಂದ್ರಬಂಡಾ ಬಳಿ ಜಮೀನು ಸೇರಿದಂತೆ ಸಾಕಷ್ಟು ಕಡೆ ಆಸ್ತಿ ಸಂಪಾದನೆ ಮಾಡಿರುವ ಮಾಹಿತಿಗಳು ಲಭ್ಯವಾಗಿದೆ. ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆ ಲೋಕಾಯುಕ್ತ ಪೊಲೀಸರು ಐದು ತಂಡಗಳಾಗಿ ದಾಳಿ ತಂಡ ಮಾಡಿದ್ದಾರೆ. ಇನ್ನೂ ಒಂದೂವರೆ ರ್ಷ ಸೇವಾವಧಿ ಬಾಕಿ ಇತ್ತು. ಸಿಂಧನೂರಿನಲ್ಲಿಯೇ ಹೆಚ್ಚು ಕಾಲ ಸೇವೆ ಸಲ್ಲಿಸಿದ್ದರು. ರಾಯಚೂರು, ಬಾಗಲಕೋಟೆ, ವಿಜಯಪುರ ಹಾಗೂ ಉತ್ತರ ಕನ್ನಡ ಸೇರಿದಂತೆ ಹತ್ತಕ್ಕೂ ಹೆಚ್ಚು ಸ್ಥಳಗಳಲ್ಲಿ ಅಧಿಕಾರಿಗಳು ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ

# 96 ದಿನಕ್ಕೆ ಕಾಲಿಟ್ಟ ಸರಕಾರಿ ವೈದ್ಯಕೀಯ ಕಾಲೇಜು ಹೋರಾಟ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**




96 ದಿನಕ್ಕೆ ಕಾಲಿಟ್ಟ ಸರಕಾರಿ ವೈದ್ಯಕೀಯ ಕಾಲೇಜು ಹೋರಾಟ ಸಮಿತಿಯಿಂದ ನಡೆಯುತ್ತಿರುವ ಅನಿರ್ಧಿಷ್ಟ ಧರಣಿಗೆ ಆಗಮಿಸಿದ ಶಾಸಕರು, ವಿಧಾನ ಪರಿಷತ್ ಸದಸ್ಯರಾದ ಹಣಮಂತ ನಿರಾಣಿಯವರು ಮಾತನಾಡುತ್ತಾ ವೈದ್ಯಕೀಯ ಕಾಲೇಜಿಗಾಗಿ ನಡೆಯುತ್ತಿರುವ ಈ ಹೋರಾಟ ನಮ್ಮ ಗಮನಕ್ಕೆ ತುಂಬಾ ತಡವಾಗಿ ಬಂದಿತು.

ಆರ್ಥಿಕವಾಗಿ ಹಿಂದುಳಿದವರಿಗಾಗಿ, ಜನಸಾಮಾನ್ಯರಿಗಾಗಿ ನೀವು ಹಗಲು ರಾತ್ರಿ ಎನ್ನದೇ ಹೋರಾಟ ಮಾಡುತ್ತಿದ್ದೀರಿ, ಉತ್ತರ ಕರ್ನಾಟಕದ ಕುರಿತು ಮಾತನಾಡುವ ಸಂದರ್ಭದಲ್ಲಿ ಚಳಿಗಾಲದ ಅಧಿವೇಶನದಲ್ಲಿ ಸದನದಲ್ಲಿ ಮೊದಲು ಧ್ವನಿ ಎತ್ತಿದ್ದೀನಿ. ಉತ್ತರ ಕರ್ನಾಟಕದಲ್ಲಿ ಒಟ್ಟು 182 ಕಾಲೇಜುಗಳು ವೈದ್ಯಕೀಯ ಶಿಕ್ಷಕ್ಕೆ ಸಂಬಂದಿಸಿದಂತೆ ಇವೆ. ಜಿಲ್ಲೆಯಲ್ಲಿ 25 ಲಕ್ಷ ಜನಸಂಖ್ಯೆ ಇದೆ ಅದಕ್ಕಾಗಿ ಸರಕಾರಿ ವೈದ್ಯಕೀಯ ಕಾಲೇಜು ಆರಂಭವಾದರೆ ಬಡಮಕ್ಕಳು ಉನ್ನತ ಶಿಕ್ಷಣ ಕಲಿಯಲು ಸಹಾಯವಾಗುತ್ತದೆ ಎಂದು ಹೇಳಿದರು.

ನಾವು ಭಾವನಾತ್ಮಕವಾಗಿ ಯಾವಾಗಲೂ ಜೋರಾಟದ ಜೊತೆ ಇರುತ್ತೇವೆ ಎಂದು ಹೇಳಿದರು. ಇನ್ನೋರ್ವ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್ ರವಿಕುಮಾರ್ ರವರು ಮಾತನಾಡುತ್ತಾ ಉತ್ತರ ಕರ್ನಾಟಕದ ಪ್ರತಿಯೊಂದು ಜಿಲ್ಲೆಗೆ ಸರಕಾರಿ ವೈದ್ಯಕೀಯ ಕಾಲೇಜು ಬೇಕು. ದಕ್ಷಿಣ ಕರ್ನಾಟಕದ ಜಿಲ್ಲೆಗಳಿಗಿಂತ ಉತ್ತರ ಕರ್ನಾಟಕದ ಜಿಲ್ಲೆಗೆ ವೈದ್ಯಕೀಯ ಕಾಲೇಜು ಬೇಕು.100 ಕ್ಕೆ ನೂರು ವಿಜಯಪುರ ಜಿಲ್ಲೆಗೆ ಸರಕಾರಿ ವೈದ್ಯಕೀಯ ಕಾಲೇಜು ಆರಂಭವಾಗುತ್ತದೆ. ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಜಿಲ್ಲೆ ನಮ್ಮ ವಿಜಯಪುರ. ಬೇರೆ ಬೇರೆ ಜಿಲ್ಲೆಗಳಲ್ಲಿ ಇಷ್ಟೊಂದು ಜಾಗ ಇಲ್ಲ. ಜಾಗ ಕೊಂಡುಕೊಳ್ಳುವ ಅವಶ್ಯಕತೆ ಇಲ್ಲ. ಸುಸಜ್ಜಿತವಾದ ಆಸ್ಪತ್ರೆ ಇದೆ. ಮೆಡಿಕಲ್‌ಕಾಲೇಜ್ ಘೋಷಣೆಮಾಡುವ ಎಲ್ಲಾ ಅವಕಾಶಗಳು ಇಲ್ಲಿದೆ ಇನ್ನೇನು ಬೇಕು. ಸರಕಾರ ಈಗಾಗಲೇ ಹಣ ಕೊಟ್ಟಿದೆ ಆದರೆ ಇದಕ್ಕೆ ಯಾರೋ ಅಡ್ಡಿಯಾಗಿರಬೇಕು.ಎರಡು ಬಾರಿ ರಾಜ್ಯಮಟ್ಟದ ಪ್ರಶಸ್ತಿ ದೊರಕಿದೆ. ಮಲ್ಟಿಸ್ಪೇಶಾಲಿಟಿ ಮಾಡಲು 53 ಕೋಟಿ ನೀಡಿದೆ. ವೈಜ್ಞಾನಿಕವಾಗಿ ಹೇಳುವುದಾದರೆ ಬಡ ವಿದ್ಯಾರ್ಥಿಗಳು ಕೂಡ ವೈದ್ಯಕೀಯ ಶಿಕ್ಷಣ ಕಲಿಯಬಹುದು, ವಿಜಯಪುರ ಜಿಲ್ಲೆಯ ಮಕ್ಕಳಿಗೆ ಡಾಕ್ಟರ್ ಆಗುವ ಅವಕಾಶ ಸಿಗುತ್ತದೆ. ಯಾವುದೇ ಕಾರಣಕ್ಕೂ ಖಾಸಗಿಯವರಿಗೆ ಕೊಡಬಾರದು ಎಂದು ಹೇಳಿದರು.

ಮುಂದೊಂದು ದಿನ ದೊಡ್ಡವರ ಪಾಲಗುವ ಸ್ಥಿತಿ ನಮ್ಮ ಜಿಲ್ಲೆಗೆ ಬರುತ್ತದೆ. ನಮ್ಮ ವಕೀಲರ ಸಂಘದಿಂದ ಸಂಪೂರ್ಣ ಬೆಂಬಲ ನೀಡುತ್ತೇವೆ ಎಂದು ಹೇಳಿದರು.ಸುರೇಶ್ ಬಿರಾದರ ರವರು ಮಾತನಾಡುತ್ತಾ ಈಗಾಗಲೇ ದಿನಗಳಿಂದ ಈ ಹೋರಾಟ ನಡೆಯುತ್ತಿದೆ. ಬಡವರ ಸಲುವಾಗಿ ಈ ಹೋರಾಟ ನಡೆಯುತ್ತಿದೆ. ಸರಕಾರ ವಿಜಯಪುರ ಜಿಲ್ಲೆಗೆ ಈಗ ವೈದ್ಯಕೀಯ ಕಾಲೇಜು ಮಂಜೂರಾಗಿದೆ. ಆದರೆ ಕಾಂಗ್ರೆಸ್ ಸರಕಾರ ಸುಳ್ಳು ಆಶ್ವಾಸನೆಗಳನ್ನು ನೀಡುತ್ತಿದೆ. 150 ಎಕರೆ ಜಾಗವನ್ನು ಹೊಂದಿರುವ ಜಿಲ್ಲೆ ನಮ್ಮದಾಗಿದೆ. ನಾವು ಯಾವಾಗಲೂ ಹೋರಾಟ ಮಾಡುತ್ತಲೆ ಬಂದಿವಿ. ಸರಕಾರಿ ಆಸ್ಪತ್ರೆಯಲ್ಲಿ ಡಾ–ಕ್ಟರ್ ಹಾಗೂ ನರ್ಸಗಳ ಕೊರತೆ ಇದೆ ಸಿಬ್ಬಂದಿಗಳ ಕೊರತೆ. ಇದೆಲ್ಲಾ ಹೋಗಲಾಡಿಸಬೇಕೆಂದರೆ ಸರಕಾರಿ ವೈದ್ಯಕೀಯ ಕಾಲೇಜು ಆಗಬೇಕು ಎಲ್ಲರಿಗೂ ಉದ್ಯೋಗ ದೊರೆತಂತೆ ಆಗುತ್ತದೆ. ವಿದ್ಯಾರ್ಥಿಗಳಿಗೆ ಕಡಿಮೆ ಶುಲ್ಕದಲ್ಲಿ ವೈದ್ಯಕೀಯ ಶಿಕ್ಷಣ ಕಲಿಯುತ್ತಾರೆ, ಇಲ್ಲಿರುವ ಅಧಿಕಾತಿಗಳು ಹೊಂದಾಣಿಕೆ ರಾಜ ಕಾರಣವನ್ನು ಇಲ್ಲಿ ಮಾಡುತ್ತಿದ್ದಾರೆ ಎಂದು ಹೇಳಿದರು. ಗುರಲಿಂಗಪ್ಪ ಅಂಗಡಿ,ಉಮೇಶ್ ಕಾರಜೋಳ ಮುಂತಾದವರು ಭಾಗವಹಿಸಿದ್ದರು.

# ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**



ಕಲಬುರಗಿ ವಿಭಾಗದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್. ಆರ್.ಮೆಹರೋಜ್ ಖಾನ್ ಅವರು ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಡಿ.22ರಂದು ನಡೆಯಿತು.

ಇದೆವೇಳೆ ಮಾತನಾಡಿದ ಎಸ್.ಆರ್.ಮೆಹರೋಜ್ ಖಾನ್ ಅವರು, ಗೃಹಲಕ್ಷ್ಮಿ ಯೋಜನೆಯ ಫಲಾನುಭಗಳಿಗೆ ಸಕಾಲಕ್ಕೆ ಸಹಾಯಧನ ಸಿಗಬೇಕು ಎನ್ನುವ ಸಲಹೆ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಗಮನ ಹರಿಸಬೇಕು. ತಾಂತ್ರಿಕ ತೊಂದರೆಗಳನ್ನು ಬೇಗನೆ ಸರಿಪಡಿಸಬೇಕು ಎಂದು ಸೂಚನೆ ನೀಡಿದರು.

ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ ಹಾಗೂ ಯುವನಿಧಿ ಯೋಜನೆಗಳ ಪ್ರಗತಿಯ ಬಗ್ಗೆ ಇದೆ ವೇಳೆ ಎಸ್.ಆರ್.ಮೆಹರೋಜ್ ಖಾನ್ ಅವರು ಪರಿಶೀಲಿಸಿದರು. ಆಯಾ ಇಲಾಖೆಗಳ ಅಧಿಕಾರಿಗಳು ಸಭೆಗೆ ಅಂಕಿ–ಅಂಶಗಳ ಮಾಹಿತಿ ನೀಡಿದರು. ಜಿಲ್ಲೆಯಲ್ಲಿ ಸಾರ್ವಜನಿಕ ವಿತರಣಾ ಪದ್ಧತಿಯಡಿ 737 ನ್ಯಾಯಬೆಲೆ ಅಂಗಡಿಗಳು ಪಗತಿಯಲ್ಲಿವೆ. ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ರಾಯಚೂರು ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 21 ಕೆ.ಜಿ ಜೋಳ ಮತ್ತು 14 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 03 ಕೆ.ಜಿ ಜೋಳ ಮತ್ತು 02 ಕೆ.ಜಿ ಸಾರವರ್ಧಿತ ಅಕ್ಕಿ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಅಂತ್ಯೋದಯ(ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುತ್ತಿದೆ ಎಂದು ಆಹಾರ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಗೆ ಅನುಕೂಲವಾಗಲು, ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಮಾರ್ಗಗಳನ್ನು ಹೊಂದಾಣಿಕೆ ಮಾಡುವ ಪ್ರಯತ್ನ ನಡೆಯುತ್ತಿದೆ. ಆದಾಗ್ಯೂ ಜಿಲ್ಲೆಯಲ್ಲಿ ಹೆಚ್ಚಿನ ಸೇವೆ ನೀಡಲು ಸಾರಿಗೆ ಬಸ್‌ಗಳ ಅವಶ್ಯಕತೆಯಿದೆ ಎಂದು ಶಕ್ತಿ ಯೋಜನೆಯ ಅನುಷ್ಠಾನಾಧಿಕಾರಿಗಳಾದ ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಾಣಾಧಿಕಾರಿಗಳು ಸಭೆಗೆ ಕೋರಿದರು.

ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,52,582 ಗ್ರಾಹಕರ ಮನೆಗಳಿಗೆ ಉಚಿತ ವಿದ್ಯುತ್ ಸೌಲಭ್ಯ ಒದಗಿಸಲಾಗಿದೆ ಎಂದು ಜೆಸ್ಕಾಂ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ರಾಯಚೂರು ಜಿಲ್ಲೆಯಲ್ಲಿ 1,58,435 ನಿರುದ್ಯೋಗಿ ಯುವಕರು ಯುವನಿಧಿ ಯೋಜನೆಯ ಲಾಭ ಪಡೆದುಕೊಳ್ಳುತ್ತಿದ್ದಾರೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಸಮಿತಿಯ ಉಪಾಧ್ಯಕ್ಷರಾದ ನಾಗೇಂದ್ರಪ್ಪ ಮಠಮಾರಿ, ಗಫೂರ್ ಖಾನ್, ಹನುಮಂತಪ್ಪ ಜಾಲಿಬೆಂಚಿ, ಶೇಖರಗೌಡ ತುರುವಿಹಾಳ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ್, ವಿವಿಧ ಗ್ಯಾರಂಟಿ ಯೋಜನೆಗಳ ಅನುಷ್ಠಾನಾಧಿಕಾರಿಗಳಾದ ನವೀನ್‌ಕುಮಾರ್, ಎಂ.ಎಸ್.ಚಂದ್ರಶೇಖರ, ನಜೀರ್ ಅಹ್ಮದ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)